ಸಂಪುಟ: 13 Volume | ಸಂಚಿಕೆ: 361 Issue | ಪುಟಗಳು 08 Pages | ಶನಿವಾರ 28 ಮಾರ್ಚ್ 2026 | ₹6 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ಬಾಳು ಇರುವುದು
ಬದುಕುವುದಕ್ಕಾಗಿ;
ಬದುಕಿನಿಂದ
ಬೆಳೆಯುವುದಕ್ಕಾಗಿ.
–ಶಿವರಾಮ ಕಾರಂತ.

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ | ಪ್ರಧಾನ ಸಂಪಾದಕರು: ಮಾಣಿಕರೆಡ್ಡಿ, ಕೌಡಾಳೆ

ಶ್ರೀರಾಮ ನವಮಿ, ವಿಶೇಷ ಪೂಜೆ, ಕಲ್ಯಾಣೋತ್ಸವ 6 | ಯಲ್ಲಾಲಿಂಗರ ವೈಭವದ ಪಲ್ಲಕ್ಕಿ ಉತ್ಸವ 7 | ಕೇಂದ್ರ ಸರ್ಕಾರದಿಂದ ಪಿಕ್ ಪಾಕೆಟ್ 8



ಕೇರಳ ಚುನಾವಣೆ ಪ್ರಚಾರ ದಲ್ಲಿರುವ ಸಚಿವ ಜಮೀರ್ ಅಹಮದ್ ಖಾನ್ ಅವರು ಕ್ಯಾಲಿ ಕಟ್ ನಲ್ಲಿ ಮರ್ಕಜ್ ಗೆ ಭೇಟಿ ನೀಡಿ ಎ ಪಿ ಉಸ್ತಾದ್ ಅವರ ಜತೆ ಸಮಾಲೋಚನೆ ನಡೆಸಿದರು. ಮೌಲಾನಾ ಶಾಫಿ ಸಾದಿ ಉಪಸ್ಥಿತರಿದ್ದರು.

## ಹುಲಿ ಸಾವು: ತನಿಖೆಗೆ ಸೂಚನೆ



**ಬೆಂಗಳೂರು:** ನಾಗರಹೊಳೆ ಕಾಡಿನ ಮೇಟಿಕುಪ್ಪೆ ವಲಯದ ಅರಣ್ಯದ ಗಡಿಯಿಂದ 300 ಮೀಟರ್ ದೂರದ ಜಮೀನಿನಲ್ಲಿ ಅಕ್ರಮವಾಗಿ ಅಳವಡಿಸಿದ್ದ ಉರುಳಿಗೆ 3 ವರ್ಷದ ಹುಲಿ ಬಲಿಯಾಗಿರುವ ಬಗ್ಗೆ ಸಚಿವ ಈಶ್ವರ ಬಿ ಖಂಡ್ರೆ ದುಃಖ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ನೇತೃತ್ವದ ತಂಡದಿಂದ ತನಿಖೆ ಮಾಡಿಸಿ, ಸಿಬ್ಬಂದಿ ಗಸ್ತು ಕಾರ್ಯದಲ್ಲಿ ಲೋಪ ಎಸಗಿದಗದಲ್ಲಿ ಕ್ರಮ ಕೈಗೊಳ್ಳಲು ಮತ್ತು ಉರುಳು ಹಾಕಿದವರ ವಿರುದ್ಧ ಕಾನೂನು ರೀತ್ಯ ಕ್ರಮ ಜರುಗಿಸಲು, ಕಾಡಿನಂಚಿನ ಜಮೀನುಗಳಲ್ಲಿ ಉರುಳು ತೆರವಿಗೆ ಕ್ರಮ ವಹಿಸಲು ಸೂಚಿಸಿದ್ದಾರೆ.

## ಕಲ್ಬುರ್ಗಿ ಮೂಲದ ಯುವಕ ಸಜೀವ ದಹನ

**ಬೆಂಗಳೂರು:** ನಿಯಂತ್ರಣ ತಪ್ಪಿ ಲಾರಿಯೊಂದು ಪ್ರಯಾಣಿಕನಿಗಾಗಿ ಕಾಯುತ್ತಿದ್ದ ಕಾರಿಗೆ ಡಿಕ್ಕಿ ಹೊಡೆದಿದ್ದು, ಘಟನೆಯಲ್ಲಿ ಯುವಕನೊಬ್ಬ ನಗರದ ಕುರುಬರಹಳ್ಳಿ ಪ್ರದೇಶದಲ್ಲಿ ಮೃತಪಟ್ಟಿದ್ದಾನೆ. ಕಲಬುರಗಿ ಮೂಲದ ಅಂಬದಾಸ್ (23) ಎಂಬಾತ ಬೆಂಕಿಯಲ್ಲಿ ಸಿಲುಕಿ ದಾರುಣವಾಗಿ ಅಂತ್ಯಗೊಂಡಿದ್ದಾನೆ. ಆಂಧ್ರ ಪ್ರದೇಶದಿಂದ ಸುಂಕದಕಟ್ಟೆ ಕಡೆಗೆ ಕಬ್ಬಿಣ ತುಂಬಿಕೊಂಡು ಬರುತ್ತಿದ್ದ ಲಾರಿ, ಗೂಗಲ್ ಮ್ಯಾಪ್ ಮಾರ್ಗದರ್ಶನದಂತೆ ಕುರುಬರಹಳ್ಳಿ ಮಾರ್ಗವಾಗಿ ಸಾಗುತ್ತಿತ್ತು. ಆದರೆ, ಈ ಮಾರ್ಗದಲ್ಲಿ ಇಳಿಜಾರು ರಸ್ತೆ ಇರುವುದರಿಂದ, ಈಗಾಗಲೇ ಓವರ್‌ಲೋಡ್ ಆಗಿದ್ದ ಲಾರಿ ನಿಯಂತ್ರಣ ತಪ್ಪಿ ಈ ದುರಂತ ಸಂಭವಿಸಿದೆ. ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

## ಸಾದಿಕ್ ಪೈಲ್ವಾನ್ ನಾಮಪತ್ರ ವಾಪಸ್..!

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ದಾವಣಗೆರೆ ಉಪಚುನಾವಣೆಗೆ ಸ್ವತಂತ್ರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದ ಸಾದಿಕ್ ಪೈಲ್ವಾನ್ ನಾಮಪತ್ರ ಹಿಂಪಡೆದಿದ್ದಾರೆ. ದಾವಣಗೆರೆ, ಬಾಗಲಕೋಟೆ ಎರಡೂ ಕಡೆ ಕಾಂಗ್ರೆಸ್ ಗೆಲ್ಲಲಿದೆ ಎಂಬ ವಿಶ್ವಾಸವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ವ್ಯಕ್ತಪಡಿಸಿದ್ದಾರೆ.

ಅವರು ಕ್ವಿಂನ್ಸ್ ರಸ್ತೆಯಲ್ಲಿರುವ ಕಾಂಗ್ರೆಸ್ ಭವನದಲ್ಲಿ ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿ, ಸಾದಿಕ್ ಪೈಲ್ವಾನ್ ಅವರು ನನಗೆ ಬಹಳ ವರ್ಷಗಳಿಂದ ಪರಿಚಯದವರು. ಮೈಸೂರಿನ ಕುಸ್ತಿ ಅಖಾಡಗಳಲ್ಲಿ ಅವರು ಪಾಲ್ಗೊಂಡಾಗ ಭೇಟಿಯಾಗುತ್ತಿದ್ದೆ ಎಂದು ತಿಳಿಸಿದ ಸಿಎಂ, ಅಭ್ಯರ್ಥಿಯಾಗಬೇಕೆಂದು ಬಯಸುವುದು ತಪ್ಪೇನಿಲ್ಲ ಎಂದಿದ್ದಾರೆ.

ನಿನ್ನೆ 11 ಜನ ನಾಮಪತ್ರ ಹಿಂಪಡೆದಿದ್ದಾರೆ. ಪಕ್ಷದ ಕೋರಿಕೆ ಮೇರೆಗೆ ಸಾದಿಕ್ ಅವರು ನಾಮಪತ್ರ ಹಿಂಪಡೆದಿದ್ದರಿಂದ ಅವರಿಗೆ ಮುಖ್ಯಮಂತ್ರಿಗಳು ಧನ್ಯವಾದ ಹೇಳಿದ್ದಾರೆ. ಶಾಸಕ ರಿಜ್ವಾನ್ ಅರ್ಷದ್, ಸಲೀಂ ಅಹ್ಮದ್, ನಜೀರ್ ಅಹ್ಮದ್ ಅವರು ದಾವಣಗೆರೆಗೆ ಭೇಟಿ ನೀಡಿದ್ದರು. ಅವರು ತಲುಪುವುದು ತಡವಾದ್ದರಿಂದ ನಾಮ ಪತ್ರ ಸಲ್ಲಿಸುವುದನ್ನು ತಡೆಯಲು ಸಾಧ್ಯವಾಗಲಿಲ್ಲ ವಿಧಾನಪರಿಷತ್ ನಲ್ಲಿ ಉತ್ತರ ನೀಡಬೇಕಿದ್ದರಿಂದ ನಾನು ಖುದ್ದು ಭೇಟಿ ನೀಡಲಾಗಿಲ್ಲ ಎಂದು ನುಡಿದಿದ್ದಾರೆ.

## ಎಸ್ಸೆಸ್ಸೆಲ್ಸಿ: 525 ಅಂಕಗಳಿಗೆ ಇಳಿಕೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



SSLC ಪರೀಕ್ಷೆಯ ಅಂಕಗಳನ್ನು 625ಕ್ಕೆ ಬದಲಿಗೆ 525 ಅಂಕಗಳಿಗೆ ಇಳಿಕೆ ಮಾಡಲಾಗಿದೆ. ಹಿಂದಿ ಸೇರಿ ತೃತೀಯ ಭಾಷೆಗಳ ಅಂಕಗಳಿಗೆ ಕೊಕ್ ನೀಡಲಾಗಿದ್ದು ಹಿಂದಿನ ವರ್ಷಗಳಂತೆ ಅವರು 100 ಅಂಕಗಳಿಗೆ ಪರೀಕ್ಷೆ ಬರೆಯಲಿದ್ದು, ಅಂಕಪಟ್ಟಿಯಲ್ಲಿ ಗ್ರೇಡ್ ಅಂತ ನಮೂದಿಸಲಾಗುತ್ತದೆ.

ಬೆಂಗಳೂರಿನಲ್ಲಿದ್ದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಶಿಕ್ಷಣ ಸಚಿವ, ಮಧು ಬಂಗಾರಪ್ಪ, ಈ ನಿಯಮ 2026ರಲ್ಲಿ ನಡೆಯುತ್ತಿರುವ ಎಸ್‌ಎಸ್‌ಎಲ್ಸಿ ಪರೀಕ್ಷೆಯಿಂದಲೇ ಅನ್ವಯವಾಗಲಿದೆ ಎಂದರು. ಈ ಹಿಂದೆ 625 ಅಂಕಗಳಿಗೆ ಮಕ್ಕಳು ಪರೀಕ್ಷೆ ಬರೆಯುತ್ತಿದ್ದರು. ಆದರೆ ಈಗ ಅಂಕಪಟ್ಟಿಯಲ್ಲಿ ಹಿಂದಿ ಸೇರಿದಂತೆ ತೃತೀಯ ಭಾಷೆಯ 100 ಅಂಕಗಳನ್ನು ಅಂಕಪಟ್ಟಿಯಲ್ಲಿ ನಮೂದಿಸುವುದಿಲ್ಲ. 525 ಅಂಕಗಳಿಗೆ ಪ್ರತಿ ವಿದ್ಯಾರ್ಥಿಯೂ ಪಡೆದ ಅಂಕಗಳಷ್ಟೇ ಇರುತ್ತವೆ ಎಂದು ವಿವರಿಸಿದ್ದಾರೆ.

# ಸುಂಕ ಕಡಿತದ ರಾಜಕೀಯ

## ಗ್ರಾಹಕ, ಡೀಲರ್‌ಗಳಿಗೆ ಲಾಭವಾಗದು: ಕಾಂಗ್ರೆಸ್ | ಈ ಕ್ರಮ ಸ್ವಾಗತಾರ್ಹ: ಸಚಿವೆ ನಿರ್ಮಲ

• ಮಲ್ಲಮ್ಮ ನುಡಿ ವಾರ್ತೆ ನವದೆಹಲಿ

ಅಮೆರಿಕ– ಇಸ್ರೇಲ್, ಇರಾನ್ ಯುದ್ಧದಿಂದ ಇಡೀ ವಿಶ್ವಸವೇ ತತ್ತರಿಸಿದೆ. ಎಲ್ಲೆಲ್ಲೂ ಬೆಲೆ ಹೆಚ್ಚಳದಿಂದ ಜನತೆ ಹೈರಾಣಾಗಿದ್ದಾರೆ. ಇದರ ನಡುವೆ ಕೇಂದ್ರ ಸರ್ಕಾರ ಪೆಟ್ರೋಲ್, ಡೀಸೆಲ್ ಮೇಲಿನ ಅಬಕಾರಿ ಸುಂಕ ಕಡಿತಗೊಳಿಸಿರುವುದು ಗಮನ ಸೆಳೆದಿದೆ. ಆದರೆ ಇದು ಗ್ರಾಹಕರು–ಡೀಲರ್‌ಗಳಿಗೆ ಯಾವುದೇ ಲಾಭವಾಗದು ಎಂದು ಕಾಂಗ್ರೆಸ್ ದೂರಿದೆ.

**ಪ್ರತಿ ಪಕ್ಷದ ವಾದವೇನು?:** ಸರ್ಕಾರ ಪೆಟ್ರೋಲ್ ಮೇಲಿನ ಅಬಕಾರಿ ಸುಂಕವನ್ನು ಲೀಟರ್‌ಗೆ 3 ರೂ.ಗೆ ಇಳಿಸಿದೆ. ಡೀಸೆಲ್ ಮೇಲಿನ ಸುಂಕವನ್ನು ಪೂರ್ಣ ತೆಗೆದುಹಾಕಿದೆ. ಈ ಕ್ರಮವು ಪೆಟ್ರೋಲ್, ಡೀಸಲ್ ಬೆಲೆಗಳ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಪ್ರತಿ ಪಕ್ಷ ಕಾಂಗ್ರೆಸ್‌ನ ವಾದವಾಗಿದೆ.

**ಸುಂಕ ಇಳಿಕೆ ಉದ್ದೇಶ..?:** ಜಾಗತಿಕ ಕಚ್ಚಾ ತೈಲದ ಬೆಲೆ ಏರಿಕೆಯಿಂದ ನಷ್ಟ ಅನುಭವಿಸುತ್ತಿರುವ ಇಂಡಿಯನ್ ಆಯಿಲ್ ಕಾರ್ಪೊರೇಷನ್, ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್, ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ ಮುಂತಾದ ಸರ್ಕಾರಿ ಇಂಧನ ಕಂಪನಿಗಳ ಮೇಲಿನ ಒತ್ತಡವನ್ನು ಕಡಿಮೆ ಮಾಡುವ ಉದ್ದೇಶವಿದೆ.



### ಲಾಕ್‌ಡೌನ್ ಇಲ್ಲ: ಸಚಿವೆ

ಇಂಧನ ಕೊರತೆ ಉಂಟಾಗುವ ಸಾಧ್ಯತೆ ಹಿನ್ನೆಲೆ ಸರ್ಕಾರ ಲಾಕ್‌ಡೌನ್ ರೀತಿಯ ಕ್ರಮಗಳನ್ನು ಪರಿಗಣಿಸಬಹುದು ಎಂಬ ವದಂತಿಗಳನ್ನು ಸಹ ಸಚಿವೆ ನಿರ್ಮಲಾ ಸೀತಾರಾಮನ್ ತಳ್ಳಿಹಾಕಿದ್ದಾರೆ. ಇಂತಹ ವರದಿಗಳು ಆಧಾರರಹಿತವಾಗಿವೆ ಎಂದು ಹೇಳಿದ ಅವರು, ಸರ್ಕಾರದಿಂದ ಇಂತಹ ಯಾವುದೇ ಕ್ರಮವನ್ನು ಪರಿಗಣಿಸಲಾಗುತ್ತಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

### ಕೇಂದ್ರದಿಂದ ಕೊಲೆ: ಡಿಕೆಶಿ

ಕೇಂದ್ರ ಸರ್ಕಾರ ಪೆಟ್ರೋಲ್, ಡೀಸೆಲ್ ಮೇಲಿನ ಅಬಕಾರಿ ಸುಂಕವನ್ನು ಕಡಿತಗೊಳಿಸಿದ್ದು, ಇದರಿಂದಾಗಿ ಪ್ರತಿ ಲೀಟರ್ ಪೆಟ್ರೋಲ್‌ಗೆ 3 ರೂ, ಡೀಸೆಲ್ ಸುಂಕ ಶೂನ್ಯಕ್ಕೆ ಇಳಿದಿದೆ. ಆದರೆ ಇದಕ್ಕೆ ಡಿಸಿಎಂ ಡಿಕೆ ಶಿವಕುಮಾರ್ ಕಿಡಿಕಾರಿದ್ದು, ಹಲವು ರಾಜ್ಯಗಳ ವಿಧಾನಸಭೆ ಚುನಾವಣೆ ಇದ್ದು, ತೈಲ ಬೆಲೆಯ ಅಬಕಾರಿ ಸುಂಕ ಕಡಿಮೆ ಮಾಡಿದ್ದಾರೆ. ತೈಲ ಬೆಲೆ ಹೆಚ್ಚಳ ಮಾಡಿ ಕೇಂದ್ರ ನಮ್ಮನ್ನು ಕೊಲೆ ಮಾಡುತ್ತಿದೆ ಎಂದು ಟೀಕಿಸಿದ್ದಾರೆ.

ಇದು ಯುದ್ಧಕಾಲವಾಗಿದೆ. ಪೆಟ್ರೋಲ್ ಹಾಗೂ ಡೀಸೆಲ್ ಬೆಲೆ ಕಡಿಮೆಯಾಗುತ್ತಿದೆ ಎಂಬ ಶೀರ್ಷಿಕೆಗಳನ್ನು ಗಮಿಸಿ, ಸರ್ಕಾರವು ನಿಮ್ಮ ಜೇಬಿಗೆ ಬಿಗ್ ರಿಲೀಫ್ ನೀಡುತ್ತಿದೆ ಎಂದು ಸಾರ್ವಜನಿಕರು ಭಾವಿಸಿದರೆ, ಅದು ತಪ್ಪಾಗಿ ಭಾವಿಸುತ್ತಿದ್ದೀರಿ ಅಂತಲೆ ತಿಳಿಯಿರಿ.
–ಪವನ್ ಖೇರಾ, ಕಾಂಗ್ರೆಸ್ ಮಾಧ್ಯಮ ಮತ್ತು ಪ್ರಚಾರ ವಿಭಾಗದ ಮುಖ್ಯಸ್ಥ

### ಅಬಕಾರಿ ಸುಂಕ ಇಳಿಕೆ..?

ಕೇಂದ್ರ ಅಬಕಾರಿ ಸುಂಕವನ್ನು ಕಡಿತಗೊಳಿಸಿದ್ದು, ಪೆಟ್ರೋಲ್ ಮೇಲಿನ ಸುಂಕವನ್ನು ಲೀಟರ್‌ಗೆ 13 ರೂಪಾಯಿಯಿಂದ 3 ರೂಗೆ ಇಳಿಸಿದೆ. ಡೀಸೆಲ್ ಮೇಲಿನ ಸುಂಕವನ್ನು ಸಂಪೂರ್ಣವಾಗಿ ರದ್ದುಗೊಳಿಸಿದೆ. ಈಗ ಡೀಸೆಲ್ ಮೇಲೆ ಅಬಕಾರಿ ಸುಂಕ ಶೂನ್ಯವಾಗಿದ್ದು, ಮೊದಲು ಇದು 10 ರೂಪಾಯಿಗಳಾಗಿತ್ತು. ಈ ನಿರ್ಧಾರವನ್ನು ನಿನ್ನೆ ಹಣಕಾಸು ಸಚಿವಾಲಯ ಪ್ರಕಟಿಸಿದ್ದು, ತಕ್ಷಣದಿಂದಲೇ ಜಾರಿಗೆ ಬಂದಿದೆ.

### ಹೆಚ್ಚಳದ ನಡುವೆ ಇಳಿಕೆ..!

ಕೇಂದ್ರ ಸರ್ಕಾರ ಘೋಷಿಸಿದ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕ ಕಡಿತವನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಸ್ವಾಗತಿಸಿದ್ದಾರೆ. ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷದಿಂದ ಕಚ್ಚಾ ತೈಲದ ಬೆಲೆ ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ಗ್ರಾಹಕರನ್ನು ಅದರ ಪರಿಣಾಮದಿಂದ ರಕ್ಷಿಸುವುದೇ ಈ ಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದ್ದಾರೆ.

## ಟಿಕೆಟ್ ಮುಖ್ಯವೋ, ಜನಸೇವೆಯೋ..?

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ನಮ್ಮ ರಾಜ್ಯದ ವಿಧಾನಸಭೆಯಲ್ಲಿ ನಡೆದ ಚರ್ಚೆಯನ್ನು ಕೇಳಿ ಅತೀವ ನೋವು ಮತ್ತು ಆಕ್ರೋಶ ಉಂಟಾಗಿದೆ. ಮುಂಬರುವ ಐಪಿಎಲ್ ಪಂದ್ಯಗಳಿಗಾಗಿ ಶಾಸಕರು ಮತ್ತು ಅವರ ಕುಟುಂಬದವರಿಗೆ ಉಚಿತ ವಿಐಪಿ ಟಿಕೆಟ್ ಬೇಕು ಎಂದು ಪಕ್ಷಭೇದ ಮರೆತು ಹಠ ಹಿಡಿದಿರುವುದೇ ದುರ್ದೈವ ಎಂದು ಜೆಡಿಎಸ್ ನಾಯಕ ನಿಖಿಲ್ ಕುಮಾರಸ್ವಾಮಿ ಕಿಡಿ ಕಾರಿದ್ದಾರೆ. ಈ ಸಂಬಂಧ ಟ್ವೀಟ್ ಮಾಡಿ, ಜನರ ಜೀವ ಮುಖ್ಯವೋ? ವಿಐಪಿ ಟಿಕೆಟ್ ಮುಖ್ಯವೋ? ನಮಗೆಲ್ಲಾ ನೆನಪಿರಲಿ, ಕಳೆದ ಬಾರಿ ಆರ್‌ಸಿಬಿ ವಿಜಯೋತ್ಸವದ ಸಂಭ್ರಮದ ನಡುವೆ ನಡೆದ ಆ ಭೀಕರ ಕಾಲ್ತುಳಿತದಲ್ಲಿ 11 ಅಮಾಯಕ ಯುವಕರು ಪ್ರಾಣ ಕಳೆದುಕೊಂಡಿದ್ದರು. ಆ ದುರಂತಕ್ಕೆ ಕಾರಣರಾದ ಆರ್‌ಸಿಬಿ ಮ್ಯಾನೇಜ್ಮೆಂಟ್ ಆಗಲಿ ಅಥವಾ ಕೆಎಸ್ಸಿಎ ಆಗಲಿ ಇದುವರೆಗೂ ಯಾರನ್ನೂ ಹೊಣೆಗಾರರನ್ನಾಗಿ ಮಾಡಿಲ್ಲ. ಆ ಕುಟುಂಬಗಳಿಗೆ ಕನಿಷ್ಠ ನ್ಯಾಯವೂ ಸಿಕ್ಕಿಲ್ಲ ಎಂಬುದು ವೈಫಲ್ಯ ಎಂದಿದ್ದಾರೆ.

## ಪ್ರಧಾನಿ ಸೆರೆಂಡರ್ ಅಲ್ಲ, ದುರಂದರ್..!

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಕಾಂಗ್ರೆಸ್‌ನವರು ಪ್ರಧಾನಿ ಮೋದಿ ಅವರನ್ನು ನರೇಂದರ್ ಅಲ್ಲ, ಸರೆಂಡರ್ ಅಂತ ಟೀಕಿಸುತ್ತಾರೆ. ಆದರೆ, ನಮ್ಮ ಪ್ರಧಾನಿ ಸರೆಂಡರ್ ಅಲ್ಲ, ಅವರು ಧುರಂದರ್, ಎಲ್ಲಿ, ಯಾವಾಗ, ಹೇಗೆ ಪಾಠ ಕಲಿಸಬೇಕೋ ಅಲ್ಲಿ ಕಲಿಸುತ್ತಾರೆ ಎಂದು ಛಲವಾದಿ ನಾರಾಯಣಸ್ವಾಮಿ ಹೇಳಿದ್ದಾರೆ.

ವಿಧಾನ ಪರಿಷತ್‌ನಲ್ಲಿ ಮಾತನಾಡಿದ ಅವರು, ಅಧಿಕಾರ ನಡೆಸುವವರಿಗೆ ಸಂಯಮ ಬಹಳ ಮುಖ್ಯ. ಯಾವ ಸಂದರ್ಭದಲ್ಲಿ ನಮಗೆ ಕಷ್ಟ ಬರುತ್ತದೆ–ಯೋ ಆಗ ಸಂಯಮವಾಗಿರಬೇಕು. ಗೆಲುವಿನ ಸಂದರ್ಭದಲ್ಲಿ ಹೇಗಿರಬೇಕು ಎಂಬುದನ್ನು ಕೂಡ ನಾಯಕರು ಅರ್ಥ ಮಾಡಿಕೊಳ್ಳಬೇಕು. ಆಪರೇಷನ್ ಸಿಂಧೂರ್ ಮೂಲಕ ಮೋದಿ ಅವರು ಗೆಲುವು ಪಡೆದರು. ಆದರೆ, ಸಿದ್ದರಾಮಯ್ಯ ಆರ್‌ಸಿಬಿ ಸಂಭ್ರಮಾಚರಣೆಯಲ್ಲಿ ಭಾಗಿಯಾಗಿ 11 ಜನರ ಸಾವಿಗೆ ಕಾರಣರಾದರು ಎಂದು ಆರೋಪಿಸಿದ್ದಾರೆ.

## ಬತ್ತದ ನಾಡಲ್ಲಿ ಗಮನ ಸೆಳೆವ ಶ್ರೀವಾರು ಕೆಫೆ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಶ್ರೀಧರ್ ಹಾಗೂ ರವಿ ಅವರ ನೇತೃತ್ವದಲ್ಲಿ ಶುಕ್ರವಾರ (ಮಾ. 27)ದಂದು ನೂತನವಾಗಿ ಸುಂದರವಾದ ಸುಸಜ್ಜಿತ ಮತ್ತು ಉತ್ತಮ ಪರಿಸರದೊಂದಿಗೆ ಶ್ರೀವಾರು ಕೆಫೆ ಆರಂಭವಾಗಿದೆ. ಸುಂದರ ಪರಿಸರ, ಪ್ರೇಮಿಗಳ ಸೌಹಾರ್ದತೆಗೆ ನೆಲೆಯಾದ, ಅದ್ಭುತ ತಮ್ಮ ಅನುಭವದೊಂದಿಗೆ ಶುದ್ಧವಾದ ವಾತಾವರಣದಲ್ಲಿ ನಿರ್ಮಿಸಿದ ಶ್ರೀವಾರು ಕೆಫೆಯು, ಶುದ್ಧ ಸಸ್ಯಹಾರಿ ಫಲಹಾರ, ಉಪಾಹಾರ ಬಹು ಸುಂದರ ಕಟ್ಟಡದೊಳಗಡೆ ನೆಲೆಸಿದೆ. ಪರಿಸರ ಪ್ರೇಮಿಗಳ ಭಾವಚಿತ್ರಗಳು, ಐತಿಹಾಸಿಕ ಗುರುತಿಸುವ ಚಿತ್ರಕಲೆಯುಳ್ಳ ಬಣ್ಣದ ಚಿತ್ತಾರಗಳು ಇವುಗಳ ಮಧ್ಯೆ ಕುಳಿತು ಉಪಹಾರ ಮತ್ತು ಫಲಹಾರ ಮಾಡುತ್ತಿರುವಾಗ ನಮಗೆ ನಮ್ಮ ಕುಟುಂಬಕ್ಕೆ ಸಿಗುವ ಆನಂದ ಅದುವೆ ನಮ್ಮ ಸಂಸಾರ ಎನ್ನಬಹುದು.








### ವಿವಿಧ ಶುಭ ಸಮಾರಂಭಗಳಿಗೆ ಸೂಕ್ತ ಜಾಗ

ಬೈಪಾಸ್ ಕೊಪ್ಪಳ ರಸ್ತೆ ಪ್ರಶಾಂತನಗರ ಗಂಗಾವತಿಯಲ್ಲಿರುವ ಶ್ರೀವಾರು ಕೆಫೆಯು ಇಲ್ಲಿನ ವಾತಾವರಣಕ್ಕೆ ತಕ್ಕಂತೆ ಹುಟ್ಟುಹಬ್ಬ ಆಚರಣೆ ವಿಶೇಷವಾದ ಸಸ್ಯಹಾರಿ ಭೋಜನ ಮಂದಿರವಿದೆ. ಸುಂದರ ಆವರಣದಲ್ಲಿ ಅನೇಕ ವಿಶೇಷವಾದ ಶುಭ ಕಾರ್ಯಕ್ರಮಗಳನ್ನು ಆಚರಿಸಬಹುದಾಗಿದೆ. ಇಂದು ನಿಮ್ಮ ನಗರದಲ್ಲಿ ಶ್ರೀವಾರು ಕೆಫೆ ಶುಭಾರಂಭಗೊಂಡಿದೆ.

## ಮುನಿ–ಡಿಕೆಶಿ ದಮ್ಮು ತಾಕತ್ತು..!

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ವಿಧಾನಸಭೆ ಅಧಿವೇಶನದಲ್ಲಿ ಡಿಸಿಎಂ ಡಿಕೆ ಶಿವಕುಮಾರ್–ಶಾಸಕ ಮುನಿರತ್ನ ನಡುವೆ ವಾಗ್ವಾದ ನಡೆಯಿತು. ಈ ವೇಳೆ ನನ್ನ ಯೋಗ್ಯತೆ, ದಮ್ಮು, ತಾಕತ್ತು ತೋರಿಸಬೇಕಾ ಎಂದು ಡಿಕೆ ಶಿವಕುಮಾರ್ ಗರಂ ಆಗಿದ್ದಾರೆ. ಡಿಸಿಎಂ ಡಿಕೆಶಿ ಅವರು ಆ ದಿನಗಳ ಗೂಂಡಾಗಿರಿ ಬಿಡುವುದಿಲ್ಲ ಎಂದು ಟೀಕಿಸಿದೆ.

ಬೆಂಗಳೂರಿಗೆ ಸಂಬಂಧಿಸಿದಂತೆ ಚರ್ಚೆ ವೇಳೆ ನನ್ನ ಪ್ರಶ್ನೆಗೆ ಉತ್ತರ ಕೊಡುವ ತಾಕತ್ತು ಇದೆಯಾ ಎಂದು ಶಾಸಕ ಮುನಿರತ್ನ ಕೇಳಿದಾಗ ನನ್ನ ಯೋಗ್ಯತೆ, ತಾಕತ್ತು, ದಮ್ಮು ತೋರಿಸಬೇಕಾ ಎಂದು ಸಿಡಿದೆದ್ದರು. ಮಾತಿಗೆ ಮಾತಿಗೆ ಬೆಳೆದು ಬಿಜೆಪಿ ಹಾಗೂ ಕಾಂಗ್ರೆಸ್ ನಾಯಕರ ನಡುವೆ ದೊಡ್ಡ ಗದ್ದಲವೇ ನಡೆಯಿತು.





ಡಿಕೆ ಶಿವಕುಮಾರ್ ಸದನದಲ್ಲಿ ಮಾತನಾಡಿರುವ ವಿಡಿಯೋವನ್ನು ಟ್ವೀಟ್ ಮೂಲಕ ಹಂಚಿಕೊಂಡಿರುವ ಕರ್ನಾಟಕ ಬಿಜೆಪಿ, ಡಿಸಿಎಂ ಡಿಕೆಶಿ ಅವರಿಗೆ ಆ ದಿನಗಳು ನೆನಪಾಗಿದಂತಿದೆ. ರೌಡಿ ಕೊತ್ವಾಲನ ಶಿಷ್ಯ ಎಂಬುದನ್ನು ಸದನದಲ್ಲಿ ತೋರಿಸುವ ಯಾವ ಅಗತ್ಯವೂ ಇರಲಿಲ್ಲ. ಉಪಮುಖ್ಯಮಂತ್ರಿಗಳ ರೌಡಿಸಂ ಇತಿಹಾಸ ರಾಜ್ಯದ ಜನತೆಗೆ ತಿಳಿದಿದೆ. ಸದನಕ್ಕೆ ಕಳುಹಿಸಿದ್ದು ತೋಳ್ಬಲ, ಧಮ್ಮು ತಾಕತ್ತಿನ ಪ್ರದರ್ಶನಕ್ಕಲ್ಲ ಎನ್ನುವುದನ್ನು ಡಿಕೆಶಿ ಅವರು ತಿಳಿದುಕೊಳ್ಳಲಿ ಎಂದು ಕಿಡಿಕಾರಿದೆ.

**ಕೇರಳದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಕರ್ನಾಟಕ ಮಾದರಿ ಗ್ಯಾರಂಟಿ ಯೋಜನೆ ಅನುಷ್ಠಾನಗೊಳಿಸಲಿದೆ: ಸಚಿವ ಜಮೀರ್ ಅಹಮದ್ ಖಾನ್**

# ಮೌಲ್ಯ ಘನೀಕೃತ ರೂಪವೇ ರಾಮ



• ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ

ಲೋಕಧರ್ಮದಲ್ಲಿ ಉನ್ನತವಾದ ಆದರ್ಶಮೇಲ್ಪಂಕ್ತಿರೂಪಿಸುವುದರೊಂದಿಗೆ ಒಟ್ಟುಮೌಲ್ಯಗಳ ಘನೀಕೃತ ರೂಪವೇ ರಾಮ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಗ್ರಾಮದ ಹೊರ ವಲಯದಲ್ಲಿರುವ ಶ್ರೀ ರಾಮಾಲಿಂಗೇಶ್ವರ ದೇವಸ್ಥಾನದಲ್ಲಿ ರಾಮನವಮಿ ಅಂಗವಾಗಿ ಆಯೋಜಿಸಿದ ಧರ್ಮ ಸಭೆಯ ಪಾವನ ಸನ್ನಿಧಾನ ವಹಿಸಿ ಮಾತನಾಡಿದ ಶ್ರೀಗಳು ಕಾಲಾತೀತ, ಸೀಮಾತೀತನಾದ ಶ್ರೀರಾಮಚಂದ್ರನ ಆದರ್ಶ ಎಂದಿಗೂ ಪ್ರಸ್ತುತವಾಗಿದ್ದು ಲೋಕಕಲ್ಯಾಣದ ಪರಮ ಶ್ರೇಯಸ್ಸಿಗೆ ಬೆಳಕು ನೀಡುತ್ತಿರುವ ದಿವ್ಯಾನುಭವದ ನಿಧಿಯಾಗಿದೆ.

ರಾಮನತತ್ವಾದರ್ಶ ಪಾಲಿಸುವುದರಿಂದ ವಿಶ್ವ ಬಂದುತ್ವ ಸಾಧಿಸಿ ಜಗತ್ತಿನಲ್ಲಿ ಶಾಂತಿ ಸೌಹಾರ್ದತೆ ನೆಲೆಗೊಳ್ಳುವದಕ್ಕೆ ಸಾಧ್ಯವಾಗುತ್ತದೆ.

ನಡೆ–ನುಡಿ ಒಂದಾಗಿಸಿಕೊಂಡು ಬದುಕಿದ ರಾಮನ ಇಡೀ ಜೀವನವೇ ಒಂದು ದಿವ್ಯಸಂದೇಶವಾಗಿದ್ದು, ಎಲ್ಲಾ ಕ್ಷೇತ್ರಗಳ ಸಾತ್ವಿಕ ವ್ಯವಹಾರಗಳಿಗೆ ರಾಮದೇವರು ಸಕಾರಾತ್ಮಕ ಪ್ರೇರಣೆ ನೀಡುವಂತವರಾಗಿದ್ದಾರೆ ಎಂದು ನುಡಿದರು.

ಹಾರಕೂಡ ಚನ್ನಬಸವಶಿವಯೋಗಿಗಳ ಪಾವನ ಭೂಮಿಯಲ್ಲಿ ಪ್ರತಿವರ್ಷ ಶ್ರೀರಾಮನವಮಿ ಅರ್ಥಪೂರ್ಣವಾಗಿ ಆಚರಿಸಿಕೊಂಡು ಬರುತ್ತಿರುವುದು ಹೆಮ್ಮೆಯ ವಿಷಯವಾಗಿದ್ದು ಸರ್ವರಿಗೂ ರಾಮ ಶುಭವನ್ನು ಅನುಗ್ರಹಿಸಲಿ ಹಾಗೂ ವಿಶ್ವದಲ್ಲಿ ಶಾಂತಿ ಸಹಬಾಳ್ವೆ ನೆಲೆಗೊಳ್ಳಲಿ ಎಂದು ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಪಂಡಿತರಾವ ಡಾವರೆ, ಅರುಣ ಗುದಗೆ, ಸುಭಾಷ ದೇಗಾಂವ, ಅಪ್ಪಾರಾವ ಬಿರಾದಾರ, ಕಾಶಪ್ಪ ಚೌದರಿ, ಮೇಗಣ್ಣ ಪೀರಜೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಸೂರ್ಯಕಾಂತ ಬೆಳಮಗೆ ಸ್ವಾಗತಿಸಿದರು.

# ಶ್ರೀ ರಾಮನವಮಿ ನಿಮಿತ್ತ ಭವ್ಯ ಮೆರವಣಿಗೆ

• ಮಲ್ಲಮ್ಮ ನುಡಿ ವಾರ್ತೆ, ಕಮಲನಗರ


ಪಟ್ಟಣದಲ್ಲಿ ಶ್ರೀ ರಾಮನವಮಿ ಹಬ್ಬವನ್ನು ಅತ್ಯಂತ ಸಡಗರ ಮತ್ತು ಸಂಭ್ರಮದಿಂದ ಆಚರಿಸಲಾಯಿತು. ಈ ಅಂಗವಾಗಿ ಆಯೋಜಿಸಲಾಗಿದ್ದ ಶ್ರೀ ರಾಮಚಂದ್ರನ ಭವ್ಯ ಮೂರ್ತಿಯ ಮೆರವಣಿಗೆಯು ಭಕ್ತಾದಿಗಳ ಕಣ್ಮನ ಸೆಳೆಯಿತು.

ವೈಭವದ ಮೆರವಣಿಗೆ:

ಪಟ್ಟಣದ ಪ್ರಮುಖ ಬೀದಿಗಳಲ್ಲಿ ನಡೆದ ಈ ಮೆರವಣಿಗೆಯಲ್ಲಿ ಶ್ರೀ ರಾಮನ ಬೃಹತ್ ಮತ್ತು ಆಕರ್ಷಕ ಮೂರ್ತಿಯನ್ನು ಇರಿಸಲಾಗಿತ್ತು. ಹೂವುಗಳಿಂದ ಅಲಂಕೃತಗೊಂಡಿದ್ದ ವಾಹನದಲ್ಲಿ ಸಾಗಿದ ಪ್ರಭು ಶ್ರೀರಾಮನ ದರ್ಶನ ಪಡೆಯಲು ನೂರಾರು ಭಕ್ತರು ರಸ್ತೆಯ ಇಕ್ಕೆಲಗಳಲ್ಲಿ ಜಮಾಯಿಸಿದ್ದರು. ಮೆರವಣಿಗೆಯುದ್ದಕ್ಕೂ 'ಜೈ ಶ್ರೀರಾಮ್' ಎಂಬ ಘೋಷಣೆಗಳು ಮೊಳಗಿದವು.



ಈ ಬಾರಿಯ ಮೆರವಣಿಗೆಯ ವಿಶೇಷ ಆಕರ್ಷಣೆಯೆಂದರೆ ಬಾಲ ರಾಮ, ಸೀತೆ ಮತ್ತು ಲಕ್ಷ್ಮಣರ ವೇಷಧರಿಸಿದ್ದ ಪುಟ್ಟ ಮಕ್ಕಳು. ರಥದ ಮೇಲೆ ಕುಳಿತಿದ್ದ ಈ ಬಾಲ ವೇಷಧಾರಿಗಳು ಮೆರವಣಿಗೆಗೆ ಮತ್ತಷ್ಟು ಕಳೆ ನೀಡಿದರು.



ಬಸವಕಲ್ಯಾಣ :– ತಾಲೂಕಿನ ಸುಕ್ಷೇತ್ರ ಹಾರಕೂಡ ಶ್ರೀ ಮಠದ ದಾಸೋಹ ಮನೆಯಲ್ಲಿ ರಾಮನವಮಿ ನಿಮಿತ್ಯ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಶ್ರೀ ರಾಮ ಲಲ್ಲಾ ಭಾವಚಿತ್ರಕ್ಕೆ ಗೌರವ ಸಮರ್ಪಿಸಿದರು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಹೇಮಲತಾ ಎಂ. ಹಿರೇಮಠ ಮುಂತಾದವರು ಉಪಸ್ಥಿತರಿದ್ದರು.

# ವ್ಯಕ್ತಿ ಕಾಣೆ, ಪತ್ತೆಗೆ ಮನವಿ

ಬೀದರ,: ಬೀದರನ ಅಲ್ಲಂಪ್ರಭು ನಗರ ಗುಂಪಾ ಬಡಾವಣೆಯಲ್ಲಿ ನಿವಾಸಿಯಾದ ಸೂರ್ಯಕಾಂತ ಬಸವಣಪ್ಪ ಸಲಬಾ (40) ಇತನು ದಿನಾಂಕ: 20–02–2026 ರಂದು ಮನೆಯಿಂದ ಹೊರಗಡೆ ಹೋಗಿ ಬರುತ್ತೇನೆ ಹೇಳಿ ಹೋಗಿ ಮರಳಿ ಮನೆಗೆ ಬಾರದೇ ಕಾಣೆಯಾಗಿರುತ್ತಾನೆ.

ಕಾಣೆಯಾದ ವ್ಯಕ್ತಿಯು 5 ಅಡಿ 5 ಇಂಚ್ ಎತ್ತರ ಇದ್ದು, ಗೋದಿ ಮೈಬಣ್ಣ, ಸಾಧಾರಣ ಮೈಕಟ್ಟು, ಮೈಮೇಲೆ ಬಿಳಿ ಬಣ್ಣದ ಶರ್ಟ್, ಕಪ್ಪು ಬಣ್ಣದ ಪ್ಯಾಂಟು ಧರಿಸಿರುವ ಇತನು ಕನ್ನಡ ಮತ್ತು ಹಿಂದಿ ಭಾಷೆಯಲ್ಲಿ ಮಾತನಾಡುತ್ತಾನೆ. ಈ ಕಾಣೆಯಾದ ವ್ಯಕ್ತಿಯ ಬಗ್ಗೆ ಯಾರಿಗಾದರೂ ಮಾಹಿತಿ ಸಿಕ್ಕಲ್ಲಿ ಗಾಂಧಿ ಬಂಜ್ ಪೊಲೀಸ್ ಠಾಣೆ ದೂರವಾಣಿ: 08482–200396, ಮೊಬೈಲ್: 9480803448 ಅಥವಾ ಬೀದರ ಕಂಟ್ರೋಲ್ ರೂಮ ದೂರವಾಣಿ: 08482–226704ಗೆ ಕರೆ ಮಾಡುವಂತೆ ಬೀದರ ಗಾಂಧಿ ಗಂಜ್ ಪೊಲೀಸ್ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಡಿಯುವ ನೀರಿಗಾಗಿ ಸಹಾಯವಾಣಿ ಆರಂಭ

• ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ



ತಾಲೂಕಿನ ಗ್ರಾಮೀಣ ಪ್ರದೇಶದಲ್ಲಿ ಬೇಸಿಗೆ ತೀವ್ರತೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾದಲ್ಲಿ ಸಾರ್ವಜನಿಕರು ಸಹಾಯವಾಣಿಗೆ ಕರೆ ಮಾಡಿ ಮಾಹಿತಿ ನೀಡಬಹುದು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ್ ತಿಳಿಸಿದ್ದಾರೆ. ಕಂಟ್ರೋಲ್ ರೂಮ್ ತೆರೆಯಲಾಗಿದ್ದು, ಇದು ಬೆಳಿಗ್ಗೆ 6 ರಿಂದ ರಾತ್ರಿ 8ರ ವರೆಗೆ ವಾರದ ಏಳು ದಿನಗಳು ಕಾರ್ಯನಿರ್ವಹಿಸಲಿದೆ. ಸಾರ್ವಜನಿಕರು 9448196202 ಮೊಬೈಲ್ ಸಂಖ್ಯೆಗೆ ಕರೆ ಮಾಡಿ ನೀರಿನ ಸಮಸ್ಯೆ ಕುರಿತು ಮಾಹಿತಿ ನೀಡಬಹುದು. ಕಂಟ್ರೋಲ್ ರೂಮ್ ಸಿಬ್ಬಂದಿ ದೂರುಗಳನ್ನು ದಾಖಲಿಸಿಕೊಂಡು ತಕ್ಷಣ ಸಂಬಂಧಿತ ಅಧಿಕಾರಿಗಳಿಗೆ ಮಾಹಿತಿ ನೀಡಿ ಸಮಸ್ಯೆ ಪರಿಹಾರಕ್ಕೆ ಕ್ರಮ ಕೈಗೊಳ್ಳಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿದ್ದಲಿಂಗೇಶ್ವರ ದೇವರ ಕೃಪೆಗೆ ಪಾತ್ರರಾಗಿ: ಬಸವಲಿಂಗ ಅವಧೂತರು




• ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ

ಸಿದ್ದೇಶ್ವರ ಗ್ರಾಮದ ಆರಾಧ್ಯ ದೈವ ಶ್ರೀ ಸಿದ್ದಲಿಂಗೇಶ್ವರ ಸ್ವಾಮಿ ಪವಾಡಪುರುಷರಾಗಿದ್ದು. ಭಕ್ತಿಯಿಂದ ಪೂಜಿಸಿ ಶ್ರೀ ಸಿದ್ದಲಿಂಗೇಶ್ವರ ದೇವರ ಕೃಪೆಗೆ ಪಾತ್ರರಾಗಿ ಎಂದು ನೆರೆಯ ತೆಲಂಗಾಣದ ಜಹೀರಾಬಾದ್ ತಾಲ್ಲೂಕಿನ ಮಲ್ಲಯ್ಯಗಿರಿ, ದೇಗಲಮಡಿ ಮತ್ತುಬಸವಕಲ್ಯಾಣ ಆಶ್ರಮದ ಪೀಠಾಧಿಪತಿ ಡಾ. ಬಸವಲಿಂಗ ಅವಧೂತರು ಹೇಳಿದರು

ಬೀದರ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಸಿದ್ದೇಶ್ವರ ಗ್ರಾಮದ ಶ್ರೀ ಸಿದ್ದಲಿಂಗೇಶ್ವರ 79ನೇ ಜಾತ್ರಾ ಮಹೋತ್ಸವದ ಪ್ರಯುಕ್ತ ಗುರುವಾರ ರಾತ್ರಿನಡೆದ ಪ್ರವಚನ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ಸಿದ್ದಲಿಂಗೇಶ್ವರು ದುಃಖವನ್ನು ದೂರಮಾಡುವಶಕ್ತಿಹೊಂದಿದ್ದಾರೆ. ಸಿದ್ದೇಶ್ವರ ಗ್ರಾಮದ ಅದಿ ದೇವತೆ ಶ್ರೀ ಸಿದ್ದಲಿಂಗೇಶ್ವರರು ಭಕ್ತರು ಭಕ್ತಿಯಿಂದ ಬೇಡಿದರೆ ವರವು ನೀಡಿದ್ದಾರೆ ಎಂದು ಹೇಳಿದರು.

ನಿತ್ಯಭಕ್ತಿಯಿಂದ ದೇವರ ಪೂಜೆ ಮಾಡಬೇಕು. ಆಧಾತ್ಮದ ಒಲವು ಬೆಳೆಸಿಕೊಳ್ಳಬೇಕು. ಮೂಢನಂಬಿಕೆ, ಮೂಢ ಆಚರಣೆಗಳಿಂದ ದೂರ ಇರಬೇಕು ಎಂದು ತಿಳಿಸಿದರು.

ನಾಮಗಳು ಬೇರೆ ಬೇರೆ ಇದ್ದರೂ, ದೇವರು ಒಬ್ಬನೇ ಇದ್ದಾನೆ. ದೇವರ ಕೃಪೆಗೆ ಪಾತ್ರರಾಗಲು ಪೂಜೆ, ಧ್ಯಾನ ಮಾಡಬೇಕು. ಸತ್ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು

ಯುವ ಸಮೂಹ ಹೆಚ್ಚು ಹೆಚ್ಚು ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು. ಪ್ರತಿಯೊಬ್ಬರೂ ಗುರು, ಹಿರಿಯರನ್ನು ಗೌರವಿಸಬೇಕು. ಅತ್ತೆ, ಸೊಸೆ ತಾಯಿ ಮತ್ತು ಮಕ್ಕಳಂತೆ ಸಂತೋಷದಿಂದ ಬಾಳಬೇಕು ಎಂದು ಕಿವಿಮಾತು ಹೇಳಿದರು

ಮಾನವ ಜನ್ಮ ಶ್ರೇಷ್ಠವಾಗಿದೆ. ಹೀಗಾಗಿ ಕೇವಲ ಸಂಸಾರದ ಜಂಜಾಟದಲ್ಲೇ ಮುಳುಗದೆ, ಪಾರಮಾರ್ಥದ ಒಲುವನ್ನು ಸಹ ಬೆಳೆಸಿಕೊಳ್ಳಬೇಕು, ಬಸವಾದಿ ಶರಣರ ವಚನಗಳನ್ನು ಓದಿ ಮುಂಡನಂಬಿಕೆ ಬಿಡಬೇಕು, ಪ್ರತಿಯೊಬ್ಬರು ತಮ್ಮ ತಮ್ಮ ಕುಟುಂಬದಲ್ಲಿ ಸಮರಸ್ಯದಿಂದ ಬದುಕು ಸಾಗಿಸಬೇಕು ಎಂದು ಹೇಳಿದರು ಮೊದಲಿಗೆ ಶ್ರೀ ಸಿದ್ದಲಿಂಗೇಶ್ವರ ಸ್ವಾಮಿಗೆ ಬಸವಲಿಂಗ ಅವಧೂತರು ಪೂಜೆ ಸಲ್ಲಿಸಿದರು. ಕಲ್ಯಾಣರಾವ ಕನ್ನಕಟ್ಟೆ ದಾಸೊಹ ಸೇವೆ ಮಾಡಿದರು.

ಮುಖಂಡರಾದ ದೇವಸ್ಥಾನದ ಅಧ್ಯಕ್ಷ ರಾಜಕುಮಾರ ಬೆಲ್ಲಾಳೆ, ಕಾರ್ಯದರ್ಶಿ ಶಶಿಧರ ಸೀತಾ, ಚಂದ್ರಕಾಂತ ಸ್ವಾಮಿ, ಸಂತೋಷ ತರನಳ್ಳೆ, ರಾಜಕುಮಾರ ಕನ್ನಕಟೆ, ಸುಧಾಕರ ಪರ್ಮಾ, ವಿಶ್ವನಾಥ ಪರ್ಮಾ, ವೀರಶೆಟ್ಟಿ ಖಂಡ್ರೆ, ಅನೀಲ ಪರ್ಮಾ, ನಾಗಯ್ಯ ಸ್ವಾಮಿ, ಬಂಡೆಪ್ಪ ಪರ್ಮಾ, ಸಚೀನ್ ತರನಳೆ, ಕಲ್ಲಯ್ಯ ಸ್ವಾಮಿ, ರಮೇಶ ಪಾಟೀಲ್, ಮಲ್ಲಪ್ಪ ಹುಚ್ಚೆ, ಶಾಮರಾವ ಪರ್ಮಾ ಮೊದಲಾದವರು ಇದ್ದರು.

ಕರ್ನಾಟಕ ಸರ್ಕಾರ

ತಾಲೂಕಾ ಪಂಚಾಯತ ಔರಾದ(ಬಿ)

ಕಚೇರಿ ದೂರವಾಣಿ:–08485–280030 E-mail:-eotpaurad@gmail.com

ಸಂಖ್ಯೆ:ತಾಪಂಔ/ಸಿಂಬ್ಬಂದಿ/ಸಿಆರ್–/2025–26 ದಿನಾಂಕ:27/03/2026

## ಗುತ್ತಿಗೆ ಆಧಾರದ ಮೇಲೆ ವಾಹನ ಸರಬರಾಜಿಗೆ ಟೆಂಡರ್ ಪ್ರಕಟಣೆ

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ 2026–27 ನೇ ಸಾಲಿಗೆ ಎಪ್ರಿಲ್ 2026 ರಿಂದ ಮಾರ್ಚ–2027 ರವರೆಗೆ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕ ಪಂಚಾಯತ ಔರಾದ(ಬಾ) ಇವರು ಎಲ್ಲಾ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಗ್ರಾಮ ಪಂಚಾಯತಗಳ ಸಂದರ್ಶನ/ತಪಾಸಣೆಗಾಗಿ ಸಂಚರಿಸಲು ಕೆಳಗೆ ಕೋಷ್ಠಕದಲ್ಲಿ ಸೂಚಿಸಿದ ನಾಲ್ಕು ಚಕ್ರಗಳ ಒಂದು ವಾಹನ ಅವಶ್ಯಕತೆ ಇರುತ್ತದೆ.

ಪ್ರಯುಕ್ತ ಆಸಕ್ತ ವಾಹನ ಮಾಲೀಕರಿಂದ/ಟ್ರಾವೆಲ್ ಏಜೆನ್ಸಿಗಳಿಂದ ಟೆಂಡರ್ ಆಹ್ವಾನಿಸಿದೆ. ಅರ್ಹ ಮಾಲೀಕರು/ಟ್ರಾವೆಲ್ ಏಜೆನ್ಸಿಗಳ ಟೆಂಡರ್‌ನಲ್ಲಿ ಭಾಗವಹಿಸಬಹುದಾಗಿದೆ.

| ಕ್ರ.ಸಂ | ವಾಹನದ ವಿವರ | ಮಾಸಿಕ ಕ್ರಮಿಸಬೇಕಾದದೂರ | ಮಾಸಿಕ ನಿಗದಿಪಡಿಸಿದ ಗರಿಷ್ಟ ಮೊತ್ತ | ಟೆಂಡರ್‌ಅರ್ಜಿಯ ಬೆಲೆ |
|---|---|---|---|---|
| 1 | ನಾಲ್ಕು ಚಕ್ರದ ವಾಹನ (ಎ.ಸಿ ಸಹಿತ ಕಾರು) | 2500 ಕಿ.ಮೀ | ರೂ.40,000/– + ಜಿ.ಎಸ್.ಟಿ | ರೂ.500/– |

1. ಟೆಂಡರ್ ಅರ್ಜಿಗಳನ್ನು ದಿನಾಂಕ:28/03/2026 ರಿಂದ 02/04/2026 ರೊಳಗೆ ಈ ಕಛೇರಿಯಲ್ಲಿ ಕಛೇರಿ ಅವಧಿಯಲ್ಲಿ ಬೆಳಗ್ಗೆ 10:00 ಗಂಟೆಯಿಂದ ಸಂಜೆ 5:30 ರವರೆಗೆ ಪಡೆಯಬಹುದು.
2. ಭರ್ತಿ ಮಾಡಿದ ಟೆಂಡರ್ ಅರ್ಜಿಗಳನ್ನು ಮುಚ್ಚಿದ ಲಕೋಟೆಯಲ್ಲಿ ದಿನಾಂಕ:04/04/2026 ರಂದು ಸಂಜೆ 5:30ರ ಒಳಗಾಗಿ ಈ ಕಛೇರಿಗೆ ತಲುಪುವಂತೆ ಅಂಚೆ ಮೂಲಕ/ಖುದ್ದಾಗಿ ಸಲ್ಲಿಸಬಹುದು.
3. ಟೆಂಡರ್‌ನ್ನು ದಿನಾಂಕ:06/04/2026ರಂದು ಸಂಜೆ 4:00 ಗಂಟೆಗೆ ಈ ಕಛೇರಿಯ ಅಧಿಕಾರಿಗಳ ಸಮಕ್ಷಮದಲ್ಲಿ ತೆರೆಯಲಾಗುವುದು.
4. ಷರತ್ತು ಹಾಗೂ ನಿಬಂಧನೆಗಳನ್ನು ಟೆಂಡರ್ ಫಾರಂನೊಂದಿಗೆ ಪಡೆಯುವುದು.

ಹೆಚ್ಚಿನ ಮಾಹಿತಿಗಾಗಿ ಈ ಕಛೇರಿಯ ಮುಖ್ಯಸ್ಥರನ್ನು ಕಛೇರಿಯ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

ಕಾರ್ಯನಿರ್ವಾಹಕ ಅಧಿಕಾರಿಗಳು,
ತಾಲೂಕು ಪಂಚಾಯತ, ಔರಾದ(ಬಾ).

# ಅಭಿವೃದ್ಧಿಗೆ ಸಹಕಾರ ಅಗತ್ಯ: ಲಕ್ಷ್ಮಿ



ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಒಂದು ಗ್ರಾಮವನ್ನು ಅಭಿವೃದ್ಧಿಯತ್ತ ಕೊಂಡೊಯ್ಯಲು ಗ್ರಾಮ ಪಂಚಾಯತ ಅಧ್ಯಕ್ಷರ, ಉಪಾಧ್ಯಕ್ಷರ, ಸದಸ್ಯರ ಹಾಗೂ ಗ್ರಾಮಸ್ಥರ ಸಹಕಾರ ಅಗತ್ಯ ಎಂದು ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ್ ಹೇಳಿದರು. ತಾಲೂಕಿನ ಬೇಮಳಖೇಡಾ ಗ್ರಾಮ ಪಂಚಾಯತ್ ವತಿಯಿಂದ ಹಮ್ಮಿಕೊಂಡಿದ್ದ ಗ್ರಾ.ಪಂ. ಅಧ್ಯಕ್ಷರ, ಉಪಾಧ್ಯಕ್ಷರ, ಸದಸ್ಯರ ಬೀಳ್ಕೊಡುಗೆ ಮತ್ತು ಅಭಿನಂದನಾ ಹಾಗೂ ಅಭಿವೃದ್ಧಿ ಅಧಿಕಾರಿಗಳ ಬೀಳುಕೊಡುಗೆ ಹಾಗೂ ಸ್ವಾಗತ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ನೌಕರಸ್ಥರಿಗೆ ವರ್ಗಾವಣೆ ಸಹಜ, ಸುಶಾಂತ ಅವರು ಬೇಮಳಖೇಡಾ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿ ಅಧಿಕಾರ ಸ್ವಿಕರಿಸಿದ ಬಳಿಕ ಗ್ರಾಮಸ್ಥರ ಸಹಕಾರದೊಂದಿಗೆ ಗ್ರಾಮದಲ್ಲಿ ಅಭಿವೃದ್ಧಿ ಕೆಲಸಗಳು ಮಾಡಿದ್ದಾರೆ. ಸಮಾಜದ ಕಟ್ಟ ಕಡೆಯ ವ್ಯಕ್ತಿವೂ ಸಹ ಕಚೇರಿಗೆ ಬಂದರೆ ಅಲೆದಾಡಿಸದೆ ಕೆಲಸಗಳು ಮಾಡಿಕೊಡಬೇಕೆಂದು ಸಿಬ್ಬಂದಿ ತಿಳಿಸಿದರು. ಬೇಮಳಖೇಡಾ ಗ್ರಾಮಸ್ಥರು ಮೃದು ಮನಸ್ಸಿನವರಾಗಿದ್ದಾರೆ ಎಂದರು. ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸುಶಾಂತಕುಮಾರ ಮಾತನಾಡಿ, ನನ್ನ ಸೇವಾ ಅವಧಿಯಲ್ಲಿ ಇಂತಹ ಸಹಾನುಭೂತಿ ಮತ್ತು ಸಹಕಾರ ಮನೋಭಾವ ಹೊಂದಿದ ಸದಸ್ಯರೊಂದಿಗೆ ಕಾರ್ಯನಿರ್ವಹಿಸಿರುವುದು ಹೆಮ್ಮೆಯ ಸಂಗತಿ.

ಸದಸ್ಯರ ಹಾಗೂ ಗ್ರಾಮಸ್ಥರ ಸಹಕಾರದಿಂದ ಗ್ರಾಮದಲ್ಲಿ ಅಭಿವೃದ್ಧಿ ಕಾರ್ಯಗಳು ಮಾಡಿದ್ದೇನೆ ಎಂದು ನನ್ನ ಮನಸ್ಸಿಗೆ ನೆಮ್ಮದಿ ಇದೆ ಎಂದರು. ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಪ್ರಭು ಮೆಂಘಾ ಪ್ರಾಸ್ತಾವಿಕವಾಗಿ ಮಾತನಾಡಿದರು. ಬೇಮಳಖೇಡಾ ಪಿಎ□□□ಸವಿತಾ, ಪಿಡಿಓ ವಿಜಯಕುಮಾರ್, ಬಸವರಾಜ ಚಟನಳ್ಳಿ, ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ನೂತನ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಹಣಮಂತಪ್ಪ, ಗ್ರಾಮ ಪಂಚಾಯತ್ ನಿಕಟ ಪೂರ್ವ ಅಧ್ಯಕ್ಷ ಮಂಜುನಾಥ್ ಸುಣಗಾರ, ಉಪಾಧ್ಯಕ್ಷೆ ರೇಷ್ಮೆ ರಾಜಕುಮಾರ, ಪಿಡಿಓಗಳಾದ ವಿಜಕುಮಾರ ಚಾಂಗಲೇರಾ, ರಾಜಕುಮಾರ ಪಂಚಾಳ, ಗ್ರಾಮದ ಪ್ರಮುಖರಾದ

ಬಸವರಾಜ ಚಟನಳ್ಳಿ, ವಿನೋದಕುಮಾರ್ ಗುಮ್ಮೆದ, ರಾಜಕುಮಾರ ಮಳಗಿ, ಸಂಜುರೆಡ್ಡಿ ಬೆಳ್ಳೂರ, ಬಕ್ಕಾರೆಡ್ಡಿ, ವೈಜಿನಾಥ ಕಮಠಾಣ, ಸಂಜು ಸಾತೋಳ್ಳಿ, ಮಂಜು ಸಾತೋಳ್ಳಿ, ರಾಜಕುಮಾರ ಕಮಠಾಣ, ಅಹ್ಮದ್ ಭಾಗ್ವನ, ರಾಜಕುಮಾರ ಭಾಸ್ಕರ್, ತುಕರಾಮ ಬುರಿ, ಮನೋಹರ್ ಚಿಟ್ಟಾ ಸೇರಿದಂತೆ ಗ್ರಾಮ ಪಂಚಾಯತ್ ಸಿಬ್ಬಂದಿ ವರ್ಗದವರು, ಗ್ರಾಮಸ್ಥರು ಉಪಸ್ಥಿತರಿದ್ದರು.

ಬಸವರಾಜ ಎದ್ಲಪುರ್ ನಿರೂಪಿಸಿದರು. ಅನೀಲಕುಮಾರ ಭಂಗುರ ಸ್ವಾಗತಿಸಿದರು. ಕರ ವಸುಲಿಗಾರ ಸಂತೋಷ ವಂದಿಸಿದರು.

# ಸಂಪಾದಕೀಯ



ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349

## ತಾಲೂಕು ಮಟ್ಟದ ಕಚೇರಿಗಳಲ್ಲಿ ವಿಲೇವಾರಿ ಆಗದ ಬಡವರ ಕಡತಗಳು ಕ್ರಮ ಯಾವಾಗ?

ಸರ್ಕಾರದ ವಿವಿಧ ಯೋಜನೆಗಳು, ಪಿಂಚಣಿ, ಜಮೀನು ದಾಖಲೆ, ವಾಸಸ್ಥಳ, ಪರಿಹಾರ ಧನ ಸೇರಿದಂತೆ ಹಲವಾರು ಸೌಲಭ್ಯಗಳಿಗಾಗಿ ಬಡಜನರು ತಾಲೂಕು ಮಟ್ಟದ ಕಚೇರಿಗಳಿಗೆ ಅರ್ಜಿ ಸಲ್ಲಿಸುತ್ತಾರೆ. ಆದರೆ ಆ ಕಡತಗಳು ತಿಂಗಳುಗಳ ಕಾಲ ಅಧಿಕಾರಿಗಳ ಮೇಜಿನ ಮೇಲೆ ಧೂಳು ತಿನ್ನುತ್ತಲೇ ಇರುವ ಪರಿಸ್ಥಿತಿ ಕಂಡು ಬರುತ್ತಿದೆ. ಇದರಿಂದಾಗಿ ಸಹಾಯದ ನಿರೀಕ್ಷೆಯಲ್ಲಿ ಇರುವ ಬಡಜನರು ಅನಗತ್ಯವಾಗಿ ಕಚೇರಿಗಳ ಸುತ್ತ ಅಲೆದಾಡುವ ದುಸ್ಥಿತಿ ಎದುರಿಸುತ್ತಿದ್ದಾರೆ.

ತಾಲೂಕು ಕಚೇರಿ ಎಂದರೆ ಜನರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವ ಸ್ಥಳವಾಗಿರಬೇಕು. ಆದರೆ ಅನೇಕ ಕಡೆಗಳಲ್ಲಿ ಕಡತಗಳನ್ನು ಸಮಯಕ್ಕೆ ಸರಿಯಾಗಿ ವಿಲೇವಾರಿ ಮಾಡದೆ ನಿರ್ಲಕ್ಷ್ಯತೋರಲಾಗುತ್ತಿದೆ ಎಂಬ ಆರೋಪಗಳು ಕೇಳಿಬರುತ್ತಿವೆ. ಕೆಲವು ಸಂದರ್ಭಗಳಲ್ಲಿ ಲಂಚದ ಆರೋಪಗಳೂ ಸಹ ಜನರಲ್ಲಿ ಅಸಮಾಧಾನ ಮೂಡಿಸುತ್ತಿವೆ. ಇದು ಸರ್ಕಾರದ ಆಡಳಿತದ ಮೇಲೆ ಜನರ ವಿಶ್ವಾಸವನ್ನು ಕುಗ್ಗಿಸುವಂತಾಗಿದೆ.

ಬಡಜನರು ದಿನಗೂಲಿ ಮಾಡಿ ಬದುಕು ನಡೆಸುವವರು. ಅವರು ತಮ್ಮ ಕೆಲಸ ಬಿಟ್ಟು ಹಲವು ಬಾರಿ ಕಚೇರಿಗೆ ಹೋಗಿ ಅಧಿಕಾರಿಗಳನ್ನು ಭೇಟಿಯಾಗುವುದು ಸುಲಭದ ವಿಚಾರವಲ್ಲ. ಆದರೂ ತಮ್ಮ ಅರ್ಜಿಯ ಬಗ್ಗೆ ಮಾಹಿತಿ ಪಡೆಯಲು ಮತ್ತೆ ಮತ್ತೆ ಹೋಗಬೇಕಾದ ಪರಿಸ್ಥಿತಿ ಉಂಟಾಗಿದೆ. ಇದು ಆಡಳಿತ ವ್ಯವಸ್ಥೆಯ ದೌರ್ಬಲ್ಯವನ್ನು ತೋರಿಸುತ್ತದೆ.

ಸರ್ಕಾರ ಜನಪರ ಆಡಳಿತ ನೀಡಲು ಬದ್ಧವಾಗಿದೆ ಎಂದು ಹೇಳುತ್ತದೆ. ಆದರೆ ತಾಲೂಕು ಮಟ್ಟದ ಕಚೇರಿಗಳಲ್ಲೇ ಕಡತಗಳು ವಿಲೇವಾರಿ ಆಗದೆ ಇದ್ದರೆ ಆ ಮಾತುಗಳಿಗೆ ಅರ್ಥವೇನು ಎಂಬ ಪ್ರಶ್ನೆ ಉದ್ಭವಿಸುತ್ತದೆ. ಮೇಲಾಧಿಕಾರಿಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಬಾಕಿ ಉಳಿದಿರುವ ಕಡತಗಳನ್ನು ತಕ್ಷಣ ವಿಲೇವಾರಿ ಮಾಡುವಂತೆ ಕಠಿಣ ಸೂಚನೆ ನೀಡಬೇಕು.

ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಅರಿತು ಜನರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಇಲ್ಲವಾದರೆ ಬಡಜನರ ಹಿತಾಸಕ್ತಿಗೆ ಧಕ್ಕೆ ಉಂಟಾಗುವುದರಲ್ಲಿ ಯಾವುದೇ ಸಂಶಯವಿಲ್ಲ.

ಸರ್ಕಾರ ಕೂಡ ತಾಲೂಕು ಕಚೇರಿಗಳ ಕಾರ್ಯಕ್ಷಮತೆಯನ್ನು ಪರಿಶೀಲಿಸಿ, ನಿರ್ಲಕ್ಷ್ಯ ತೋರಿಸುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಆಗ ಮಾತ್ರ ಬಡಜನರ ಕಡತಗಳು ಸಮಯಕ್ಕೆ ಸರಿಯಾಗಿ ವಿಲೇವಾರಿ ಆಗಿ, ಆಡಳಿತ ವ್ಯವಸ್ಥೆಯ ಮೇಲೆ ಜನರ ವಿಶ್ವಾಸ ಮತ್ತೆ ಹೆಚ್ಚಾಗುತ್ತದೆ.

# ವಿವಿಧೆಡೆ ವಿದ್ಯುತ್ ವ್ಯತ್ಯಯ

ಬೀದರ: ಬೀದರ ನಗರ ಉಪ ವಿಭಾಗದ 110 ಕೆವಿ ಚಿದ್ರಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ, ಬೀದರ ಗ್ರಾಮೀಣ ಮತ್ತುನಗರಉಪ–ವಿಭಾಗದ 110 ಕೆ.ವಿ. ಹಬ್ಸಿಕೋಟೆ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಹಾಗೂ ಬೀದರ ಗ್ರಾಮೀಣ ಮತ್ತು ಔರಾದ ಉಪ–ವಿಭಾಗದ 110 ಕೆ.ವಿ. ಜನವಾಡ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ಕೆಲಸದ ನಿಮಿತ್ತ ದುರಸ್ತಿ ಕೈಗೊಳ್ಳುತ್ತಿರುವುದರಿಂದ ದಿನಾಂಕ: 29–03–2026 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿದ್ಯುತ್ ಸರಬರಾಜಿರುವುದಿಲ್ಲ.ಬೀದರ ನಗರ ಉಪ ವಿಭಾಗದ 110 ಕೆವಿ ಚಿದ್ರಿ ವಿದ್ಯುತ್ ವಿತರಣಾ ಕೇಂದ್ರದ ವಿವರ: 11ಕೆವಿ ಅಮಲಾಪೂರ, 11ಕೆವಿ ಚಿದ್ರಿ, 11ಕೆವಿ ಏರಫೋರ್ಸ್, 11ಕೆವಿ ಟೌನ್, 11ಕೆವಿ ಬ್ರಿಮ್ಸ್, 11ಕೆವಿ ಸಿದ್ದಾರ್ಥ, 11ಕೆವಿ ಮಂಗಲಪೇಟ, 11ಕೆವಿ ಗುಂಪಾ, 11ಕೆವಿ ಫೌಯಸ್ಸಪೂರ್, 11ಕೆವಿ ಕೆಇಬಿ ಕ್ವಾಟರ್ಸ್, 11ಕೆವಿ ನಿಸರ್ಗ,11ಕೆವಿ ವಾಸು ಹಾಸ್ಪಿಟಲ್,11ಕೆವಿ ಬಸವ ನಗರ, 11ಕೆವಿ ಗಾಂಧಿಗಂಜ್

# ಅರಣ್ಯ ಸಚಿವ ಈಶ್ವರ ಖಂಡ್ರೆ ಬೀದರ ಜಿಲ್ಲಾ ಪ್ರವಾಸ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಮಾರ್ಚ.29 ರಿಂದ 31 ರವರೆಗೆ ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ.

ಅವರು ಮಾರ್ಚ.29 ರಂದು ಸಂಜೆ 4 ಗಂಟೆಗೆ ಬೀದರ್ ರಸ್ತೆ ಮೂಲಕ ಕಲಬುರಗಿ ಪ್ರಯಾಣಿಸಿ ಸಂಜೆ 6.30ಕ್ಕೆ ಕಲಬುರಗಿಯ ಸೇಡಂ ರಸ್ತೆಯ ಚಂದ್ರಕಾಂತ್ ಪಾಟೀಲ್ ಆಂಗ್ಲ ಮಾಧ್ಯಮ ಶಾಲಾ ಆವರಣದಲ್ಲಿ ಆಯೋಜಿಸಿರುವ ಶ್ರೀ ಬಿ.ಜಿ.ಪಾಟೀಲ್ ಅವರ 50ನೇ ವಿವಾಹ ವಾರ್ಷಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಸಂಜೆ 8 ಕ್ಕೆ ಕಲಬುರಗಿ ರಸ್ತೆ ಮೂಲಕ ಭಾಲ್ಕಿಗೆ ಪ್ರಯಾಣಿಸಿ ಅಲ್ಲಿಯೇ ವಾಸ್ತವ್ಯ ಹೂಡಲಿದ್ದಾರೆ.

ಮಾರ್ಚ್.30 ರಂದು ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆಯವರೆಗೆ ಭಾಲ್ಕಿಯ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಅಲ್ಲಿಯೇ ವಾಸ್ತವ್ಯ ಹೂಡಲಿದ್ದಾರೆ.

ಮಾರ್ಚ್.31 ರಂದು ಬೆಳಿಗ್ಗೆ 9ಕ್ಕೆ ಭಾಲ್ಕಿ ತಾಲ್ಲೂಕಿನ ಡೋಣೇಶ್ವರ ದೇವಾಲಯದಲ್ಲಿ ಶ್ರೀ ಡೋಣೇಶ್ವರ ಮಹಾಪೂಜಾ ಮಹೋತ್ಸವ ಮತ್ತು ವಿಶ್ವಶಾಂತಿಗಾಗಿ 44ನೇ ವರ್ಷದ ಜಪಯಜ್ಞ ಹಾಗೂ ಪ್ರಯೋಗಾತ್ಮಕ ಧರ್ಮ ಶಿಕ್ಷಣ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಬೆಳಿಗ್ಗೆ11 ರಿಂದ ಸಾಯಂಕಾಲ 4 ರವರೆಗೆ ಬೀದರ್ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಸಂಜೆ 5ಕ್ಕೆ ಬಸವಕಲ್ಯಾಣ ಥೇರ (ರತ) ಮಥದಾನ ಸಭಾ ಭವನದಲ್ಲಿ ಮಹಾಡ್ ಚೌಡಾರ ಕೇರೆ ಕ್ರಾಂತಿ ದಿನದ ಅಂಗವಾಗಿ ಆಯೋಜಿಸಿರುವ ರ್‍ಯಾಗಮೂರ್ತಿ ಮಾತಾ ರಮಾಬಾಯಿ ಅಂಬೇಡ್ಕರ್ ಅವರ ಜೀವನಗಾಥೆಯ 'ಮೀ ರಮಾಯಿ' ನಾಟಕೋತ್ಸವ ಮತ್ತು ಅಭಿನಂದನಾ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಸಂಜೆ 7ಕ್ಕೆ ಬಸವಕಲ್ಯಾಣ ರಸ್ತೆ ಮೂಲಕ ಭಾಲ್ಕಿಗೆ ಪ್ರಯಾಣಿಸಿ ಅಲ್ಲಿಯೇ ವಾಸ್ತವ್ಯ ಹೂಡಲಿದ್ದಾರೆಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ಕೌಟ್ಸ್ ಗೈಡ್ಸ್ ವತಿಯಿಂದ ಬೇಸಿಗೆ ಶಿಬಿರ



• ಮಲ್ಲಮ್ಮ ನುಡಿ ವಾರ್ತೆ ,ಮಸ್ಕಿ

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ, ಜಿಲ್ಲಾ ಸಂಸ್ಥೆ ರಾಯಚೂರು ಹಾಗೂ ಸ್ಥಳೀಯ ಸಂಸ್ಥೆ ಮಸ್ಕಿ ಮತ್ತು ಶ್ರೀ ಧರ್ಮಸ್ಥಳ ಮಂಜುನಾಥ ಪ್ರಾಥಮಿಕ ಮತ್ತು ಪ್ರೌಢ ಶಾಲೆ ಮಸ್ಕಿ ಇವರುಗಳ ಸಂಯುಕ್ತಾಶ್ರಯದಲ್ಲಿ ಪಟ್ಟಣದ ಎಸ್ ಡಿ ಎಂ ಶಾಲೆಯಲ್ಲಿ ಇಂದು ಬೇಸಿಗೆ ಶಿಬಿರ ಕಾರ್ಯಕ್ರಮ ವನ್ನು ದೈಹಿಕ ಶಿಕ್ಷಕರಾದ ಹಾಗೂ ಸ್ಕೌಟ್ಸ್ ಮತ್ತು ಗೈಡ್ಸ್ ಕಾರ್ಯದರ್ಶಿಗಳಾದ ಶಿವಪ್ಪ ಹಸಮಕಲ್ ರವರು ಉದ್ಘಾಟಿಸಿದರು.

ಈ ಬಾರಿ ಬೇಸಿಗೆ ಬಿಸಿಲು ಜಾಸ್ತಿ ಆಗಿದ್ದು ನೆಟ್ಟ ಗಿಡಗಳಿಗೆ ಜೂನ್ ವರೆಗೆ ನೀರಿನ ಅವಶ್ಯಕತೆ ಸಲುವಾಗಿ ನಮ್ಮ ಸಂಸ್ಥೆಯ ಯಿಂದ ನೀರಿನ ಸೇವೆ ಮಾಡಬೇಕು ಗಿಡಗಳನ್ನು ಉಳಿಸಲು ನಮ್ಮ ಸಂಸ್ಥೆಯ ಸದಸ್ಯರುಗಳು, ಪದಾಧಿಕಾರಿಗಳು, ವಿದ್ಯಾರ್ಥಿಗಳ ಪಾಲಕರು,ಹಾಗೂ ಕುಟುಂಬದ

ಸದಸ್ಯರ ಜನ್ಮದಿನವನ್ನು ಗಿಡಗಳಿಗೆ ನೀರು ಹಾಕುವುದರ ಮೂಲಕ ಪರಿಸರ ಸಂರಕ್ಷಣೆ ಮಾಡಲು ಮನಸು ಮಾಡಬೇಕು ಎಂದು ಮಲ್ಲಿಕಾರ್ಜುನ ನಾಯಿನೇಗಿಲಿ ರವರು ಮನವಿ ಮಾಡಿದರು. ಇದರ ಅಂಗವಾಗಿ ರೈತರ ಗದ್ದೆಗಳಿಗೆ ಹೋಗಿ ಮಕ್ಕಳು ಸಂಭ್ರಮ ಪಟ್ಟರು.

ಈ ವೇಳೆ, ಹನುಮಂತ ಯಾದವ ಸ್ಕೌಟ್ಸ್ ಮಾಸ್ಟರ್, ಚೇತನಾ ಗೈಡ್ ಕ್ಯಾಪ್ಟನ್ ಹಾಗೂ ಸ್ಕೌಟ್ಸ್ ಮತ್ತು ಗೈಡ್ಸ್ ಮಕ್ಕಳು ಭಾಗವಹಿಸಿದ್ದರು.

# ಸಾಧನ ಸಲಕರಣೆಗಳ ವಿತರಣೆ




• ಮಲ್ಲಮ್ಮ ನುಡಿ ವಾರ್ತೆ , ಕಲಬುರಗಿ

ಹೌಸಿಂಗ್ ಆಂಡ್ ಅರ್ಬನ್ ಡೆವಲಪ್‌ಮೆಂಟ್ ಕಾರ್ಪೋರೇಶನ್ ಲಿಮಿಟೆಡ್ (HUDCO)ಸಂಸ್ಥೆಯ ಸಿ.ಎಸ್.ಆರ್ ಯೋಜನೆಯಡಿ ಅಲಿಂಕೋ (ALIMCO)ಘಟಕ ಕಲಬುರಗಿ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ಜಿಲ್ಲಾ ಅಂಗವಿಕಲರ ಪುನರ್‌ವಸತಿ ಕೇಂದ್ರ (DDRC) ಕಲಬುರಗಿ ಇವುಗಳ ಸಹಯೋಗದೊಂದಿಗೆ ಕಲಬುರಗಿ ಅಲಿಂಕೋ ಘಟಕ ಹಾಗೂ ಡಿ.ಡಿ.ಆರ್.ಸಿ ಕೇಂದ್ರಟ್ರಾಮಾ ಕೇರ್ ಸೆಂಟರ್ ನೆಲಮಹಡಿಯಲ್ಲಿ ವಿಕಲಚೇತನ ಫಲಾನುಭವಿಗಳಿಗೆ ಹಮ್ಮಿಕೊಳ್ಳಲಾಗಿದ್ದ ಸಾಧನ ಸಲಕರಣೆ ವಿತರಣಾ ಕಾರ್ಯಕ್ರಮಕ್ಕೆ ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಅವರು ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಕಲಬುರಗಿ ಜಿಲ್ಲೆಯ ವಿವಿಧ ತಾಲೂಕಿನ 104 ವಿಕಲಚೇತನ ಫಲಾನುಭವಿಗಳಿಗೆ ವಿವಿಧ ಬಗೆಯ ಸುಮಾರು 62 ಲಕ್ಷ ಮೊತ್ತದ ಸಾಧನ ಸಲಕರಣೆಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಕಲಬುರಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸಾಧಿಕ ಹುಸೇನ್ ಖಾನ್, ವೈದ್ಯಕೀಯ ಅಧೀಕ್ಷಕ ಡಾ.ಶಿವಕುಮಾರ..ಆರ್ ಸೇರಿದಂತೆ ಡಾ. ರಾಜಶೇಖರ ಮಾಲಿಪಾಟೀಲ್, ಡಾ. ನಿಶ್ಯಾಂತ ಪಾಣಿಗಾಂವ,ಡಿಡಿಆರ್‌ಸಿ ಕಾರ್ಯದರ್ಶಿ ಅಬ್ದುಲ್ ವಾಹಿದ್ ಮುನೀರ್, ಅಲಿಂಕೋ ಸಂಸ್ಥೆಯ ಸಿಬ್ಬಂದಿ ಅಭಿಷೇಕಕುಮಾರ

ಆನಂದ ಮತ್ತು ಡಿ.ಡಿ.ಆರ್.ಸಿ ಕಚೇರಿಯ ಸಿಬ್ಬಂದಿಗಳು ವಿಕಲಚೇತನ ಕ್ಷೇತ್ರದಲ್ಲಿ ಕಾರ್ಯನಿರ್ವಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಅಧ್ಯಕ್ಷರು/ ಕಾರ್ಯದರ್ಶಿಗಳು ಹಾಗೂ ಕಲಬುರಗಿ ಜಿಲ್ಲೆಯ ವಿವಿಧ ತಾಲೂಕಿನ ಎಂ.ಆರ್.ಡಬ್ಲ್ಯೂ ಅವರು ಉಪಸ್ಥಿತರಿದ್ದರು.

# 32 ಸುಮೊಟು ಕೇಸ್ ದಾಖಲು



ರಾಯಚೂರು: ರಾಯಚೂರು ಜಿಲ್ಲೆಯಲ್ಲಿ ವಿವಿಧ ಪತ್ರಿಕೆಗಳು ಪ್ರಕಟಿಸಿದ ಕುಂದುಕೊರತೆಗಳ ವಿಶೇಷ ವರದಿಗಳನ್ನು ದಾಖಲೆಯಾಗಿರಿಸಿಕೊಂಡು ಸಾರ್ವಜನಿಕ ಹಿತಾಸಕ್ತಿಯಿಂದ ಒಟ್ಟು 32 ಸುಮೊಟು ಕೇಸಗಳನ್ನು ದಾಖಲಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರಾದ ಡಾ.ಟಿ.ಶ್ಯಾಮ್ ಭಟ್ ಅವರು ತಿಳಿಸಿದರು.

ಮಾರ್ಚ 25ರಿಂದ ರಾಯಚೂರು ಪ್ರವಾಸದಲ್ಲಿರುವ ಅವರು, ಮಾರ್ಚ 26ರಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ಹಾಗೂ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದ ಬಳಿಕ ಅವರು ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು.ಮಾರ್ಚ 26ರಂದು ನಡೆದ ವಿಚಾರಣೆಯಲ್ಲಿ 32 ಸುಮೊಟು ಕೇಸಗಳು ಹಾಗೂ ಬೇರೆಡೆಯಿಂದ ಆಯೋಗದಲ್ಲಿ ದಾಖಲಾದ 27 ದೂರುಗಳು ಸೇರಿದಂತೆ ಒಟ್ಟು 59 ಪ್ರಕರಣಗಳ ಬಗ್ಗೆ ವಿಚಾರಣೆ ನಡೆಸಿದ್ದೇವೆ. ಕೆಲವು ಪ್ರಕರಣಗಳ ಬಗ್ಗೆ ಅಧಿಕಾರಿಗಳಿಂದ ವರದಿ ಕೇಳಿದ್ದೇವೆ ಎಂದು ತಿಳಿಸಿದರು.

ಮಾರ್ಚ 25ರಂದು ರಾಯಚೂರು ಸಿಟಿಯ ವಿವಿಧೆಡೆ ಭೇಟಿ ನೀಡಿದ್ದೇವೆ. ಆಸ್ಪತ್ರೆಗಳ ಸ್ಥಿತಿಯನ್ನು ಖುದ್ದು ಅವಲೋಕಿಸಿದ್ದೇವೆ. ಪೊಲೀಸ್ ಠಾಣೆಗಳಲ್ಲಿನ ಕ್ರೈಮ್ ಪ್ರಕರಣಗಳ ವಿವರ ಪಡೆದಿದ್ದೇವೆ. ಈ ಬಗ್ಗೆ ಸಭೆಯಲ್ಲಿ ಅಧಿಕಾರಿಗಳಿಂದ ವಿವರಣೆ ಕೇಳಿದ್ದೇವೆ ಎಂದು ತಿಳಿಸಿದರು. ಮಾನವ ಹಕ್ಕುಗಳ ಆಯೋಗದಲ್ಲಿ 2022ರಿಂದ 8000 ಕೇಸಗಳಿದ್ದು, ಇವುಗಳ ವಿಚಾರಣೆ ನಡೆಸಿ ಬಹುತೇಕ ಪ್ರಕರಣಗಳನ್ನು ಇತ್ಯರ್ಥ ಪಡಿಸಿದ್ದೇವೆ. ಇನ್ನು 3600 ಪ್ರಕರಣಗಳು ಬಾಕಿ ಇವೆ. ಆಯೋಗದಲ್ಲಿ ಪ್ರತಿ ತಿಂಗಳು ಅಂದಾಜು 600ರಷ್ಟು ಮಾನವ ಹಕ್ಕುಗಳ ಉಲ್ಲಂಘನೆಗೆ ಸಂಬಂಧಿಸಿದ ಕೇಸಗಳು ದಾಖಲಾಗುತ್ತವೆ. ಒಂದು ದೂರನ್ನು ವಿಲೇ ಮಾಡಲು ಕನಿಷ್ಟ ಐದಾರು ತಿಂಗಳು ಸಮಯ ಹಿಡಿಯುತ್ತದೆ. ಆದಾಗ್ಯೂ ದೂರುಗಳ ವಿಲೇ ಪ್ರಕ್ರಿಯೆಯನ್ನು ಚುರುಕುಗೊಳಿಸಿದ್ದೇವೆ ಎಂದು ಅವರು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಆಯೋಗದ ನ್ಯಾಯಿಕ ಸದಸ್ಯರಾದ ಎಸ್.ಕೆ ವಂಟಿಗೋಡಿ ಉಪಸ್ಥಿತರಿದ್ದರು.

# ನಾಲ್ಕನೇ ದಿನಕ್ಕೂ ಮುಂದುವರಿದ ರೈತರ ಹೋರಾಟ: ನೀರಿಗಾಗಿ ಆಕ್ರೋಶ ಹೆಚ್ಚಳ



• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ಕೃಷ್ಣಾ ಎಡದಂಡೆ ಕಾಲುವೆ ಮೂಲಕ ನಾರಾಯಣಪುರ ಜಲಾಶಯದಿಂದ ರೈತರಿಗೆ ತಕ್ಷಣ ನೀರು ಬಿಡುಗಡೆ ಮಾಡುವಂತೆ ಒತ್ತಾಯಿಸಿ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಚುನಪ್ಪ ಪೂಜಾರಿ ಬಣದ ವತಿಯಿಂದ ನಡೆಯುತ್ತಿರುವ ಪ್ರತಿಭಟನೆ ನಾಲ್ಕನೇ ದಿನಕ್ಕೂ ಕಾಲಿಟ್ಟಿದೆ.

ರಾಜ್ಯ ಪ್ರಧಾನ ಸಂಚಾಲಕರಾದ ನಾಗಯ್ಯ ಸ್ವಾಮಿ ಎಸ್ ದೇಸಾಯಿ ಗುರು ಅವರ ನೇತೃತ್ವದಲ್ಲಿ ನಡೆಯುತ್ತಿರುವ ಈ ಹೋರಾಟದಲ್ಲಿ ರೈತರು ನೀರಿನ ಕೊರತೆಯಿಂದ ಬೆಳೆಗಳು ಒಣಗುತ್ತಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಬೆಳೆಗಳನ್ನು ಉಳಿಸಲು ತಕ್ಷಣ ನೀರು ಬಿಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.ನಾರಾಯಣಪುರ ಜಲಾಶಯದ ಮುಖ್ಯ ಇಂಜಿನಿಯರ್ ಕಚೇರಿ ಎದುರು ನಡೆಯುತ್ತಿರುವ ಈ ಪ್ರತಿಭಟನೆಯಲ್ಲಿ ಜಿಲ್ಲಾ ಅಧ್ಯಕ್ಷ ವಿಜಯ್ ಭರತ್ ಯಾದಗಿರಿ, ಜಿಲ್ಲಾ ಗೌರವ ಅಧ್ಯಕ್ಷ ಗುರುಲಿಂಗಪ್ಪ ಸಜ್ಜನ್, ತಾಲೂಕು ಗೌರವ ಅಧ್ಯಕ್ಷ ಶಂಕರ ಜಾದವ್, ಕೊಡೇಕಲ್ ಹೋಬಳಿ ಅಧ್ಯಕ್ಷ ದ್ಯಾಮಣ್ಣ ಗುಜ್ಜಾಲ ಸೇರಿದಂತೆ ಹಲವಾರು ಮುಖಂಡರು ಭಾಗವಹಿಸಿದ್ದಾರೆ.

ರೈತ ಮುಖಂಡರಾದ ವಿರಸಂಗಪ್ಪ ಕೊಡೇಕಲ್, ಅಮರೇಶ ಕಟ್ಟಿಮನಿ, ಬಸವರಾಜ ಜಡಜಲಿ, ಪ್ರಭುದೇವ ರಾಯನಪಾಳ್ಯ, ಬಾಲಪ್ಪ ದೊರೆ ಸೇರಿದಂತೆ ಅನೇಕ ರೈತರು ಹೋರಾಟದಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದಾರೆ.

ಬೇಡಿಕೆಗಳು ಈಡೇರಿಸುವವರೆಗೆ ಹೋರಾಟವನ್ನು ಮುಂದುವರಿಸುವುದಾಗಿ ರೈತರು ಎಚ್ಚರಿಕೆ ನೀಡಿದ್ದು, ಸರ್ಕಾರ ತಕ್ಷಣ ಸ್ಪಂದಿಸಿ ರೈತರಿಗೆ ನೀರು ಬಿಡುಗಡೆ ಮಾಡುವಂತೆ ಆಗ್ರಹಿಸಿದ್ದಾರೆ.

# ಹಾಸ್ಟೆಲ್ ಅವ್ಯವಸ್ಥೆ ಬಗ್ಗೆ ದೂರು: ಕಾವ್ಯಾರಾಣಿ ದಿಢೀರ್ ಭೇಟಿ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ರುಚಿ–ಶುಚಿ ಇಲ್ಲದ ಸಾಂಬಾರ್, ಅಕ್ಕಿ ತೊಳೆಯದ ಅನ್ನ, ಕುಡಿಯುವ ನೀರು ವಾಸನೆ, ಸ್ನಾನದ ಬಿಸಿ ನೀರಿಗೂ ತತ್ವಾರ, ಪ್ಯಾಡ್‌ಗೂ ಪ್ರಾಬ್ಲಮ್, ಶುಚಿತ್ವವಿಲ್ಲದ ಊಟದ ಹಾಲ್, ಫಸ್ಟ್ ಏಡ್ ಸಾಮಾಗ್ರಿಗಳಿಲ್ಲದ ಬಾಕ್ಸ್, ಕೋಳಿ ಮೊಟ್ಟೆ, ಚಿಕ್ಕನ್ ತ–ರೋದು ಸಾಲದಲ್ಲಿ, ನಿತ್ಯ ಟೊಮ್ಯಾಟೋ, ಬದನೆಕಾಯಿ, ಬೂದುಗುಂಬಳ ಸಾಂಬರ್. ಏನ್ ಕೇಳಿದರೂ.. ಅಡುಗೆ ಸಿಬ್ಬಂದಿ–ವಾರ್ಡನ್ ಒಬ್ಬರ ಮೇಲೊಬ್ಬರು ದೂರುವುದು ಸಾಮಾನ್ಯ. ಇದರಿಂದಾಗಿ ಹೊಟ್ಟೆ ತುಂಬ ಊಟನೂ ಕೊಡಲ್ಲಾ..

ಹೀಗೆ ಹತ್ತು ಹಲವು ಸಮಸ್ಯೆಗಳನ್ನು ಹಾಸ್ಟೆಲ್ ವಿದ್ಯಾರ್ಥಿಗಳು ಉಪ ವಿಭಾಗಾಧಿಕಾರಿ ಕೆ.ವಿ.ಕಾವ್ಯಾರಾಣಿ ಎದುರು ತೆರೆದಿಟ್ಟರು. ವಿದ್ಯಾರ್ಥಿನಿಯರ ದೂರು, ವಾರ್ಡನ್ ಅಸಹಾಯಕತೆ, ಅಡುಗೆ ಸಿಬ್ಬಂದಿಗಳ ತಾತ್ಸಾರ ಧೋರಣೆ ಹೀಗೆ ಎಲ್ಲವನ್ನೂ ಸಮಾಧಾನದಿಂದಲೇ ಪರಾಮರ್ಶಿಸಿದ ಎ.ಸಿ., 15 ದಿನ ಸಮಯ ಕೊಡುತ್ತೇ, ಸರಿಯಾಗದಿದ್ದರೆ ಕ್ರಮ ಕೈಗೊಳ್ಳುವೆನೆಂದು ವಾರ್ಡನ್ ಹಾಗೂ ಅಡುಗೆ ಸಿಬ್ಬಂದಿಗಳನ್ನು ತರಾಟೆಗೆ ತೆಗೆದುಕೊಂಡರು.



ಬಳಿಕ ಮಾತನಾಡಿ, ಹಾಸ್ಟೆಲ್ ನ ವಿದ್ಯಾರ್ಥಿನಿಯರೂ ಕೂಡಾ ಸ್ವೇಚ್ಛಾಚಾರ ನಡೆಸದೆ ಓದಿನತ್ತ ಗಮನ ನೀಡಿ, ನಿಮ್ಮ ಪೋಷಕರ ನಂಬಿಕೆ ಉಳಿಸಿಕೊಳ್ಳಿರೆಂದು ಕಿವಿ ಮಾತು ಹೇಳಿದರು. ಧೂಳು ಮೆತ್ತಿಕೊಂಡಿದ್ದ ಶುದ್ಧ ಕುಡಿಯುವ ನೀರಿನ ಘಟಕ, ಅಡುಗೆ ಕೋಣೆಯ ಅವ್ಯವಸ್ಥೆ, ಮುದ್ದೆಯಂತಾಗಿದ್ದ ಅನ್ನ, ಕೇವಲ ಟೊಮ್ಯಾಟೋ, ಕುಂಬಳ, ಬದನೆಕಾಯಿ ಒಣಗಿದ ತರಕಾರಿಗಳು, ಅಲ್ಲದೆ ಹಾಸ್ಟೆಲ್‌ನ ಅಸಮರ್ಪಕ ನಿರ್ವಹಣೆ ಕಂಡು ಅವಕ್ಕಾದರಲ್ಲದೆ, ಉಪ ವಿಭಾಗಾಧಿಕಾರಿ ಅವರು ವಾರ್ಡನ್ ಪುಷ್ಪ ಹಾಗೂ ಅಡುಗೆ ಸಿಬ್ಬಂದಿಯನ್ನು ತರಾಟೆ ತೆ–ಗೆದುಕೊಂಡು ಎಚ್ಚರಿಕೆ ನೀಡಿದರು. ಎಸಿ ಅವರ ಪ್ರಶ್ನೆಗೆ ವಾರ್ಡನ್ ಪುಷ್ಪ ಇಬ್ಬರು ಖಾಯಂ ಅಡುಗೆ ಸಹಾಯಕರು ಹೊರಗುತ್ತಿಗೆಯವರಿಬ್ಬರು ಇದ್ದಾರೆ. ಅವರ ನಡುವಿನ ಹೊಂದಾಣಿಕೆಯ ಕೊರತೆಯಿಂದಾಗಿ ಕೆಲವೊಮ್ಮೆ ತೊಂದರೆಗಳಾಗುತ್ತಿದೆ. ಈ ಕುರಿತು ಹಿರಿಯ ಅಧಿಕಾರಿಗಳ ಗಮನಕ್ಕೆ ತಂದಿದ್ದೇನೆ. ಸರಕಾರದಿಂದ ಪ್ಯಾಡ್ ವಿತರಣೆ ವಿಳಂಬವಾದ ಕಾರಣ ತಾತ್ಕಾಲಿಕವಾಗಿ ಸ್ಥಳೀಯವಾಗಿ ಖರೀದಿಸಿ ವಿತರಿಸಲು ಹಿರಿಯ ಅಧಿಕಾರಿಗಳ ಅನುಮತಿ ನೀಡಿದ್ದು, ಜನವರಿಯಿಂದಲೇ ನೀಡ ಬೇಕಿತ್ತು. ತಪ್ಪಾಗಿದೆ ನಾಳೆಯೇ ವಿತರಿಸುತ್ತೇನೆ ಎಂದು ಸಬೂಬು ಹೇಳಿದರು.ಸಿಬ್ಬಂದಿ ಬದಲಾಯಿಸಿ; ಹಾಸ್ಟೆಲ್‌ನಲ್ಲಿನ ಅವ್ಯವಸ್ಥೆ ಬಗ್ಗೆ ದೂರುಗಳು ಬಂದ ಹಿನ್ನಲೆ ದಿಢೀರ್ ಭೇಟಿ ನೀಡಿ ಪರಿಶೀಲಿಸಿದ್ದೇನೆ. ಇಲ್ಲಿ ಅವ್ಯವಸ್ಥೆ ತಾಂಡವವಾಡುತ್ತಿದೆ. ಅಡುಗೆ ಸಹಾಯಕರಲ್ಲಿ ಹೊಂದಾಣಿಕೆಯಿಲ್ಲದಿದ್ದರೆ ವರ್ಗಾವಣೆ ಮಾಡಿರಿ. ಗುತ್ತಿಗೆ ನೌಕರರು ಸರಿಯಾಗಿ ಕರ್ತವ್ಯ ನಿರ್ವಹಿಸಿದ್ದರೆ, ಕೆಲಸದಿಂದ ವಜಾಗೊಳಿಸಿ, ಹೊಸಬರನ್ನು ನೇಮಿಸಿಕೊಳ್ಳಿ. ಇಲ್ಲವೇ ಬೇರೆ ಹಾಸ್ಟಲ್‌ಗೆ ಕಳುಹಿಸಿರೆಂದು ಎಸಿ ನಿರ್ದೇಶಿಸಿ, ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ, ಶುಚಿತ್ವ ಮತ್ತು ನೈರ್ಮಲ್ಯ ಕಾಪಾಡಿಕೊಂಡು ಮುಂದೆ ದೂರು ಬಾರದಂತೆ ಕ್ರಮ ವಹಿಸಬೇಕು.15 ದಿನಗಳಲ್ಲಿ ಸರಿಪಡಿಸಿಕೊಳ್ಳಿ, ಪರಿಸ್ಥಿತಿ ಹೀಗೇ ಮುಂದುವರೆದಿದ್ದಲ್ಲಿ ಶಿಸ್ತಿನ ಕ್ರಮಕ್ಕೆ ಮುಂದಾಗುತ್ತೇನೆಂದು ಎಚ್ಚರಿಸಿದರು.

ಪ್ಯಾಡ್ ಕೊಡ್ತಿಲ್ಲಾ: ಪ್ಯಾಡ್ ನೀಡಿಲ್ಲ ಮೇಡಂ ಕಷ್ಟ ಆಗುತ್ತಿದೆ. ಊಟದ ಮೆನುವಿನಂತೆ ಊಟ ನೀಡುತ್ತಾರೆ. ಆದರೆ ಶುಚಿ, ರುಚಿ ಇರುವುದಿಲ್ಲ. 60 ವಿದ್ಯಾರ್ಥಿನಿಯರಿಗೆ ಅಗತ್ಯ ಪ್ರಮಾಣದ ಚಿಕನ್ ಊಟ ನೀಡುತ್ತಿಲ್ಲ. ಡೈನಿಂಗ್ ಟೇಬಲ್ ಶುಚಿಯಾಗಿರುವುದಿಲ್ಲ. ಅಡುಗೆ ಸಹಾಯಕರು ನಾಲ್ವರಿದ್ದರೂ ಶುಚಿತ್ವವನ್ನು ಕಾಪಾಡುತ್ತಿಲ್ಲ. ರಾತ್ರಿ ಊಟದ ವೇಳೆ ಕಾರಣಾಂತರಗಳಿಂದ ತಡವಾಗಿ ಬಂದರೆ ಬಾಳೆಹಣ್ಣು, ಮೊಟ್ಟೆ ಸಿಗುವುದೇ ಇಲ್ಲ, ಕೆಲವೊಮ್ಮೆ ಅಡುಗೆ ಸಿಬ್ಬಂದಿ–ವಾರ್ಡನ್‌ಗಳು ಇರೋದೆ ಇಲ್ಲಾ ಎಂದು ವಿದ್ಯಾರ್ಥಿನಿಯರು ದೂರಿದರು. ವಿದ್ಯಾರ್ಥಿನಿಯರು ವ್ಯಾಸಂಗದ ಹೊರತು ಇನ್ಯಾವುದೇ ಚಟುವಟಿಕೆಯಲ್ಲಿ ಭಾಗಿಯಾಗಬಾರದು. ಸಮಯದ ಪಾಲನೆ ಪಾಲಿಸಬೇಕು. ಯಾವುದೇ ಆರೋಪ ಬರದಂತೆ ಎಚ್ಚರ ವಹಿಸಿ ಎಂದರು. ಇಲಾಖೆಯ ಅಧಿಕಾರಿ ರೇಣುಕಾಪ್ರಸಾದ್ ಇದ್ದರು.

ಅಂಗಡಿಯಿಂದ ಪಡಿತರ; ಹಾಸ್ಟೆಲ್‌ಗೆ ಪಡಿತರ ಸರಬರಾಜು ಗುತ್ತಿಗೆ ಪಡೆದಿರುವಾತ ಅಗತ್ಯ ಪಡಿತರ ಪೂರೈಸದೆ, ನಗರದ ಅಂಗಡಿಯಲ್ಲಿ ಪಡೆದುಕೊಳ್ಳಲು ಸೂಚಿಸಿರುವಂತೆ ನಾವೇ ಪದಾರ್ಥಗಳನ್ನು ತರಿಸಿಕೊಳ್ಳುತ್ತಿದ್ದೇವೆಂದು ಎ.ಸಿ. ಅವರ ಪ್ರಶ್ನೆಗೆ ವಾರ್ಡನ್ ಪುಷ್ಪ ಸ್ಪಷ್ಟಪಡಿಸಿದರು.

# ಪುಟ್ಟಣ್ಣ ಕಣಗಾಲ್ ಮನೆ ವಸ್ತು ಸಂಗ್ರಹಾಲಯವನ್ನಾಗಿ ಘೋಷಣೆ



• ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ

ಅಂತೂ ಇಂತೂ ಚಿತ್ರ ಬ್ರಹ್ಮ ಎಸ್ ಆರ್ ಪುಟ್ಟಣ್ಣ ಕಣಗಾಲ್ ರವರ ಮನೆ ಜೀರ್ಣೋದ್ಧಾರಕ್ಕೆ ಬಡ್ಜೆಟ್ ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯರವರು ಘೋಷಣೆ ಮಾಡಲಾಗಿದೆ ಆದರೆ ಪ್ರಗತಿಯ ಬಗ್ಗೆ ಚಿತ್ರ ರಸಿಕರು ಕಾತುರರಾಗಿದ್ದಾರೆ.

ಮೈಸೂರು ಜಿಲ್ಲೆ ಪಿರಿಯಾಪಟ್ಟಣ ತಾಲೂಕಿನ ಗಡಿಭಾಗದಲ್ಲಿರುವ ಕಣಗಾಲು ಗ್ರಾಮದ ಎ□□□ರ್ ಪುಟ್ಟಣ್ಣ ಅವರ ಮನೆ ಪ್ರಸ್ತುತವಾಗಿ ಸಂಪೂರ್ಣ ಶೀತಿಲಾ ವ್ಯವಸ್ಥೆಯಲ್ಲಿದ್ದು ಯಾವ ಗಳಿಗೆಯಲ್ಲಿ ನೆಲ ಸೇರುವ ಭೀತಿಯಲ್ಲಿದೆ.

ಕಳೆದ 1933ನೇ ಸಾಲಿನ ಡಿ. 1 ರಂದು ಎಸ್ ಪಿ ರಾಮಸ್ವಾಮಿ ಹಾಗೂ ಸುಬ್ಬಮ್ಮ ದಂಪತಿಗೆ ಜನಿಸಿದ ಎಸ್ ಆರ್ ಪುಟ್ಟಣ್ಣ ಬಡತನದಲ್ಲಿ ಬೆಳೆದು ಕನ್ನಡ ಚಲನಚಿತ್ರರಂಗದಲ್ಲಿ ಅತ್ಯಂತ ಮೇರು ನಿರ್ದೇಶಕರಾಗಿ ಹೆಸರು ಮಾಡಿದವರಾಗಿದ್ದಾರೆ. ಭರವಸೆಯಾಗಿ ಉಳಿದಿತ್ತು : ಎಸ್ ಆರ್ ಪುಟ್ಟಣ್ಣನವರ ನೆನಪಿಗಾಗಿ ಗ್ರಾಮದಲ್ಲಿ ಸ್ಮಾರಕ ಭವನ ನಿರ್ಮಾಣಕ್ಕೆ ಹಣ ಬಿಡುಗಡೆ ಮಾಡುವುದಾಗಿ ಸಿಎಚ್ ವಿಜಯಶಂಕರ್ ಅರಣ್ಯ ಸಚಿವರಾಗಿದ್ದ ಸಂದರ್ಭದಲ್ಲಿ ಭರವಸೆ ನೀಡಿದ್ದರು. ಅದೇ ರೀತಿ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ಎಸ್ ಟಿ ಸೋಮಶೇಖರ್ ರವರು ಸಹ ಪುಟ್ಟಣ್ಣ ರವರ ಮನೆಗೆ ಭೇಟಿ ನೀಡಿ ದುರಸ್ತಿ ಕ್ರಮ ಕೈಗೊಂಡು ಅವರ ನೆನಪಿಗಾಗಿ ಉದ್ಯಾನವನ ನಿರ್ಮಿಸುವುದಾಗಿ ಹೇಳಿದ್ದರು. ಬಸವರಾಜು ಬೊಮ್ಮಾಯಿ ರವರು ಮುಖ್ಯಮಂತ್ರಿ ಆಗಿದ್ದಾಗ ಪುಟ್ಟಣ್ಣ ಕಣಗಾಲ್ ರವರ ಮನೆಯನ್ನು ವಸ್ತು ಸಂಗ್ರಹಾಲಯವಾಗಿ ರೂಪಿಸುವುದಾಗಿ ಜನರ ಮುಂದೆ ಪ್ರಸ್ತಾಪಿಸಿ ಯಾರಿದ್ದಲು ಕಾರ್ಯರೂಪಕ್ಕೆ ಬಾರಲಿಲ್ಲ ಎಂಬ ಜನರ ನಿರಾಸೆಗೆ ಈಗ ಚಿಗುರುಡಿದಂತಾಗಿದೆ.

ಸೀನಿ ಜಗತ್ತಿನ ಜೀವಂತಿಕೆ ಆಗಲಿ: ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ಕಳೆದ ಶುಕ್ರವಾರ 2026– 27ನೇ ಸಾಲಿನ ಬಜೆಟ್ ನಲ್ಲಿ ದಿವಂಗತ ಎಸ್ ಆರ್ ಪುಟ್ಟಣ್ಣ ಕಣಗಾಲ್ ಅವರ ನಿವಾಸವನ್ನು ವಸ್ತು ಸಂಗ್ರಹಾಲಯವನ್ನಾಗಿ ನಿರ್ಮಾಣ ಮಾಡಲು ಘೋಷಣೆ ಮಾಡಿದ್ದಾರೆ.

ಘೋಷಣೆ ಏನೋ ಆಗಿದೆ ಆದರೆ ಯಾವ ರೀತಿ ಹೇಗೆ ಮ್ಯೂಸಿಯಂ ನಿರ್ಮಾಣವಾಗಲಿದೆ ಎಂಬ ಬಗ್ಗೆ ರೂಪರೇಷೆಗಳು ಮುಂದಿನ ಹಂತದಲ್ಲಿ ಮೈದಳೆಯಬೇಕಿದೆ ಪುಟ್ಟಣ್ಣನವರ ಮನೆಯನ್ನು ಸಂಪೂರ್ಣ ಜೀರ್ಣೋದ್ಧಾರ ಮಾಡಿ ಇವರ ಆ ಕಾಲದಲ್ಲಿ ಚಿತ್ರ ನಿರ್ದೇಶನ ಸಂದರ್ಭದಲ್ಲಿ ಬಳಸುತ್ತಿದ್ದ ವಸ್ತುಗಳನ್ನು ಪ್ರದರ್ಶನಕ್ಕೆ ಇಟ್ಟರೆ ಪ್ರಯೋಜನವಿಲ್ಲ ಹೀಗೆ ಮಾಡಿದಲ್ಲಿ ಇದೊಂದು ಕೇವಲ ಸಮಾಧಿ ಆದಂತಾಗುತ್ತದೆ ಇದನ್ನು ವೀಕ್ಷಣೆ ಮಾಡಲು ಜನರು ಅಲ್ಲಿಗೂ ಹೋಗುವುದು ಅನುಮಾನ.

ಹೀಗಾಗಿ ಸ್ಮಾರಕವನ್ನು ನಿರಂತರ ಚಟುವಟಿಕೆಯ ತಾಣವನ್ನಾಗಿ ರೂಪಿಸಬೇಕಾಗಿದೆ ಅವರ ಮನೆಯನ್ನು ನವೀಕರಣ ಮಾಡಿ ಅವರು ಬಳಸುತ್ತಿದ್ದ ವಸ್ತುಗಳನ್ನು ಸಂಗ್ರಹ ಮಾಡಿ ಇಡುವುದಷ್ಟೇ ಅಲ್ಲ ಅಲ್ಲಿ ಚಲನಚಿತ್ರಕ್ಕೆ ಸಂಬಂಧಪಟ್ಟ ಚಟುವಟಿಕೆ ಶಿಬಿರ. ತರಬೇತಿ ಹಾಗೂ ವಿಚಾರ ಸಂಕಿರಣಗಳಂತಹ ಕಾರ್ಯಕ್ರಮಗಳನ್ನು ಸಕ್ರಿಯವಾಗಿ ಹಮ್ಮಿಕೊಳ್ಳಬೇಕು ಆಗ ಮಾತ್ರ ಅದೊಂದು ಜೀವಂತಿಕೆಯ ತಾಣವಾಗುತ್ತದೆ ಹೊಸ ಹೊಸ ಆಲೋಚನೆಗಳು ಮೂಡುತ್ತವೆ ಎಂಬುದು ಚಿತ್ರ ರಸಿಕರ ಅನಿಸಿಕೆ ಆಗಿದೆ.

ನಿರೀಕ್ಷೆಗಳು : ಆಸಕ್ತ ಯುವಕ ಕಲಾವಿದರಿಗಾಗಿ ಶಿಬಿರ ಆಯೋಜನೆ. ನಿರ್ದೇಶನ ನಟನೆ ನಿರ್ಮಾಣ ಪ್ರಸಾದನ ಸೇರಿದಂತೆ ಆಗಾಗ ಚಟುವಟಿಕೆ ಕುರಿತು ಕಾರ್ಯಗಾರ. ಆಧುನಿಕತೆಗೆ ತಕ್ಕಂತೆ ಸಿನಿಮಾ ಬಳಿಯಲ್ಲಿ ಡಿಜಿಟಲ್ ಎಐ ತಂತ್ರಜ್ಞಾನಗಳ ಅಳವಡಿಕೆ ಕುರಿತು ಮಾಹಿತಿ. ತಿಂಗಳಿಗೊಮ್ಮೆ ಆದರೂ ಸಿನಿ ಕಲಾವಿದರಿಂದ ಚರ್ಚೆ. ಮಿನಿ ಸ್ಟುಡಿಯೋ ರೂಪಗೊಳ್ಳಲಿ.

ಕೋರಕ್ಕೊಂದು ವಿಶೇಷ ಅಭಿನಯ ಚಟುವಟಿಕೆ. ಕಲಾಪ್ರಿಯರು ಬಂದು ಸೇರುವಂತ ಯಾವುದೇ ಚಟುವಟಿಕೆಗಳು. ಪ್ರಸಿದ್ಧವಾಗಲಿದೆ : ಮುಖ್ಯಮಂತ್ರಿಗಳು ಬಜೆಟ್ಟಿನಲ್ಲಿ ಖ್ಯಾತ ನಿರ್ದೇಶಕ ಎಸ್ ಆರ್ ಪುಟ್ಟಣ್ಣ ಕಣಗಾಲ್ ಅವರ ಮನೆಯನ್ನು ಮ್ಯೂಸಿಯಂ ಮಾಡುವ ಬಗ್ಗೆ ಘೋಷಿಸಿದ್ದಾರೆ ಇದೊಂದು ತಾಲೂಕಿಗೆ ಮತ್ತೊಂದು ಹೆಮ್ಮೆಯ ಸಂಗತಿ ರಾಜ್ಯದಲ್ಲಿ ಕಣಗಾಲು ಗ್ರಾಮ ಮತ್ತಷ್ಟು ಪ್ರಸಿದ್ಧಿಯಾಗಲಿದೆ.

ಕೆ ವೆಂಕಟೇಶ್ ಸಚಿವರು ಪಶು ಸಂಗೋಪನ ಹಾಗೂ ರೇಷ್ಮೆ ಇಲಾಖೆ.

## ಔರಾದನಲ್ಲಿ ಕಾರ್ಮಿಕರಿಗೆ ಸುರಕ್ಷತಾ ಕಿಟ್ ವಿತರಣೆ

# ಕಾರ್ಮಿಕರಿಗೆ ಎಲ್ಲ ಯೋಜನೆ ತಲುಪಿಸಿ: ಚವ್ಹಾಣ

• ಮಲ್ಲಮ್ಮ ನುಡಿ ವಾರ್ತೆ ಔರಾದ

ಕಾರ್ಮಿಕರ ಹಿತದೃಷ್ಟಿಯಿಂದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಜಾರಿಗೊಳಿಸಿದ ಎಲ್ಲ ಯೋಜನೆಗಳನ್ನು ಅರ್ಹ ಕಾರ್ಮಿಕರಿಗೆ ಪ್ರಮಾಣಿಕವಾಗಿ ತಲುಪಿಸಬೇಕು ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದರು.

ಕಾರ್ಮಿಕ ಇಲಾಖೆ, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಸಂಯುಕ್ತಾಶ್ರಯದಲ್ಲಿ ಔರಾದ(ಬಿ) ಪಟ್ಟಣದ ಶಾಸಕರ ಕಛೇರಿ ಆವರಣದಲ್ಲಿ ಮಾ.27ರಂದು ಏರ್ಪಡಿಸಿದ್ದ ಕಾರ್ಮಿಕರಿಗಾಗಿ ಸುರಕ್ಷತಾ ಕಿಟ್ ಮತ್ತು ಆರ್‌ಪಿಎಲ್ ತರಬೇತಿ ಪ್ರಮಾಣ ಪತ್ರಗಳನ್ನು ವಿತರಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಕರಿಗಾಗಿ ಪಿಂಚಣಿ, ದುರ್ಬಲತೆ ಪಿಂಚಣಿ, ಟ್ರೈನಿಂಗ್ ಕಮ್ ಟೂಲ್‌ಕಿಟ್ ಸೌಲಭ್ಯ, ಹೆರಿಗೆ ಸೌಲಭ್ಯ, ಅಂತ್ಯಕ್ರಿಯೆ ವೆಚ್ಚ, ಶೈಕ್ಷಣಿಕ ಸಹಾಯಧನ, ವೈದ್ಯಕೀಯ ಸಹಾಯಧನ, ಅಪಘಾತ ಪರಿಹಾರ, ಮದುವೆ ಸಹಾಯಧನ, ತಾಯಿಮಗು ಸಹಾಯ ಹಸ್ತದಂತಹ ಹತ್ತು ಹಲವು ಯೋಜನೆಗಳಿವೆ. ಈ ಎಲ್ಲ ಯೋಜನೆಗಳ ಬಗ್ಗೆ ಪ್ರತಿಯೊಬ್ಬ ಕಾರ್ಮಿಕರಿಗೆ ತಿಳಿಸಬೇಕು. ಎಲ್ಲ ಕಾರ್ಮಿಕರು ಕಾರ್ಮಿಕ ಕಾರ್ಡಗಳನ್ನು ಮಾಡಿಸಿಕೊಂಡು ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.



ಕಾರ್ಮಿಕರು ಪ್ರತಿದಿನ ಕಾಯಕದತ್ತ ಹೆಚ್ಚಿನ ಗಮನ ಕೊಡುವುದರಿಂದ ಅವರಿಗೆ ಯೋಜನೆಗಳ ಬಗ್ಗೆ ತಿಳಿಯುವುದಿಲ್ಲ. ಹಾಗಾಗಿ ತಿಳಿದವರು ಅವರಿಗೆ ಸೂಕ್ತ ಮಾರ್ಗದರ್ಶನ ನೀಡಬೇಕು.

ಒಂದು ಒಳ್ಳೆಯ ಸಂಘಟನೆಯನ್ನು ರಚಿಸಿಕೊಂಡು ಎಲ್ಲರಿಗೂ ಸರ್ಕಾರದ ಸೌಲಭ್ಯಗಳನ್ನು ಕಲ್ಪಿಸಲು ಯತ್ನಿಸಬೇಕು. ರಸ್ತೆ ಅಪಘಾತ ಅಥವಾ ಮತ್ತಿತರೆ ಸಮಸ್ಯೆಗಳು ಎದುರಾದರೆ ಒಬ್ಬರಿಗೊಬ್ಬರು ಪರಸ್ಪರ ಸಹಕಾರ ಮಾಡಿಕೊಳ್ಳಬೇಕು. ಎಲ್ಲ ಕಾರ್ಮಿಕರಿಗೆ ಸಮಾನ ಕೂಲಿ ಸಿಗುವಂತೆ ನೋಡಿಕೊಳ್ಳಬೇಕು. ಯಾವುದೇ ರೀತಿಯ ಸಮಸ್ಯೆ ಎದುರಾದರೆ ಕಾರ್ಮಿಕ ಇಲಾಖೆಯ ಕಛೇರಿಗೆ ಅಥವಾ ತಮ್ಮನ್ನು ನೇರವಾಗಿ ಭೇಟಿಯಾಗಬೇಕು ಎಂದು ತಿಳಿಸಿದರು.

ನಾನು ಕೂಡ ಬಡತನ ಕಂಡಿ–ದ್ದರಿಂದ ಬಡವರ ಕಷ್ಟಗಳೇನು ? ಕಾರ್ಮಿಕರ ಸಂಕಷ್ಟಗಳೇನು ಎಂಬುದು ಚನ್ನಾಗಿ ತಿಳಿದಿದ್ದೇನೆ. ಕಾರ್ಮಿಕರಿಗೆ ಇಲಾಖೆಯ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ದೊಡ್ಡ ಕಾರ್ಯಕ್ರಮ ಆಯೋಜಿಸಲಾಗಿದೆ. ಎಲ್ಲರೂ ಇದರ ಸದುಪಯೋಗ ಪಡೆಯಬೇಕು. ಅಧಿಕಾರಿಗಳು ಜಾಗೃತಿ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಏರ್ಪಡಿಸಬೇಕು. ಕಾರ್ಮಿಕರಿಗಾಗಿ ಬಂದಿರುವ ಎಲ್ಲ ಕಿಟ್‌ಗಳು ಹಾಗೂ ಮತ್ತಿತರೆ ಎಲ್ಲ ಸೌಲಭ್ಯಗಳನ್ನು ತಲುಪಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಕಾರ್ಮಿಕ ಇಲಾಖೆಯ ಕಾರ್ಮಿಕ ನಿರೀಕ್ಷಕರಾದ ರಾಹುಲ ಬಿ.ರತ್ನಾಕರ ಅವರು ಮಾತನಾಡಿ, ಕಾರ್ಮಿಕರಿಗಾಗಿ ಸರ್ಕಾರ ಹಲವು ಯೋಜನೆಗಳನ್ನು ತಂದಿದೆ. ಅವುಗಳ ಸದುಪಯೋಗ ಪಡೆಯಬೇಕಿದ್ದಲ್ಲಿ ಕಡ್ಡಾಯವಾಗಿ ಕಾರ್ಮಿಕ ಕಾರ್ಡ್ ಹೊಂದಿರಬೇಕು. ಮತ್ತು ಪ್ರತಿ ವರ್ಷ ನವೀಕರಣ ಮಾಡಿಕೊಳ್ಳಬೇಕು ಎಂದು ಹೇಳಿದರು.

ಪ್ರಬೋಧಿತ ಸರ್ವಿಸ್ ಇಂಡಿ–ಯಾ ಪ್ರೈವೇಟ್ ಲಿಮಿಟೆಡ್‌ನ ವ್ಯವಸ್ಥಾಪಕ ಸುರೇಶಕುಮಾರ ಅವರು ಸರ್ಕಾರದ ಯೋಜನೆಗಳು ಮತ್ತು ಆರ್‌ಪಿಎಲ್ ತರಬೇತಿಯ ಕುರಿತು ಮಾಹಿತಿ ನೀಡಿದರು.

ತಹಸೀಲ್ದಾರರಾದ ಮಹೇಶ ಪಾಟೀಲ, ಮುಖಂಡರಾದ ಧೊಂಡಿಬಾ ನರೋಟೆ, ಶಿವರಾಜ ಅಲ್ಮಾಜೆ, ಶಿವಾಜಿರಾವ ಕಾಳೆ, ಶ್ರೀಮಂತ ಪಾಟೀಲ, ಕೇರಬಾ ಪವಾರ, ಶ್ರೀನಿವಾಸ ಖೂಬಾ, ರಾಮ ನರೋಟೆ ಸೇರಿದಂತೆ ಸಂಘದ ಪ್ರಮುಖರಾದ ಅನೀಲಕುಮಾರ ಭುಜಂಗ, ಅಭಿಮಾನ, ವಿನಾಯಕ, ನಿತೀನ, ಲಕ್ಷ □□ಣ, ಮಂಜುನಾಥ, ರಘುನಾಥ ನಜೀರಸಾಬ ಸೇರಿದಂತೆ ಔರಾದ(ಬಿ) ಹಾಗೂ ಕಮಲನಗರ ತಾಲ್ಲೂಕಿನಿಂದ ಆಗಮಿಸಿದ್ದ ಕಾರ್ಮಿಕರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು. ಸುನೀಲಕುಮಾರ ವಾಗ್ಮಾರೆ ನಿರೂಪಿಸಿದರು. ಬಸವರಾಜ ಹಳ್ಳೆ ಸ್ವಾಗತಿಸಿದರು. ಓಂಕಾರ ವಂದಿಸಿದರು.

ಕಾರ್ಯಕ್ರಮದಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗಾಗಿ 434 ಆರ್‌ಪಿಎಲ್ ತರಬೇತಿ ಪ್ರಮಾಣ ಪತ್ರ, ಕಿಟ್ ಹಾಗೂ 400 ಕಾರ್ಮಿಕರಿಗೆ ಸುರಕ್ಷತಾ ಕಿಟ್‌ಗಳನ್ನು ವಿತರಿಸಲಾಯಿತು. ಇದೇ ವೇಳೆ ಕಾರ್ಮಿಕರಿಗಾಗಿ ಉಚಿತ ಆರೋಗ್ಯ ತಪಾಸಣೆ ನಡೆಸಲಾಯಿತು.

# ಅಂಬೇಡ್ಕರ್, ಬಾಬು ಜಗಜೀವನ್ ರಾಮ್ ಜಯಂತಿ ಅರ್ಥಪೂರ್ಣ ಆಚರಣೆಗೆ ಅಗತ್ಯ ಸಿದ್ಧತೆ ಕೈಗೊಳ್ಳಿ: ಡಿಸಿ



• ಮಲ್ಲಮ್ಮ ನುಡಿ ವಾರ್ತೆ ಹೊಸಪೇಟೆ

ಹಸಿರು ಕ್ರಾಂತಿ ಹರಿಕಾರ ಹಾಗೂ ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನ್ ರಾಂ ರವರ 119ನೇ ಜಯಂತಿ ಮತ್ತು ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ರವರ 135ನೇ ಜಯಂತಿಯನ್ನು ಏಪ್ರಿಲ್ 14 ರಂದು ವಿಜೃಂಭಣೆಯಿಂದ ಮತ್ತು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಕವಿತಾ ಎಸ್, ಮನ್ನಿಕೇರಿ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಆಯೋಜಿಸಲಾಗಿದ್ದ ಮಹನಿಯರ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಮಹನೀಯರ ಜಯಂತಿಯನ್ನು ಸಂಭ್ರಮದಿಂದ ಹಬ್ಬದಂತೆ ಆಚರಿಸಲಾಗುಗವುದು. ಏಪ್ರಿಲ್ 5 ರಂದು ಹಸಿರು ಕ್ರಾಂತಿ ಹರಿಕಾರ ಡಾ.ಬಾಬು ಜಗಜೀವನ ರಾಂ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುವುದು. ಜಯಂತಿಯ ಅಂಗವಾಗಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸಾಂಕೇತಿಕವಾಗಿ ಆಚರಿಸಲಾಗುವುದು. ತದನಂತರ ಏಪ್ರಿಲ್ 14 ರಂದು ಅಂಬೇಡ್ಕರ್ ಜಯಂತಿ ಹಾಗೂ ಬಾಬು ಜಗಜೀವನ ರಾಂ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಜಿಲ್ಲಾ ಕೇಂದ್ರಸೇರಿದಂತೆ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಈ ಇಬ್ಬರು ಮಹಾನ್ ನಾಯಕರ ಜಯಂತಿಗಳನ್ನು ಸರ್ಕಾರದ ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರನ್ನು ಆಹ್ವಾನಿಸಬೇಕು. ನಗರದ ಪ್ರಮುಖ ವೃತ್ತಗಳು ವಿದ್ಯುತ್ ದೀಪಗಳಿಂದ ಅಲಂಕರಿಸಬೇಕು. ಜಯಂತಿ ಕೇವಲ ಮೆರವಣಿಗೆಗೆ ಸೀಮಿತವಾಗಬಾರದು. ಇಂದಿನ ಯುವ ಪೀಳಿಗೆಗೆ ಅಂಬೇಡ್ಕರ್ ಅವರ ಸಂವಿಧಾನಾತ್ಮಕ ಮೌಲ್ಯಗಳು ಹಾಗೂ ಜಗಜೀವನ್ ರಾಮ್ ಅವರ ಕೃಷಿ ಮತ್ತು ಆಡಳಿತಾತ್ಮಕ ಸುಧಾರಣೆಗಳ ಬಗ್ಗೆ ಅರಿವು ಮೂಡಿಸಲು ಉಪನ್ಯಾಸ ಆಯೋಜಿಸಬೇಕು. ಅದಷ್ಟೇ ಅಲ್ಲದೆ ಎಲ್ಲಾ ಶಾಲೆ-ಕಾಲೇಜುಗಳಲ್ಲಿ

ಪ್ರಬಂಧ ಮತ್ತು ಭಾಷಣ ಸ್ಪರ್ಧೆಗಳನ್ನು ಹಮ್ಮಿಕೊಳ್ಳಬೇಕು. ಜಯಂತಿಯ ಅಂಗವಾಗಿ ಎಲ್ಲಾ ಸರ್ಕಾರಿ ಮತ್ತು ಖಾಸಗಿ, ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಡ್ಡಾಯವಾಗಿ ಮಹನಿಯರ ಜಯಂತಿ ಆಚರಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಯಂತಿ ಅಂಗವಾಗಿ ಭವ್ಯ ಮೆರವಣಿಗೆ:

ಹಂಪಿಯಿಂದ ಭವ್ಯಜ್ಯೋತಿ ತರುವ ಮೂಲಕ ಬಳ್ಳಾರಿ ರಸ್ತೆಯ ಜೈಭೀಮ್ ವೃತ್ತದಲ್ಲಿ ಜ್ಯೋತಿ ಹಸ್ತಾಂತರಿಸಿ ಮೆರವಣಿಗೆ ಅಧಿಕೃತವಾಗಿ ಚಾಲನೆ ನೀಡಲಾಗುವುದು. ಮೆರವಣಿಗೆಯು ಜೈಭೀಮ್ ವೃತ್ತ, ಮಸೀದಿ ವೃತ್ತ, ಪುಣ್ಯಮೂರ್ತಿ ವೃತ್ತ, ಪುನೀತ್ ರಾಜ್ ಕುಮಾರ್ ವೃತ್ತದ ಮೂಲಕ ವಿವಿಧ ಕಲಾ ತಂಡಗಳೊಂದಿಗೆ ಭವ್ಯ ಮೆರವಣಿಗೆಯು ಅಂಬೇಡ್ಕರ್ ವೃತ್ತ ತಲುಪಿ ಮುಕ್ತಾಯವಾಗಲಿದೆ. ಈ ವೇಳೆ ಯಾವುದೇ ಘರ್ಷಣೆ ಆಗದಂತೆ ಶಾಂತಿಯುತವಾಗಿ ಮತ್ತು ಸೌಹಾರ್ದಯುತವಾಗಿ

ನಡೆಸಲು ಪ್ರತಿಯೊಬ್ಬರು ಸಹಕರಿಸಬೇಕು. ಎಲ್ಲಾ ದಲಿತ ಸಂಘಟನೆಗಳು ಹಾಗೂ ಪ್ರಗತಿಪರ ಸಂಘಟನೆಗಳ ಪದಾಧಿಕಾರಿಗಳೊಂದಿಗೆ ಸಮನ್ವಯದೊಂದಿಗೆ ಕಾರ್ಯಕ್ರಮ ಯಶಸ್ವಿಗೊಳಿಸೋಣ. ಇದಕ್ಕೆ ಸಮಾಜದ ಸಂಘ ಸಂಸ್ಥೆಗಳ ಸಹಕಾರವು ಅತ್ಯಗತ್ಯ ಎಂದರು. ಜಯಂತಿಯ ದಿನದಂದು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಎಸ್ ಎಸ್ ಎಲ್ ಸಿ ಮತ್ತು ಪಿ.ಯು.ಸಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ, ಕಲೆ, ಶಿಕ್ಷಣ, ಕ್ರೀಡೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವ್ಯಕ್ತಿಗಳನ್ನು ಗುರುತಿಸಿ ಸನ್ಮಾನಿಸಲಾಗುವುದು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜಾಹ್ನವಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ್,

ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣ, ಪೊಲೀಸ್ ಉಪಾಧೀಕ್ಷಕ ಡಾ.ಮಂಜುನಾಥ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ವೈ.ಎ.ಕಾಳೆ ಸೇರಿದಂತೆ ವಿವಿಧ ಅಧಿಕಾರಿಗಳು, ಸಂಘ ಸಂಸ್ಥೆಯ ಪದಾಧಿಕಾರಿಗಳು, ಜನಪ್ರತಿನಿಧಿಗಳು ಇದ್ದರು.

# ಸಫಾಯಿ ಕಾರ್ಮಿಕರಿಗೆ ಯೋಜನೆ ಸಕಾಲಕ್ಕೆ ತಲುಪಲಿ



ಮಲ್ಲಮ್ಮನುಡಿವಾರ್ತೆ ವಿಜಯನಗರ

ಜಿಲ್ಲೆಯಲ್ಲಿನ ಸಫಾಯಿ ಕರ್ಮಚಾರಿ ಕಾರ್ಮಿಕರನ್ನು ಗುರುತಿಸಿ, ಅವರಿಗೆ ಸರ್ಕಾರದ ಯೋಜನೆಗಳನ್ನು ಸಕಾಲಕ್ಕೆ ಒದಗಿಸುವ ಮೂಲಕ ಸಾಮಾಜಿಕ ಮತ್ತು ಆರ್ಥಿಕವಾಗಿ ಮುನ್ನಲೆಗೆ ತರಲು ಅಧಿಕಾರಿಗಳು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಕಟ್ಟುನಿಟ್ಟಿನ ಸೂಚನೆ ನೀಡಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಮ್ಯಾನ್ಯುಯಲ್ ಸ್ಕಾ ವೆಂಜರ್ ಅನುಷ್ಠಾನ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮ್ಯಾನುಯಲ್ ಸ್ಕಾವೆಂಜರ್ ಕಾರ್ಮಿಕರಿಗೆ ಕಾಲಕಾಲಕ್ಕೆ ನಿರಂತರವಾಗಿ ಆರೋಗ್ಯ ತಪಾಸಣೆ ನಡೆಸಬೇಕು. ಕಾರ್ಮಿಕರ ಆರೋಗ್ಯದ ಹಿತದೃಷ್ಠಿಯಿಂದ ಗ್ಲೌಸ್, ಬೂಟು ಇನ್ನಿತರೆ ಅತ್ಯಾಧುನಿಕ ಸುರಕ್ಷಿತ ಪರಿಕರಗಳನ್ನು ಒದಗಿಸಬೇಕು. ಈ ವೃತ್ತಿಯಲ್ಲಿರುವ ಕಾರ್ಮಿಕರನ್ನು ಗುರುತಿಸಿ ಸರ್ಕಾರದ ಯೋಜನೆಗಳು ಹಾಗೂ ಶೈಕ್ಷಣಿಕ ಸಾಲ, ಸೌಲಭ್ಯ ನೀಡುವ ಮೂಲಕ ಸಮಾಜದ ಮುನ್ನೆಲೆಗೆ ತರಬೇಕಿದೆ. ಈ ನಿಟ್ಟಿನಲ್ಲಿ ಸರ್ಕಾರದ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವಲ್ಲಿ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ನಿರ್ದೇಶಿಸಿದರು.

ಇತ್ತೀಚೆಗೆ ಸ್ಥಳೀಯ ಆಡಳಿತ ಸಂಸ್ಥೆಗಳಲ್ಲಿ ಅನಧಿಕೃತವಾಗಿ ಕಾರ್ಮಿಕರ ಗುರುತಿನ ಚೀಟಿ ಬಳಸಿಕೊಂಡು ಅನಾಮಿಕ ವ್ಯಕ್ತಿಗಳು ಕಾರ್ಯ ನಿರ್ವಹಿಸುತ್ತಿರುವುದು ಗಮನಕ್ಕೆ ಬಂದಿದೆ. ಇದು ಕಾನೂನಾತ್ಮಕ ಅಪರಾಧ. ಕಾರ್ಮಿಕರಿಗೆ ವೈಯಕ್ತಿಕ ಸಮಸ್ಯೆಗಳಿದ್ದಲ್ಲಿ ಸ್ವ-ಯಂ ನಿವೃತ್ತಿ ಪಡೆಯಬಹುದು. ಅದಲ್ಲದೇ ತಮ್ಮ ಗುರುತಿನ ಚೀಟಿ ನೀಡಿ ಬೇರೊಬ್ಬರಿಗೆ ಕರ್ತವ್ಯಕ್ಕೆ ನಿಯೋಜಿಸುವಂತಿಲ್ಲ. ಅಂತಹ ಪ್ರಕರಣಗಳು ಕಂಡು ಬಂದಲ್ಲಿ ಅಥವಾ ಮರುಕಳಿಸಿದಲ್ಲಿ ನಿರ್ದಾಕ್ಷಿಣ್ಯವಾಗಿ ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದರು. ಸದಸ್ಯರೊಬ್ಬರು ಮಾತನಾಡಿ, ಜಿಲ್ಲೆಯಲ್ಲಿ 8 ಮ್ಯಾನ್ಯುಯಲ್ ಸ್ಕಾ ವೆಂಜರ್ ಕಾರ್ಮಿಕರಿದ್ದು, ಕೆಲವರಿಗೆ ರಾಜೀವ್ ಗಾಂಧಿ ವಸತಿ ಯೋಜನೆಯಡಿ ಮನೆ ಮಂಜೂರಾಗಿದ್ದು ನಿವೇಶನ ಕೊರತೆಯಿಂದ ಮನೆ ನಿರ್ಮಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ತ್ವರಿತವಾಗಿ ನಿವೇಶನ ಗುರುತಿಸಿ ಜಾಗ ಕಲ್ಪಿಸಿಕೊಟ್ಟಲ್ಲಿ ಮನೆ ನಿರ್ಮಾಣಕ್ಕೆ ಅನುಕೂಲವಾಗಲಿದೆ ಎಂದು ಸಭೆಯ ಗಮನಕ್ಕೆ ತಂದರು. ಇದಕ್ಕೆ ಪ್ರತಿಕ್ರಿಯಿಸಿದ ಅಧಿಕಾರಿಗಳು ಮಲಪನಗುಡಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಅರ್ಹ ಫಲಾನುಭವಿಗಳಿಗೆ ನಿವೇಶನ ಗುರುತಿಸಿ ಹಂಚಿಕೆ ಮಾಡಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ಸ್ಥಳೀಯ ಆಡಳಿತ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಆಧಾರದಡಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಿಗೆ ಸಕಾಲಕ್ಕೆ ವೇತನ ಹಾಗೂ ಇಎಸ್ಐ ಮತ್ತು ಭವಿಷ್ಯನಿಧಿ ತುಂಬಿಲ್ಲ. ಮರಿಯಮ್ಮನಹಳ್ಳಿ ಹೋಬಳಿಯಲ್ಲಿ 8 ಜನ ಹೊರಗುತ್ತಿಗೆ ಆಧಾರದಡಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಆದರೆ ಅವರಿಗೆ ಕಳೆದ 9 ತಿಂಗಳಿಂದ ವೇತನ ಪಾವತಿಸಿಲ್ಲ. ಭವಿಷ್ಯನಿಧಿ ಸೌಲಭ್ಯವಿಲ್ಲ ಎಂದು ಸಮಿತಿ ಸದಸ್ಯರೊಬ್ಬರು ಆರೋಪಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳು ಈ ಬಗ್ಗೆ ಸಮಗ್ರವಾಗಿ ಪರಿಶೀಲನೆ ನಡೆಸಲಾಗುವುದು, ಆರೋಪ ದೃಡಪಟ್ಟಲ್ಲಿ ಸಂಸ್ಥೆಗೆ ಶೋಕಾಸ್ ನೋಟೀಸ್ ನೀಡಲಾಗುವುದು. ಅದಕ್ಕೂ ನಿರ್ಲಕ್ಷ ವಹಿಸಿದಲ್ಲಿ ಅಂತಹ ಸಂಸ್ಥೆಯನ್ನು ಕಪ್ಪು ಪಟ್ಟಿಗೆ ಸೇರಿಸಲು ಕ್ರಮವಹಿಸಲಾಗುವುದು ಎಂದು ತಿಳಿಸಿದರು.

# 6ನೇ ತರಗತಿಗೆ ಪ್ರವೇಶ

• ಮಲ್ಲಮ್ಮ ನುಡಿ ವಾರ್ತೆ ಹೊಸಪೇಟೆ

2026-27ನೇ ಸಾಲಿಗೆ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಪ್ರತಿಷ್ಠತ ಶಾಲೆಗಳಲ್ಲಿ ಅರ್ಹತಾ ಪರೀಕ್ಷೆ ಮೂಲಕ 6ನೇ ತರಗತಿಗೆ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ಏಪ್ರಿಲ್ 15ರಿಂದ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಲಿದ್ದು, ಮೇ 4 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಪ್ರತಿಷ್ಠಿತ ಶಾಲೆಗಳಿಗೆ ಪ್ರವೇಶಾತಿ ಪಡೆಯಲು 5ನೇ ತರಗತಿಯಲ್ಲಿ ಶೇ.60ರಷ್ಟು ಅಂಕ ಪಡೆದಿರಬೇಕು. ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷಗಳೊಳಗಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ವಿದ್ಯಾರ್ಥಿಗಳನ್ನು ಮೇ 19 ರಂದು ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಲಾಗುವುದು. ಅರ್ಜಿಗಳನ್ನು ಆಯಾ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗಳಲ್ಲಿ ಅಥವಾ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗಳಲ್ಲಿ ಪಡೆಯಬಹುದು.

ಹೆಚ್ಚಿನ ಮಾಹಿತಿಗಾಗಿ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹೊಸಪೇಟೆ ದೂರವಾಣಿ ಸಂಖ್ಯೆ : 9742423530, ಕೂಡ್ಲಿಗಿ 7022223200, ಹರಪನಹಳ್ಳಿ 7899465098, ಹಡಗಲಿ 9901980862, ಹಗರಿಬೊಮ್ಮನಹಳ್ಳಿ 7349418044 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವಯಂ ಉದ್ಯೋಗ ತರಬೇತಿಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಹೊಸಪೇಟೆ

ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ ವತಿಯಿಂದ ಜಿಲ್ಲೆಯ ಗ್ರಾಮೀಣ ಭಾಗದ ಆಸಕ್ತ ಅಭ್ಯರ್ಥಿಗಳಿಂದ ಸ್ವಯಂ ಉದ್ಯೋಗ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಸ್ವಯಂ ಉದ್ಯೋಗ ತರಬೇತಿ ಅವಧಿಯಲ್ಲಿ 34 ದಿನಗಳ ಬ್ಯೂಟಿಪಾರ್ಲರ್ ತರಬೇತಿ ಹಾಗೂ 31 ದಿನಗಳ ಮೊಬೈಲ್ ರಿಪೇರಿ ತರಬೇತಿ ನೀಡಲಾಗುವುದು. ಗ್ರಾಮೀಣ ಅಭ್ಯರ್ಥಿಗಳಿಗೆ ಮೊದಲ ಆಧ್ಯತೆ ನೀಡಲಾಗುವುದು. ತರಬೇತಿ ವೇಳೆಯಲ್ಲಿ ಊಟದ ವ್ಯವಸ್ಥೆಯೂ ಸಹ ಒದಗಿಸಲಾಗುತ್ತದೆ. ಅರ್ಜಿ ಸಲ್ಲಿಸಲು ಇರಬೇಕಾದ ಅರ್ಹತೆ: ಅರ್ಜಿದಾರರು 18 ರಿಂದ 50 ವರ್ಷಗಳ ಮೀರಿರಬಾರದು. ಕನಿಷ್ಠ 8ನೇ ತರಗತಿ ವಿದ್ಯಾಭ್ಯಾಸ ಹೊಂದಿರಬೇಕು. ಜಿಲ್ಲೆಯ ಗ್ರಾಮೀಣ ಭಾಗದವರಾಗಿರುವುದರ ಜತೆಗೆ ಸ್ವಯಂ ಉದ್ಯೋಗದಲ್ಲಿ ಆಸಕ್ತಿ ಹೊಂದಿರಬೇಕು. ಏಪ್ರಿಲ್ 06 ರಂದು ಆಯ್ಕೆ ಪ್ರಕ್ರಿಯೆ ಸಂದರ್ಶನ ನಡೆಸಲಾಗುವುದು. ಏಪ್ರಿಲ್ 08 ರಿಂದ ತರಬೇತಿ ಆರಂಭವಾಗಲಿದೆ. ಆಸಕ್ತರು ಆಧಾರ್ ಕಾರ್ಡ್, ಪಡಿತರ ಚೀಟಿ, ಪಾಸ್ ಪೋರ್ಟ್ ಸೈಜ್ 3 ಇತ್ತೀಚಿನ ಭಾವಚಿತ್ರ, ಅಂಕಪಟ್ಟಿ, ಜಾತಿ ಮತ್ತು ಆದಾಯ ಪ್ರಮಾಣ ಜೆರಾಕ್ಸ್ ಪ್ರತಿಗಳೊಂದಿಗೆ ಸರ್ಕಾರಿ ಬಾಲಕಿಯರ ಪದವಿಪೂರ್ವ ಕಾಲೇಜು ಆವರಣ, ಪೈ-ಹೋಟೆಲ್ ಎದುರು ಬಸ್ ನಿಲ್ದಾಣ ಹತ್ತಿರದ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ 9663471468, 6360467103, 9741987137 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.



ಕುಕನೂರ : ತಾಲೂಕಿನ ರಾವಣಕಿ ಗ್ರಾಮದ ಪ್ರಾಣದೇವ ಈರಣ್ಣ ದೇವರ ಮಹಾ ರಥೋತ್ಸವವು ಇಂದು ಸಾಯಂಕಾಲ ಸಾವಿರಾರು ಭಕ್ತ ಸಮೂಹದೊಂದಿಗೆ ವಿಜೃಂಭಣೆಯಿಂದ ಸಂಪನ್ನಗೊಂಡಿತು.

# ಗಣಿತ ಸಂಖ್ಯೆಗಳ ಆಟವಲ್ಲ, ವ್ಯವಸ್ಥಿತ ಅಧ್ಯಯನ

• ಮಲ್ಲಮ್ಮ ನುಡಿ ವಾರ್ತೆ, ಕೆಂಭಾವಿ

ಗಣಿತಶಾಸ್ತ್ರಕ್ಕೂ ನಿಸರ್ಗಕ್ಕೂ ಅವಿನಾಭಾವ ಸಂಬಂಧವಿದೆ, ಜೀವನದ ಪ್ರತಿಯೊಂದು ಹಂತದಲ್ಲೂ ಗಣಿತಶಾಸ್ತ್ರ ಹಾಸುಹೊಕ್ಕಾಗಿದೆ ಎಂದು ಗಣಿತಶಾಸ್ತ್ರ ವಿಭಾಗದ ಮುಖ್ಯಸ್ಥ ಐಕ್ಯೂಎಸಿ ಸಂಯೋಜಕ ಶಶಿಕುಮಾರ ಎತ್ತಿಮನಿ ಹೇಳಿದರು.

ಪಟ್ಟಣದ ಶ್ರೀಮತಿ ಗಂಗಾಬಾಯಿ ಶಾಂತಗೌಡ ಪೊಲೀಸ್ ಪಾಟೀಲ್ ಮೆಮೋರಿಯಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಗುರುವಾರ ಹಮ್ಮಿಕೊಂಡಿದ್ದ ಒಂದು ದಿನದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಸ್ಪರ್ಧಾತ್ಮಕ ಯುಗದಲ್ಲಿ ಗಣಿತಶಾಸ್ತ್ರದ ಬಗ್ಗೆ

ವಿದ್ಯಾರ್ಥಿಗಳು ಹೆಚ್ಚು ಹೆಚ್ಚು ತಿಳಿದುಕೊಳ್ಳುವ ಆಸಕ್ತಿ ಅಭಿರುಚಿ ಬೆಳಿಸಿಕೊಂಡಾಗ ಬದುಕಲಿ ಭರವಸೆ ಮೂಡುತ್ತದೆ ಎಂದವರು,

ಗಣಿತಶಾಸ್ತ್ರ ಕೇವಲ ಸಂಖ್ಯೆಗಳ ಆಟವಲ್ಲ ಅದು ಸುವ್ಯವಸ್ಥಿತ ಅಧ್ಯಯನ ಪದ್ಧತಿಯಾಗಿದ್ದು, ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಗಣಿತದ ಜ್ಞಾನ ಹೆಚ್ಚಿಸಿಕೊಳ್ಳಲು ಉಪನ್ಯಾಸ ಮಾಲಿಕೆ ಸಹಕಾರಿಯಾಗಲಿದೆ ಎಂದರು.

ಮುದ್ನಾಳ ವಸತಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಕಾಂತಪ್ಪ ಚವ್ಹಾಣ ( ಸ್ಪರ್ಧಾತ್ಮಕ ಗಣಿತ) ಹಾಗೂ ಲಿಂಗಸುಗೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕಿ ನಜ್ಮಾ ಬೇಗಂ

(ಗಣಿತ ಮತ್ತು ಭರವಸೆ) ಕುರಿತು ವಿಶೇಷ ಉಪನ್ಯಾಸ ನೀಡಿದರು. ಪ್ರಾಂಶುಪಾಲ ಡಾ ನಾಗಪ್ಪ ಚಾವಲ್ಕರ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಉಪನ್ಯಾಸಕರಾದ ಡಾ ಸಿದ್ದಲಿಂಗ ರಾಠೋಡ, ಮಲ್ಲಿಕಾರ್ಜುನ ಮರಡ್ಡಿ, ನಸ್ರೀನ್ ತಾಜ್, ಡಾ ಯಂಕನಗೌಡ ಪಾಟೀಲ್,

ಅತಿಥಿ ಉಪನ್ಯಾಸಕರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.




# ಬೋರಬಂಡಾ ಸುಕ್ಷೇತ್ರದಲ್ಲಿ ಭವ್ಯ ಶ್ರೀರಾಮನವಮಿ: ಭಕ್ತರ ಸಮಾಗಮ



• ಮಲ್ಲಮ್ಮ ನುಡಿ ವಾರ್ತೆ, ಗುರುಮಠಕಲ್




ತಾಲ್ಲೂಕಿನ ಬೋರಬಂಡಾ ಸುಕ್ಷೇತ್ರದ ಶ್ರೀ ಲಕ್ಷ್ಮೀ ತಿಮ್ಮಪ್ಪ ದೇವಾಲಯದಲ್ಲಿ ಶುಕ್ರವಾರ ಶ್ರೀರಾಮನವಮಿ ಉತ್ಸವವು ಭವ್ಯವಾಗಿ ಹಾಗೂ ವೈಭವದಿಂದ ನೆರವೇರಿತು.

ಬೆಳಿಗ್ಗೆಯಿಂದಲೇ ದೇವಾಲಯದಲ್ಲಿ ಶ್ರೀ ಲಕ್ಷ್ಮೀ ತಿಮ್ಮಪ್ಪ ದೇವರಿಗೆ ವಿಶೇಷ ಪೂಜೆಗಳು ನೆರವೇರಿದ್ದು, ಮನಮೋಹಕ ಅಲಂಕಾರಗಳಿಂದ ದೇವಾಲಯ ಕಂಗೊಳಿಸಿತು.

ಶ್ರೀರಾಮನವಮಿ ಪ್ರಯುಕ್ತ ವಿಶೇಷ ಹೋಮ-ಹವನ, ಸೀತಾರಾಮ ಕಲ್ಯಾಣೋತ್ಸವ, ರಥೋತ್ಸವ, ತೊಟ್ಟಿಲು ಕಾರ್ಯಕ್ರಮ ಹಾಗೂ ಭಜನ ಕಾರ್ಯಕ್ರಮಗಳು ಭಕ್ತಿಭಾವದಿಂದ ಜರುಗಿದವು. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಕ್ತರು ಭಾರೀ ಸಂಖ್ಯೆಯಲ್ಲಿ ಭಾಗವಹಿಸಿ ಉತ್ಸವದ ವೈಭವವನ್ನು ಮತ್ತಷ್ಟು ಹೆಚ್ಚಿಸಿದರು.

ದೂರದೂರಿನಿಂದ ಆಗಮಿಸಿದ ಭಕ್ತರಿಗೆ ಪ್ರಸಾದ ವ್ಯವಸ್ಥೆಯನ್ನು ಸುಸಜ್ಜಿತವಾಗಿ ಮಾಡಲಾಗಿದ್ದು, ಸಂಘಟಕರು ಭಕ್ತರ ಸೇವೆಯಲ್ಲಿ ತೊಡಗಿಸಿಕೊಂಡಿದ್ದರು. ಅಸಂಖ್ಯಾತ ಭಕ್ತರ ಸಮಾಗಮದಿಂದ ಬೋರಬಂಡಾ ಕ್ಷೇತ್ರ ಉತ್ಸವದ ಸಂಭ್ರಮದಿಂದ ಕಂಗೊಳಿಸಿತು.

> “ಲೋಕ ಕಲ್ಯಾಣಕ್ಕಾಗಿ ದೇವಸ್ಥಾನದಲ್ಲಿ ಶ್ರೀ ರಾಮ ನವಮಿ ಪ್ರಯುಕ್ತ ವಿಶೇಷ ಪೂಜೆ ಜರುಗಿಸಲಾಯಿತು. ಭಕ್ತರ ಭಕ್ತಿಭಾವ, ಶ್ರದ್ಧೆ ಹಾಗೂ ಭಾರೀ ಭಾಗವಹಿಸುವಿಕೆಯಿಂದ ಈ ಬಾರಿ ಶ್ರೀರಾಮನವಮಿ ಉತ್ಸವವು ಬೋರಬಂಡಾ ಸುಕ್ಷೇತ್ರದ ಮಹತ್ವವನ್ನು ಮತ್ತಷ್ಟು ಹೆಚ್ಚಿಸಿದೆ.
>
> 
>
> ಶ್ರೀ ನರೇಂದ್ರ ರಾಠೋಡ್
> ದೇವಸ್ಥಾನದ ವ್ಯವಸ್ಥಾಪಕರು ಹಾಗೂ ಖ್ಯಾತ ಉದ್ಯಮಿಗಳು.

ಈ ಸಂದರ್ಭದಲ್ಲಿ ಮಣಿಕಂಠ ರಾಠೋಡ್, ಅಯ್ಯಪ್ಪ ದಾಸ್ ರಾಠೋಡ್, ಅನಂತಪ್ಪ ಯದ್ಲಾಪುರ ಸೇರಿದಂತೆ ದೇವಸ್ಥಾನದ ಸದ್ಭಕ್ತರು ಭಾಗವಹಿಸಿದರು.

# ಪೆಟ್ರೋಲ್, ಡೀಸೆಲ್ ಕೊರತೆ ವದಂತಿ: ಡಿಸಿ



ವಿಜಯನಗರ:ಜಿಲ್ಲೆಯಲ್ಲಿ ಇಂಧನ ತೈಲಗಳಾದ ಪೆಟ್ರೋಲ್ ಮತ್ತು ಡೀಸೆಲ್ ಸಾಕಷ್ಟು ದಾಸ್ತಾನಿದ್ದು ಯಾವುದೇ ಕೊರತೆಯಿಲ್ಲ. ಇಂಧನ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವೂ ಸಹ ಉಂಟಾಗಿಲ್ಲ. ಇಂಧನ ಕೊರತೆ ಕೇವಲ ವದಂತಿಯಷ್ಟೇ, ಸಾರ್ವಜನಿಕರು ಆತಂಕ ಪಡುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದರು.

ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಬುಧವಾರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಬುಧವಾರ ಇಂಧನ ಪೂರೈಕೆ ಕಂಪನಿಗಳ ಮಾಲೀಕರು ಹಾಗೂ ವಿತರಕರ ತುರ್ತು ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಇಂಧನ ಸಂಗ್ರಹ ಸಮರ್ಪಕವಾಗಿದ್ದು, ಎಂದಿನಂತೆ ನಿರಂತರವಾಗಿ ಗ್ರಾಹಕರಿಗೆ ಸಿಗಲಿದೆ. ಆದ್ದರಿಂದ ಸಾರ್ವಜನಿಕರು ಆತಂಕಕ್ಕೊಳಗಾಗಿ ಪೆಟ್ರೋಲ್ ಬಂಕ್‌ಗಳ ಮುಂದೆ ಸಾಲುಗಟ್ಟಿ ನಿಲ್ಲುವ ಅಗತ್ಯವಿಲ್ಲ. ಮುಂದಿನ ಹಲವು ದಿನಗಳಿಗೆ ಸಾಕಾಗುವಷ್ಟು ಇಂಧನ ದಾಸ್ತಾನು ಲಭ್ಯವಿದೆ. ಸಾರಿಗೆ ಮತ್ತು ಸರಬರಾಜಿನಲ್ಲಿಯೂ ಯಾವುದೇ ವ್ಯತ್ಯಾಸಗಳಿಲ್ಲ. ಸಾರ್ವಜನಿಕರು ಗೊಂದಲಕ್ಕೆ ಒಳಗಾಗಬಾರದು ಎಂದು ತಿಳಿಸಿದ ಅವರು, ಜಿಲ್ಲೆಯ ಎಲ್ಲಾ ಪೆಟ್ರೋಲ್ ಬಂಕ್‌ಗಳಿಗೆ ನಿರಂತರವಾಗಿ ಇಂಧನ ಪೂರೈಕೆಯಾಗುವಂತೆ ನೋಡಿಕೊಳ್ಳಬೇಕು ಎಂದು ತೈಲ ಕಂಪನಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲೆಯ ಪ್ರತಿಯೊಂದು ಪೆಟ್ರೋಲ್ ಬಂಕ್‌ಗಳಲ್ಲಿ ಲಭ್ಯವಿರುವ ಇಂಧನದ ದಾಸ್ತಾನು ವಿವರ ಸಾರ್ವಜನಿಕರಿಗೆ ಕಾಣುವಂತೆ ಪ್ರದರ್ಶಿಸಬೇಕು. ಯಾವುದೇ ಕಾರಣಕ್ಕೂ ಇಂಧನ ಪೂರೈಕೆ ಬಗ್ಗೆ ಕೃತಕ ಅಭಾವ ಸೃಷ್ಟಿಸಬಾರದು. ಒಂದು ವೇಳೆ ಕೃತಕ ಅಭಾವ ಸೃಷ್ಟಿಸುವುದು, ಇಂಧನ ಕೊರತೆಯ ಸುಳ್ಳು ವದಂತಿ ಹಬ್ಬಿಸುವವರ ವಿರುದ್ಧ ಅಥವಾ ನಿಗದಿತ ದರಕ್ಕಿಂತ ಹೆಚ್ಚು ವಸೂಲಿ ಮಾಡುವ ಮಾಲೀಕರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಖಡಕ್ ಸೂಚನೆ ನೀಡಿದರು. ಸಾರ್ವಜನಿಕ ವಲಯದಲ್ಲಿ ಈ ರೀತಿಯ ಪ್ರಕರಣ ಕಂಡು ಬಂದಲ್ಲಿ ಪೊಲೀಸ್ ಸಹಾಯವಾಣಿ ಸಂ-ಖ್ಯೆ 112 ಅಥವಾ ಸಂಬಂಧಪಟ್ಟ ಅಧಿಕಾರಿಗಳಿಗೆ ದೂರು ನೀಡಬಹುದು ಎಂದರು.

ಸಭೆಯಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪನಿರ್ದೇಶಕ ರಿಯಾಜ್, ವಿವಿಧ ತೈಲ ಕಂಪನಿಗಳ ಪ್ರತಿನಿಧಿಗಳು ಹಾಗೂ ಜಿಲ್ಲಾ ಪೆಟ್ರೋಲಿಯಂ ವಿತರಕರ ಸಂಘದ ಪದಾಧಿಕಾರಿಗಳು ಇದ್ದರು.

# ಆಂಜನೇಯ ದೇವಸ್ಥಾನದಲ್ಲಿ ರಾಮನವಮಿ



• ಮಲ್ಲಮ್ಮ ನುಡಿ ವಾರ್ತೆ ಮುದಗಲ್

ಪಟ್ಟಣದ ಸೋಮವಾರ ಪೇಟೆ ಆಂಜನೇಯ ದೇವಸ್ಥಾನದಲ್ಲಿ ರಾಮನವಮಿ ಆಚರಣೆ ಗುರುವಾರ ಮಾಡಲಾಯಿತು.

ಮರ್ಯಾದಾ ಪುರಷೋತ್ತಮನಿಗೆ ವಿಶೇಷ ಅಲಂಕಾರ ಮಾಡಲಾಗಿತ್ತು. ಮುಂಜಾನೆ ರುದ್ರಾಭಿಷೇಕ ಸೇರಿದಂತೆ ವಿವಿಧ ಪೂಜಾ ವಿಧಿವಿಧಾನಗಳನ್ನು ಅನುಸರಿಸಲಾಯಿತು. ಶ್ರೀರಾಮ, ಲಕ್ಷ್ಮಣ, ಸೀತಾಮಾತೆ ಮತ್ತು ಆಂಜನೇಯ ಮೂರ್ತಿಗಳಿಗೆ ವಿವಿಧ ದ್ರವ್ಯಗಳಿಂದ ಅಭಿಷೇಕ ನಡೆಸಲಾಯಿತು. ಆಂಜನೇಯನ ಸನ್ನಿಧಾನದಲ್ಲಿಯೂ ಶ್ರೀರಾಮ ನವಮಿ ನಿಮಿತ್ತ ರಾಮನ ಮೂರ್ತಿಗೆ ವಿಶೇಷ ಅಲಂಕಾರ, ಪೂಜೆ, ಅಭಿಷೇಕ ನಡೆದವು. ರಾಮನವಮಿ ನಿಮಿತ್ತ ಶ್ರೀರಾಮನ ಭಂಟ ಹನುಮಂತ ದೇವರ ವಿಗ್ರಹಕ್ಕೂ ವಿಶೇಷ ಅಲಂಕಾರ ಮಾಡಲಾಗಿತ್ತು. ರಾಮನವಮಿ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಧಿಗಳು ಭಾಗವಹಿಸಿದ್ದರು.

# ಅರಳಲೇ ಹಿರೇಮಠದ ಲಘು ರಥೋತ್ಸವ ಸಂಪನ್ನ



• ಮಲ್ಲಮ್ಮ ನುಡಿವಾರ್ತೆ ಕುಕನೂರ

ತಾಲೂಕ ಮಂಗಳೂರ ಗ್ರಾಮದ ಲಿಂ.ಶ್ರೀ 108 ಷ.ಬ್ರ.ಷಡಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ಅರಳಲೇ ಹಿರೇಮಠ ಇವರ 33 ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ಶುಕ್ರವಾರ ಸಾಯಂಕಾಲ ಲಘುರಥೋತ್ಸವ ನಡೆಯಿತು. ಬೆಳಿಗ್ಗೆ ಶಿವಾಚಾರ್ಯ ಸ್ವಾಮಿಗಳ ಕರ್ತೃ ಗದ್ದುಗೆಗೆ ಪೂಜೆ, ರುದ್ರಾಭಿಷೇಕ ,ದೀಕ್ಷಾ(ಅಯ್ಯಾಚಾರ) ಪುಷ್ಪಾರ್ಚಣೆ, ಮಹಾಮಂಗಳಾರತಿ, ಅಭಿಷೇಕ, ಮಂತ್ರಾರ್ಪಣೆ ವಿವಿಧ ಧಾರ್ಮಿಕ ಕಾರ್ಯಗಳು ನಡೆದವು. ಮಹಿಳೆಯರು ಕುಂಬದೊಂದಿಗೆ ಮೆರವಣಿಗೆಯಲ್ಲಿ ಸಾಗಿದರು.

ಸಾಯಂಕಾಲ ಅಪಾರ ಭಕ್ತರ ಉಪಸ್ಥಿತಿಯಲ್ಲಿ ಲಘು ರಥೋತ್ಸವ ವಿಜೃಂಭಣೆಯಿಂದ ಸಾಗಿ ಸಂಪನ್ನಗೊಂಡಿತು.

ಭಜಂತ್ರಿಯವರ ವಿವಿಧ ವಾದ್ಯ, ಮೇಳಗಳು, ಡೊಳ್ಳು ಕುಣಿತಗಳ ದೃಷ್ಯಗಳನ್ನು ನೋಡಿ ಗ್ರಾಮಸ್ಥರು ಭಕ್ತಿ ಭಾವ ಮೆರೆದರು. ಭಕ್ತರಿಗೆ ಉಪಹಾರ ಹಾಗೂ ಮಹಾಪ್ರಸಾದ ಸೇವೆ ನೀಡಲಾಯಿತು

ಶ್ರೀ ಚನ್ನ ಬಸವ ಮಹಾಸ್ವಾಮಿಗಳು, ಹಿರೇಮಲ್ಲಿನಕೇರಿ ಇವರಿಂದ ಐದು ದಿನಗಳ ಕಾಲ ಶ್ರೀ ಮಂಗಳೇಶ್ವರ ಕಲ್ಯಾಣ ಮಂಟಪದಲ್ಲಿ ಪುರಾಣ, ಆಶಿರ್ವಚನ ನಡೆದವು. ಸಾಧನೆಗೈದ ನಾಡಿದ ಅನ್ನದಾತರಿಗೆ, ಅಂಗನವಾಡಿ ಶಿಕ್ಷಕೀಯರಿಗೆ, ಆಶಾ ಕಾರ್ಯಕರ್ತರಿಗೆ, ಗ್ರಾಮವನ್ನು ತ್ಯಾಜ್ಯ ಮುಕ್ತ ಮಾಡುತ್ತಿರುವ ಪಂಚಾಯತ್ ಸಿಬ್ಬಂದಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು.

ಶ್ರೀ ಮಠದ ಷ.ಬ್ರ. ಸಿದ್ದಲಿಂದ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಕುಕನೂರಿನ ಅನ್ನದಾನೇಶ್ವರ ಮಠದ ಡಾ.ಮಹಾದೇವ ಮಹಾಸ್ವಾಮಿಗಳು, ಕರಿಬಸವೇಶ್ವರ ಮಹಾಸ್ವಾಮಿಗಳು ಕುಷ್ಟಗಿ, ವೀರ ಸಂಗಮೇಶ್ವರ ಮಹಾಸ್ವಾಮಿಗಳು ಚಳಗೇರಿ, ಶ್ರೀ ಗಂಗಾಧರ ಮಹಾಸ್ವಾಮಿಗಳು ಕೊತಬಾಳ, ಬಸವಲಿಂಗೇಶ್ವರ ಮಹಾಸ್ವಾಮಿಗಳು ಶ್ರೀಧರ ಮುರುಡಿ ಹಿರೇಮಠ ಯಲಬುರ್ಗಾ ನೀಲಕಂಠ ತಾತನವರು ಎಂ ಗುಡದೂರು, ಬೇನಾಳ ಶ್ರೀಗಳು, ಕಂಪ ಸಾಗರ ಶ್ರೀಗಳು ದಿವ್ಯ ಸಾನಿಧ್ಯವನ್ನು ವಹಿಸಿದ್ದರು. ಗ್ರಾಮದ ಭಕ್ತರು, ಮಠದ ಶಿಷ್ಯ ಬಳಗ ಹಾಗೂ ಗ್ರಾಮದ ಸುತ್ತ ಮುತ್ತಲಿನ ಭಕ್ತರು ಲಘು ರಥೋತ್ಸವದಲ್ಲಿ ಪಾಲ್ಗೊಂಡಿದ್ದರು.

# ಕಷ್ಟಪಟ್ಟು ಓದಿದರೆ ಮಾತ್ರ ಸಾಧನೆ ಸಾಧ್ಯ : ಕೋಳ್ಳೂರ



• ಮಲ್ಲಮ್ಮ ನುಡಿ ವಾರ್ತೆ, ಹುಣಸಗಿ

"ಕಷ್ಟಪಟ್ಟು ಓದಿದರೆ ಮಾತ್ರ ಜೀವನದಲ್ಲಿ ಸಾಧನೆ ಸಾಧ್ಯ. ಯಶಸ್ವಿ ಓದು ಸಮರ್ಪಕ ಉದ್ಯೋಗದ ದಿಕ್ಕು ತೋರಿಸುತ್ತದೆ" ಎಂದು ಬೆನಕನಹಳ್ಳಿಯ ಡಾ. ಅಭಿಷೇಕ ಕೋಳ್ಳೂರ ಹೇಳಿದರು.

ಅವರು ಸರಕಾರಿ ಪ್ರೌಢಶಾಲೆ ಬೆನಕನಹಳ್ಳಿಯಲ್ಲಿ ಸಮಾಜ ವಿಜ್ಞಾನ ವಿಭಾಗದ ವತಿಯಿಂದ ಹಮ್ಮಿಕೊಂಡಿದ್ದ 'ವೃತ್ತಿ ಮಾರ್ಗದರ್ಶನ ವೃತ್ತಿ ಮೇಳ' ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮ ಸಾಮರ್ಥ್ಯವನ್ನು ಗುರುತಿಸಿಕೊಂಡು ಅದಕ್ಕೆ ಅನುಗುಣವಾಗಿ ಪರಿಶ್ರಮ ಪಡಬೇಕು. ಆರೋಗ್ಯಕರ ದೇಹದಲ್ಲೇ ಆರೋಗ್ಯಕರ ಮನಸ್ಸು ನೆಲೆಸುತ್ತದೆ ಎಂದು ಅವರು ತಿಳಿಸಿದರು. ವೈದ್ಯಕೀಯ ಕ್ಷೇತ್ರದಲ್ಲಿನ ವಿವಿಧ ವೃತ್ತಿ ಅವಕಾಶಗಳ ಬಗ್ಗೆ ಮಕ್ಕಳಿಗೆ ವಿವರಿಸಿದರು.

ಈ ವೇಳೆ ಹುಣಸಗಿ ಪೊಲೀಸ್ ಇಲಾಖೆಯ ಹೆಡ್ ಕಾನ್ಸ್‌ಟೇಬಲ್ ಶಿವನಗೌಡ ಪಾಟೀಲ ಮಾತನಾಡಿ, ಸಾಧನೆ ಮಾಡಲು ಬಯಸುವವರು ಸಮಯ ವ್ಯರ್ಥ ಮಾಡದೇ, ಸಾಮಾಜಿಕ ಜಾಲತಾಣಗಳಿಂದ ದೂರ ಇರಬೇಕು ಎಂದು ಸಲಹೆ ನೀಡಿದರು. ಜೊತೆಗೆ ಪೊಲೀಸ್ ಇಲಾಖೆಯ ಹುದ್ದೆಗಳು, ಪರೀಕ್ಷಾ ವಿಧಾನಗಳು ಹಾಗೂ ನೇಮಕಾತಿ ಕುರಿತು ಮಾರ್ಗದರ್ಶನ ನೀಡಿದರು.

ಮೈಸೂರು ವಿಭಾಗದ ಕೃಷಿ ಇಲಾಖೆಯ ಅಭಿಯಂತರ ಶರಣಬಸವ ವಿಶ್ವಕರ್ಮ ಮಾತನಾಡಿ, ಯಾವುದೇ ವೃತ್ತಿಯೂ ಕಡಿಮೆ ಅಲ್ಲ. ಆಸಕ್ತಿ, ವಿದ್ಯಾಭ್ಯಾಸ ಮತ್ತು ಅವಕಾಶಗಳನ್ನು ಸರಿಯಾಗಿ ಬಳಸಿಕೊಂಡರೆ ಬದುಕು ಸಾರ್ಥಕವಾಗುತ್ತದೆ ಎಂದರು. ಕೃಷಿ ಕ್ಷೇತ್ರದ ವಿವಿಧ ಹುದ್ದೆಗಳ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು.

ಕಾರ್ಯಕ್ರಮದ ಪ್ರಾಸ್ತಾವಿಕವಾಗಿ ಮಾತನಾಡಿದ ಸಾಹೇಬಗೌಡ ಬಿರಾದಾರ, ಜೀವನದಲ್ಲಿ ಸರಿಯಾದ ಮಾರ್ಗದರ್ಶನ ಸಿಕ್ಕರೆ ದಿಕ್ಕೇ ಬದಲಾಗುತ್ತದೆ ಎಂದು ಹೇಳಿದರು.

ವೃತ್ತಿ ಮೇಳದಲ್ಲಿ ವಿದ್ಯಾರ್ಥಿನಿಯರು ವೈದ್ಯಾಧಿಕಾರಿ, ಡಿಸಿ, ಗಗನಸಖಿ, ವಕೀಲ, ಉಪನ್ಯಾಸಕಿ ಸೇರಿದಂತೆ ವಿವಿಧ ವೃತ್ತಿಗಳ ವೇಷಭೂಷಣ ಧರಿಸಿ ಗಮನಸೆಳೆದರು. ಅವರ ಪ್ರದರ್ಶನಕ್ಕೆ ವಿದ್ಯಾರ್ಥಿಗಳಿಂದ ಭರ್ಜರಿ ಕರತಾಡನ ವ್ಯಕ್ತವಾಯಿತು.

ಮೇಳದಲ್ಲಿ ವಿವಿಧ ವೃತ್ತಿಗಳಿಗೆ ಸಂಬಂಧಿಸಿದ ವಿದ್ಯಾರ್ಹತೆ ಹಾಗೂ ನೇಮಕಾತಿ ವಿಧಾನಗಳ ಕುರಿತು ಚಾರ್ಟ್‌ಗಳ ಪ್ರದರ್ಶನವೂ ನಡೆಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯೋಪಾಧ್ಯಾಯೆ ಸಂಗಮ್ಮ ನಾಗಾವಿ ಮಾತನಾಡಿ, ವಿದ್ಯಾರ್ಥಿಗಳ ಭವಿಷ್ಯ ರೂಪಿಸಲು ವೃತ್ತಿ ಮಾರ್ಗದರ್ಶನ ಅತ್ಯಂತ ಮುಖ್ಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಿವಾನಂದ ಮುತ್ಯಾ, ಎಸ್‌ಡಿಎಂಸಿ ಅಧ್ಯಕ್ಷ ಅಮೃತ ಅರಳಗುಂಡಗಿ, ಶಿಕ್ಷಕರಾದ ಮಾನಪ್ಪ ಚಿಕ್ಕಹೆಬ್ಬಾಳ, ತಿರುಪತಿ ದೊರೆ, ಹಣಮಂತ್ರಾಯ ಗುಂತಾ, ವೈಶಾಲಿ ಹಾವಿನಾಳ, ವೀರಯ್ಯ ಮಠ ಉಪಸ್ಥಿತರಿದ್ದರು.

ದೈಹಿಕ ಶಿಕ್ಷಣ ಶಿಕ್ಷಕರಾದ ಸಣ್ಣೆಕ್ಕೆಪ್ಪ ಪೂಜಾರಿ ಸ್ವಾಗತಿಸಿದರು. ಗಣಿತ ಶಿಕ್ಷಕರಾದ ಚಂದ್ರಕಾಂತ ಕುಲಕರ್ಣಿ ವಂದಿಸಿದರು.

# ನೀರಿನ ಸಮಸ್ಯೆ ತಡೆಗೆ ಕಟ್ಟುನಿಟ್ಟಿನ ಎಚ್ಚರಿಕೆ: ಕಲಶೇಟ್ಟಿ



• ಮಲ್ಲಮ್ಮ ನುಡಿ ವಾರ್ತೆ ಲಿಂಗಸುಗೂರು

ತಾಲ್ಲೂಕಿನಲ್ಲಿ ಬೇಸಿಗೆ ಕಾಲದಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವುದು ಪಂಚಾಯತ್ ಅಧಿಕಾರಿಗಳ ಪ್ರಮುಖ ಕರ್ತವ್ಯವಾಗಿದೆ ಎಂದು ಸಹಾಯಕ ಆಯುಕ್ತ ಬಸವಣ್ಣೆಪ್ಪ ಕಲಶೇಟ್ಟಿ ಎಚ್ಚರಿಸಿದರು.

ಲಿಂಗಸುಗೂರು ತಾಲೂಕಿನ ಸಹಾಯಕ ಆಯುಕ್ತರ ಕಚೇರಿಯಲ್ಲಿ ಇಂದು ನಡೆದ ಕುಡಿಯುವ ನೀರಿನ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ವಿಧಾನಸಭಾ ಕ್ಷೇತ್ರದ ಸುಮಾರು 140 ಗ್ರಾಮೀಣ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ನೀರಿನ ಕೊರತೆ ಉಂಟಾಗದಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದರು. ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ತಮ್ಮ ಕರ್ತವ್ಯದಲ್ಲಿ ನಿರ್ಲಕ್ಷ್ಯ ವಹಿಸಿದಲ್ಲಿ ಯಾವುದೇ ಮುಲಾಜಿಲ್ಲದೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಖಡಕ್ ಎಚ್ಚರಿಕೆ ನೀಡಿದರು.

ತಾಲೂಕಿನ ಸುಮಾರು 21 ಗ್ರಾಮಗಳಲ್ಲಿ ಬೇಸಿಗೆ ವೇಳೆ ಕುಡಿಯುವ ನೀರಿನ ಅಭಾವ ಉಂಟಾಗುವ ಸಾಧ್ಯತೆಗಳಿದ್ದು, ಹಲವು ಬೋರ್‌ವೆಲ್‌ಗಳಲ್ಲಿ ಅಂತರ್ಜಲ ಮಟ್ಟ ಕುಸಿಯುವ ಲಕ್ಷಣಗಳು ಗೋಚರಿಸುತ್ತಿವೆ. ಇದನ್ನು ಮನಗಂಡು ಅಧಿಕಾರಿಗಳು ತಕ್ಷಣವೇ ಎಚ್ಚೆತ್ತುಕೊಂಡು ಯುದ್ಧೋಪಾದಿಯಲ್ಲಿ ಕೆಲಸ ಕೈಗೊಳ್ಳಬೇಕು ಎಂದು ಹೇಳಿದರು.

ಜನರಿಗೆ ಆಡಳಿತ ನ್ಯಾಯ ಒದಗಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಅವರು ತಿಳಿಸಿದರು.

ಸಭೆಯಲ್ಲಿ ತಹಶೀಲ್ದಾರ್ ಸತ್ಯಮ್ಮ, ತಾಲೂಕು ಪಂಚಾಯತ್ ಅಧಿಕಾರಿ ಅಮರೇಶ್, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ರವೀಂದ್ರ ಉಪ್ಪಾರ, ಜೆಸ್ಕಾಂ ಅಧಿಕಾರಿ ಬನ್ನಪ್ಪ ಕರಿಬಂಟನಾಳ, ಬಿಇಒ ಸುಜಾತಾ ಹೂನೂರು, ಪಶು ಸಂಗೋಪನಾ ಇಲಾಖೆ ಅಧಿಕಾರಿ ಅಮರೇಶ್ ಪಾಟೀಲ ಹಾಗೂ ಲಿಂಗಸುಗೂರು, ಹಟ್ಟಿ, ಮುದಗಲ್ ಪುರಸಭೆಗಳ ಅಧಿಕಾರಿಗಳಾದ ನಟರಾಜ್, ಜಗನ್ನಾಥ ಜೋಶಿ, ಪ್ರವೀಣ ಭೋಗಾರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

# ದೇವರ ದಾಸಿಮಯ್ಯ ಜಯಂತಿ ಆಚರಣೆ



• ಮಲ್ಲಮ್ಮ ನುಡಿ ವಾರ್ತೆ ಕುಕನೂರ

ತಾಲೂಕ ಆಡಳಿತ ಹಾಗೂ ಶ್ರೀ ಗುರು ನೀಲಕಂಠೇಶ್ವರ ಟ್ರಸ್ಟ್ ಕಮಿಟಿ ಸಮಾಜ ವತಿಯಿಂದ ಶ್ರೀ ದೇವರ ದಾಸಿಮಯ್ಯ ಜಯಂತಿಯನ್ನು ಕುಕನೂರು ಪಟ್ಟಣದ ತಹಸಿಲ್ದಾರ್ ಕಚೇರಿಯಲ್ಲಿ ವಿಶೇಷ ಪೂಜೆ ಸಲ್ಲಿಸುವುದರ ಮುಖಾಂತರ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಶ್ರೀ ಗುರು ನೀಲಕಂಠೇಶ್ವರ ಟ್ರಸ್ಟ್ ಕಮಿಟಿ ಅಧ್ಯಕ್ಷರು ನೀಲಕಂಠಪ್ಪ ಎಂ ಬಣ್ಣದ ಬಾವಿ ಉಪಾಧ್ಯಕ್ಷ ವಿಷ್ಣು ತಿಪ್ಪಾಪುರ್, ಕಾರ್ಯದರ್ಶಿ ಮಂಜುನಾಥ್ ಕೂಡ್ಲಿಗಿ, ಖಜಾಂಚಿ ಭೀಮಪ್ಪ ಹೊಟ್ಟಿ, ಸದಸ್ಯರಾದ ಬಾಲರಾಜ್ ಗಾಳಿ, ರಮೇಶ್ ಸಾಲ್ಮನಿ, ಗೋಪಾಲ್ ಬನ್ನಿಕಲ್, ಸುರೇಶ್ ಕುದ್ರಿ, ವಿಜಯ್ ಕುಮಾರ ಉಂಕಿ, ಸೇರಿದಂತೆ ಮತ್ತಿತರರು ಹಾಗೂ ತಾಲೂಕ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ಸಿರಾಜುದ್ದೀನ್ ಆಯ್ಕೆ



• ಮಲ್ಲಮ್ಮ ನುಡಿವಾರ್ತೆ ಕುಕನೂರ

ಪಟ್ಟಣ ಪಂಚಾಯಿತಿ ಕಾರ್ಯಾಲಯದಲ್ಲಿ ಸ್ಥಾಯಿ ಸಮಿತಿ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಜರಗಿದ್ದು ಸಿರಾಜುದ್ದೀನ್ ಕರ್ಮುಡಿ ಸರ್ವಾನು ಮತದಿಂದ ಆಯ್ಕೆಗೊಂಡಿರುತ್ತಾರೆ.

ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ನಾಗೇಶ್ ಅವರ ನೇತೃತ್ವದಲ್ಲಿ ಜರುಗಿದ ಸ್ಥಾಯಿ ಸಮಿತಿ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆಯಲ್ಲಿ ಸಿರಾಜುದ್ದೀನ್ ಕರ್ಮುಡಿ ಏಕಮಾತ್ರ ಆಕಾಂಕ್ಷಿಯಾಗಿದ್ದು ಉಳಿದ ಸ್ಥಾಯಿ ಸಮಿತಿ ಸದಸ್ಯರೆಲ್ಲರೂ ಕೈ ಎತ್ತುವ ಮೂಲಕ ಬೆಂಬಲ ಸೂಚಿಸಿದರು. ಮುಖ್ಯ ಅಧಿಕಾರಿ ನಾಗೇಶ್ ಅವರು ಸಿರಾಜುದ್ದೀನ್ ಕರಮುಡಿ ಅವರನ್ನು ಅಧ್ಯಕ್ಷರನ್ನಾಗಿ ಘೋಷಣೆ ಮಾಡಿದರು.

ಈ ವೇಳೆಯಲ್ಲಿ ಪಟ್ಟಣ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು ಹಾಗೂ ಸಿಬ್ಬಂದಿಗಳು ಪಾಲ್ಗೊಂಡಿದ್ದರು

# ಪೂರ್ವಭಾವಿ ಸಭೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆಯ ಪೂರ್ವಭಾವಿ ಸಿದ್ಧತಾ ಸಭೆಯು ಏಪ್ರಿಲ್ 1ರ ಸಂಜೆ ಸಂಜೆ 4 ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆಯಲಿದೆ.

ಸಂಬಂಧಿಸಿದ ಅಧಿಕಾರಿಗಳು ಮತ್ತು ಸಂಘ-ಸಂಸ್ಥೆಗಳ ಮುಖಂಡರು ಸಭೆಗೆ ಹಾಜರಾಗಿ ತಮ್ಮ ಸಲಹೆ ಸೂಚನೆಗಳನ್ನು ನೀಡಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಳ್ಳಭಟ್ಟಿ ಮುಕ್ತ ಜಿಲ್ಲೆಯಾಗಿಸಿ : ಜಿಲ್ಲಾಧಿಕಾರಿ



**ನಗರದ ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ಗುರುವಾರ ಸಹಾಯಕ ಆಯುಕ್ತರ ಅಧ್ಯಕ್ಷತೆಯಲ್ಲಿ ಉಪ ವಿಭಾಗ ಮಟ್ಟದ ದೌರ್ಜನ್ಯ ಹಾಗೂ ಸಫಾಯಿ ಕರ್ಮಚಾರಿಗಳ ಪ್ರಥಮ ತ್ರೈಮಾಸಿಕ ನಿಗಾ ಸಮಿತಿ ಸಭೆ ನಡೆಸಲಾಯಿತು. ಸಭೆಯಲ್ಲಿ ಉಪ ವಿಭಾಗಾಧಿಕಾರಿ ಪಿ.ವಿವೇಕಾನಂದ, , ಸಮಾಜ ಕಲ್ಯಾಣ ಇಲಾಖೆಸಹಾಯಕ ನಿರ್ದೇಶಕ ಶಾಹೇಖಾ ಅಹಮದಿ, ಸಮಿತಿಯ ನಾಮ ನಿರ್ದೇಶಿತ ಸದಸ್ಯರಾದ ರಾಘವೇಂದ್ರ, ಎನ್.ರಘು, ಡಿ.ರವಿಶಂಕರ್, ಮಿರ್ಜಾ ಅಲಿ ಬೇಗ್ ಸೇರಿದಂತೆ ಮತ್ತಿತರರು ಇದ್ದರು.**

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ

ಜಿಲ್ಲೆಯಲ್ಲಿ ಕಳ್ಳಬಟ್ಟಿ ಸಾರಾಯಿ ತಯಾರಿಕೆ, ಅಕ್ರಮ ಮದ್ಯ ಮಾರಾಟ ಮತ್ತು ಸಾಗಣೆಯನ್ನು ಸಂಪೂರ್ಣವಾಗಿ ನಿಯಂತ್ರಿಸಿ ಕಳ್ಳಬಟ್ಟಿ ಮುಕ್ತ ಜಿಲ್ಲೆಯಾಗಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಕಳ್ಳಭಟ್ಟಿ ನಿರ್ಮೂಲನೆ ಕುರಿತ ಆಯೋಜಿಸಲಾಗಿದ್ದ ಸ್ಥಾಯಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಳ್ಳಭಟ್ಟಿ ತಯಾರಿಕೆ ಮತ್ತು ಅಕ್ರಮ ಮದ್ಯದ ವಹಿವಾಟಿನ ವಿರುದ್ಧ ಅಧಿಕಾರಿಗಳು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಬೇಕು. ಅಕ್ರಮ ಮದ್ಯ ಮಾರಾಟ ಅಥವಾ ಸಾಗಾಟ ಮಾಡುವುದು ಕಂಡು ಬಂದಲ್ಲಿ ಯಾವುದೇ ಒತ್ತಡಕ್ಕೆ ಮಣಿಯದೆ ಕಾನೂನು ಕ್ರಮ ಜರುಗಿಸಬೇಕು ಎಂದು ಜಿಲ್ಲಾಧಿಕಾರಿ ಕಟ್ಟುನಿಟ್ಟಿನ ಸೂಚನೆ ನೀಡಿದರು. ನೆರೆ ಜಿಲ್ಲೆ ಅಥವಾ ರಾಜ್ಯಗಳಿಂದ ಅಕ್ರಮವಾಗಿ ಮದ್ಯ ಸಾಗಣೆಯಾಗುವ ಸಂಭವವಿರುವುದರಿಂದ, ಜಿಲ್ಲೆಯ ಗಡಿ ಭಾಗದ ಚೆಕ್ ಪೋಸ್ಟ್‌ಗಳಲ್ಲಿ ತಪಾಸಣೆ ತೀವ್ರಗೊಳಿಸಬೇಕು. ಅಬಕಾರಿ ಇಲಾಖೆ ಮತ್ತು ಪೊಲೀಸ್ ಇಲಾಖೆಯು ಸಮನ್ವಯತೆಯಿಂದ ಕಾರ್ಯನಿರ್ವಹಿಸಿ, ಸಂಶಯಾಸ್ಪದ ಸ್ಥಳಗಳ ಮೇಲೆ ನಿರಂತರವಾಗಿ ದಾಳಿ ನಡೆಸಬೇಕು. ಗ್ರಾಮೀಣ ಭಾಗದ ಹೋಟೆಲ್, ಗೂಡಂಗಡಿಗಳಲ್ಲಿ ಅಕ್ರಮ ಮದ್ಯ ಮಾರಾಟ ಮಾಡುವುದನ್ನು ತಡೆಯಲು ಬೀಟ್ ಪೊಲೀಸರು ಮತ್ತು ಅಬಕಾರಿ ನಿರೀಕ್ಷಕರು ಹೆಚ್ಚಿನ ಕಾರ್ಯಾಚರಣೆ ನಡೆಸಬೇಕು. ಅಕ್ರಮ ಮದ್ಯ ಸಾಗಣೆಯಲ್ಲಿ ತೊಡಗಿರುವ ವಾಹನಗಳನ್ನು ಮುಟ್ಟುಗೋಲು ಹಾಕಿಕೊಳ್ಳುವುದು ಮಾತ್ರವಲ್ಲದೆ, ಪ್ರಕರಣ ದಾಖಲಿಸಬೇಕು. ಜಿಲ್ಲೆಯ ಜನರ ಆರೋಗ್ಯ ಮತ್ತು ಶಾಂತಿ ಕಾಪಾಡುವುದು ನಮ್ಮ ಆದ್ಯತೆ. ಕಳ್ಳಭಟ್ಟಿ ಸಾರಾಯಿ ತಯಾರಿಕೆ ಅಥವಾ ಅಕ್ರಮ ಮಾರಾಟದ ಮಾಡುವುದು ಕಂಡು ಬಂದಲ್ಲಿ ಸಾರ್ವಜನಿಕರು ನಿರ್ಭಯವಾಗಿ ಮಾಹಿತಿ ನೀಡಬೇಕು. ಮಾಹಿತಿ ನೀಡಿದವರ ಹೆಸರನ್ನು ಗೌಪ್ಯವಾಗಿಡಲಾಗುವುದು ಎಂದು ತಿಳಿಸಿದರು.

ಅಬಕಾರಿ ಉಪ ಆಯುಕ್ತ ಡಾ. ಮಾದೇಶ್ ಮಾತನಾಡಿ, ಜಿಲ್ಲೆಯಲ್ಲಿ ಪರವಾನಗಿ ಪಡೆದ 160 ಮದ್ಯದಂಗಡಿಗಳು ಇದ್ದು, ಇವುಗಳ ಮೇಲೆ ಸದಾ ನಿಗಾವಹಿಸಲಾಗಿದೆ. ಅಲ್ಲದೇ ಜಿಲ್ಲೆಯ ವಿವಿಧ ಭಾಗಗಳಲ್ಲಿ ಕಾಲ ಕಾಲಕ್ಕೆ ಸರಿಯಾಗಿ ಕಳ್ಳಭಟ್ಟಿ ಸಾರಾಯಿ ನಿರ್ಮೂಲನೆ, ಅಕ್ರಮ ಮದ್ಯ ಮಾರಾಟ ಮತ್ತು ಸಾಗಣೆ ಕುರಿತು ಗ್ರಾಮ ಸಭೆ, ಜಾಗೃತಿ ಕಾರ್ಯಗಾರ ಆಯೋಜಿಸಲಾಗುತ್ತಿದೆ. ಜಿಲ್ಲೆಯಲ್ಲಿ 2010 ರಿಂದ ಈ ವರೆಗೆ ಯಾವುದೇ ರೀತಿಯ ಪ್ರಕರಣಗಳು ದಾಖಲಾಗಿಲ್ಲ. ಆದರೆ ನೆರೆ ರಾಜ್ಯಗಳಾದ ಗೋವಾ, ಮಹಾರಾಷ್ಟ್ರ ಮತ್ತು ಆಂಧ್ರಪ್ರದೇಶದಿಂದ ಯಾವುದೇ ಪರವಾನಗಿ ಇಲ್ಲದೆ ಸಾಗಾಟ ಮಾಡುತ್ತಿದ್ದನ್ನು ತಡೆದು 2023 ರಿಂದ 2026ರ ಫೆಬ್ರವರಿ ಅಂತ್ಯಕ್ಕೆ 7 ಪ್ರಕರಣ ದಾಖಲಿಸಿ, 293.45ಲೀಟರ್ ಮದ್ಯ ವಶ ಪಡಿಸಿಕೊಳ್ಳಲಾಗಿದೆ. ಅದರಂತೆ ಜಿಲ್ಲೆಯಲ್ಲಿ ಅಕ್ರಮ ಮದ್ಯ ಮಾರಾಟದ ವಿರುದ್ಧ ದಾಳಿ ನಡೆಸಲಾಗಿದ್ದು, 2024 ಜುಲೈ ನಿಂದ 2025ರ ಜೂನ್ ವರೆಗೆ 892 ಕಡೆ ಹಾಗೂ 2025ರ ಜುಲೈ ನಿಂದ ಫೆಬ್ರವರಿ 16ರವರೆಗೆ 872 ಸೇರಿ ಒಟ್ಟು 1764 ಕಡೆ ದಾಳಿ ನಡೆಸಿ 755 ಲೀಟರ್ ಮದ್ಯ ಮತ್ತು 152ಲೀ ಬಿಯರ್ ವಶಪಡಿಸಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು. ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ, ಅಪರ ಜಿಲ್ಲಾಧಿಕಾರಿ ಇ. ಬಾಲಕೃಷ್ಣ, ಸಹಾಯಕ ಆಯುಕ್ತರು ವಿವೇಕಾನಂದ ಸೇರಿದಂತೆ ವಿವಿಧ ಇಲಾಖೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಹಾದೇವ ದೇವಸ್ಥಾನದಲ್ಲಿ ಉಚಿತ ದಂತ ಚಿಕಿತ್ಸಾ ಶಿಬಿರ

• ಮಲ್ಲಮ್ಮ ನುಡಿ ವಾರ್ತೆ, ಕಮಲನಗರ

ತಾಲೂಕಿನ ಮುಧೋಳ(ಬಿ) ಗ್ರಾಮದದಲ್ಲಿ ನಡೆಯುತ್ತಿರುವ ಮಹಾದೇವ ಜಾತ್ರಾ ಮಹೋತ್ಸವದ ಅಂಗವಾಗಿ ಮಹಾದೇವ ಮಂದಿರದಲ್ಲಿ ಇಂದು ಮಾರ್ಚ್ 28 ರಂದು ಸಾರ್ವಜನಿಕರಿಗಾಗಿ ಉಚಿತ ದಂತ ಚಿಕಿತ್ಸಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ರೋಟರಿ ಕ್ಲಬ್ ಆಫ್ ಬೀದರ್ ಅವರ ಸಹಯೋಗದೊಂದಿಗೆ ಈ ಶಿಬಿರ ನಡೆಯಲಿದ್ದು, ಖ್ಯಾತ ವೈದ್ಯರುಗಳಾದ ಡಾ. ಬಸವರಾಜ ಹಲ್ಲಾಳೆ ಹಾಗೂ ಡಾ. ಸಿದ್ಧನಗೌಡ ಅವರು ರೋಗಿಗಳ ತಪಾಸಣೆ ನಡೆಸಲಿದ್ದಾರೆ.ಸದರಿ ಕಾರ್ಯಕ್ರಮವು ಶನಿವಾರ ಬೆಳಿಗ್ಗೆ 10:00 ರಿಂದ ಮಧ್ಯಾಹ್ನ 2:30 ರವರೆಗೆ ನಡೆಯಲಿದೆ, ಈ ಶಿಬಿರದಲ್ಲಿ ಹಲ್ಲಿನ ನೋವು, ಹುಳುಕಲು ಹಲ್ಲು, ವಸಡಿನ ಸಮಸ್ಯೆ ಸೇರಿದಂತೆ ವಿವಿಧ ದಂತ ಸಂಬಂಧಿತ ಕಾಯಿಲೆಗಳಿಗೆ ಉಚಿತವಾಗಿ ಸಲಹೆ ಹಾಗೂ ಚಿಕಿತ್ಸೆ ನೀಡಲಾಗುವುದು. ಸುತ್ತಮುತ್ತಲಿನ ಗ್ರಾಮಸ್ಥರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಈ ಉಚಿತ ಸೇವೆಯ ಸದುಪಯೋಗ ಪಡೆದುಕೊಳ್ಳಬೇಕೆಂದು ಕಾರ್ಯಕ್ರಮ ಸಂಯೋಜಕ್ಕಾರದ ಗುರುನಾಥ ವಟಗೆ ಅವರು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಸಂಘಗಳಿಂದ ಅರ್ಜಿ ಆಹ್ವಾನ

ವಿಜಯನಗರ :ಕೇಂದ್ರ ಪುರಸ್ಕೃತ ಯೋಜನೆಯಾದ ಅಮೃತ್ 2.0 ಅಭಿಯಾನದ ಅಮೃತ್ ಮಿತ್ರ ಕಾರ್ಯಕ್ರಮದ ತಾಂತ್ರಿಕ ಮತ್ತು ತಾಂತ್ರಿಕೇತರ ಚಟುವಟಿಕೆ ಕಾರ್ಯಕ್ರಮದಡಿ ನಗರಸಭೆ ವ್ಯಾಪ್ತಿಯ 6 ಉದ್ಯಾನವನ (ಪಾರ್ಕ್) ನಿರ್ವಹಣೆ ಮಾಡಲು ಡೇ-ನಲ್ಮ್ ಅಭಿಯಾನದಡಿ ರಚಿತವಾದಂತ ಎಂ.ಐ.ಎಸ್ ನೊಂದಣಿಯಾಗಿರುವ ಅರ್ಹ ಮಹಿಳಾ ಸ್ವ-ಸಹಾಯ ಸಂಘಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯನ್ನು ಮಹಿಳಾ ಸ್ವ-ಸಹಾಯ ಸಂಘಗಳ ಮೂಲಕ ನಗರ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿಯೂ ಅನುಷ್ಠಾನಗೊಳಿಸಲು ಆಸಕ್ತ ಹೊಂದಿರುವ ಮಹಿಳಾ ಸ್ವ-ಸಹಾಯ ಸಂಘಗಳು ಭಾಗವಹಿಸಬಹುದು. ಆಸಕ್ತ ಮಹಿಳಾ ಸ್ವ-ಸಹಾಯ ಸಂಘಗಳು ನಗರಸಭೆ ಕಾರ್ಯಾಲಯದಲ್ಲಿ ಅರ್ಜಿ ನಮೂನೆ ಪಡೆದು ಏಪ್ರಿಲ್ 9ರೊಳಗಾಗಿ ಅರ್ಜಿ ಸಲ್ಲಿಸಲು ನಗರಸಭೆ ಪೌರಾಯುಕ್ತ ಶಿವಕುಮಾರ್ ತಿಳಿಸಿದ್ದಾರೆ.

# ಬಲ್ಡೋಟ ತೊಲಗಿಸಿ, ಗೂಂಡಾಗಿರಿ, ಬೆದರಿಕೆ ಸಹಿಸಲ್ಲ: ಅಲ್ಲಮಪ್ರಭು

• ಮಲ್ಲಮ್ಮ ನುಡಿವಾರ್ತೆ , ಕೊಪ್ಪಳ

ನಗರಸಭೆ ಆವರಣದಲ್ಲಿ 148ನೇ ದಿನದ ಬಲ್ಡೋಟ ತೊಲಗಿಸಿ, 22 ಕಾರ್ಖಾನೆ ಬಾಧಿತ ಹಳ್ಳಿಯ ಜನರ ಜೀವ ಉಳಿಸಿ, ಬಸಾಪುರ ಕೆರೆ ಸಾರ್ವಜನಿಕರಿಗೆ ಮುಕ್ತಗೊಳಿಸಿ, ತುಂಗಭದ್ರಾ ಜಲಾಶಯ ನದಿ ನೀರು ವಿಷಗೊಳಿಸಿದ ಕಾರ್ಖಾನೆಗಳನ್ನು ಸೀಜ್ ಮಾಡಬೇಕೆಂದು ನಡೆಸಿರುವ ಅನಿರ್ದಿಷ್ಟಾವಧಿ ಧರಣಿಯಲ್ಲಿ ನೂತನ ಕೊಪ್ಪಳ ಕಾರ್ಖಾನೆ ಬಾಧಿತ ರೈತ ಸಂಘ ಲಾಂಚನ ಅನಾವರಣಗೊಳಿಸಲಾಯಿತು.

ಅವರು ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ಮೂಲಕ ನೂತನವಾಗಿ ಅಸ್ತಿತ್ವಕ್ಕೆ ತರಲಿರುವ ರೈತ ಸಂಘದ ಲಾಂಛನ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದ, ಪ್ರಧಾನ ಸಂಚಾಲಕರಾದ ಅಲ್ಲಮಪ್ರಭು ಬೆಟ್ಟದೂರು ಅವರು, ಕಾರ್ಖಾನೆ ಬಾಧಿತ 22 ಹಳ್ಳಿಗಳಲ್ಲಿ ಫ್ಯಾಕ್ಟರಿಗಳು ಮಾಲಿನ್ಯ ನಿಗ್ರಹ ಮಾಡಿ ತೋರಿಸಬೇಕು. ಇಲ್ಲವೆ ತಕ್ಷಣದಿಂದಲೇ ಕಾರ್ಖಾನೆ ಮುಚ್ಚಿ ಮಾಲಿನ್ಯ ಹೋಗಲಾಡಿಸಬೇಕು ಎಂದು ಆಗ್ರಹಿಸಿದರು.

ಬಾಧಿತ ಹಳ್ಳಿಗಳಲ್ಲಿ ಕಾರ್ಖಾನೆಗಳು ಗೂಂಡಾಗಿರಿ ಮಾಡುತ್ತಾ ಬೆದರಿಕೆ ಒಡ್ಡುವುದು ಸಹಿಸಿಕೊಳ್ಳಲು ಸಾಧ್ಯವಿಲ್ಲ. ನಮ್ಮ ಪರಿಸರ ಹಾಳು ಮಾಡಿ ನಮ್ಮ



ಜನಗಳ ಮೇಲೆ ಹಲ್ಲೆ ನಡೆಸಿದರೆ ತಕ್ಕ ಉತ್ತರವನ್ನು ಚಳವಳಿಯಿಂದ ಕೊಡೋಣ. ಧೈರ್ಯದಿಂದ ದಿಟ್ಟ ನಿಲುವು ತಳೆದು ಪರಿಸ್ಥಿತಿ ಎದುರಿಸೋಣ ಎಂದರು.

ಬಾಧಿತ ಹಳ್ಳಿಗಳಾದ ಹಿರೇಬಗನಾಳ, ಹಾಲವರ್ತಿ, ಕುಣಿಕೇರಿ, ಕಾಸನಕಂಡಿ, ಕುಣಿಕೇರಿ ತಾಂಡಾ, ಲಾಚನಕೇರಿ, ಗಿಣಿಗೇರಿ, ಬಸಾಪುರ ಗ್ರಾಮದ ರೈತರು ಲಾಂಚನ ಬಿಡುಗಡೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ರೈತರು ತಮ್ಮ ಸಮಸ್ಯೆ ಕುರಿತು ಚರ್ಚಿಸಿದರು.

ಸಂಚಾಲಕ ಮಲ್ಲಿಕಾರ್ಜುನ ಬಿ. ಗೋನಾಳ ಅವರು ಸಂಘದ ವ್ಯಾಪ್ತಿ, ಕಾರ್ಯಸೂಚಿ, ಅದರ ದೃಷ್ಟಿಕೋನದ ಕುರಿತು ವಿವರಣೆ ಕೊಟ್ಟು ಮಾತನಾಡಿದರು. ಸಂಚಾಲಕ ಮಂಜುನಾಥ ಜಿ. ಗೊಂಡಬಾಳ ಮಾತನಾಡಿ, ಲಾಂಛನದಲ್ಲಿ ರೈತನ ಸಮಗ್ರ ಹಕ್ಕು, ಬಾಧನೆ ಎಲ್ಲಾ ಅಡಗಿದೆ. ಇದನ್ನು ಅರ್ಥ ಮಾಡಿಕೊಂಡು ದೃಢವಾಗಿ ಸಂಘ ಕಟ್ಟಿ ಹೋರಾಡೋಣ, ರೈತರ ಐಕ್ಯತೆಗಾಗಿ, ರೈತರ ಹಕ್ಕುಗಳಿಗಾಗಿ, ಕಷ್ಟ ಸುಖಗಳನ್ನು ಅರಿಯಲು ಒಂದು ವೇದಿಕೆಯಾಗಿ ಜಂಟಿ ಕ್ರಿಯಾ ವೇದಿಕೆಯ ಭಾಗವಾಗಿ ರೈತ ಸಂಘ ಇರುತ್ತದೆ ಎಂದರು.

ಈ ಸಂದರ್ಭದಲ್ಲಿ ಮಹಿಳಾ ನಾಯಕಿಯರಾದ ಜ್ಯೋತಿ ಎಂ. ಗೊಂಡಬಾಳ, ಕಾವ್ಯ ಪ್ರಸನ್ನ ಗಡಾದ, ಸೌಮ್ಯ ನಾಲ್ವಾಡ, ಬಾಲಕಿ ಅಕ್ಷರ ಎಂ. ಗೊಂಡಬಾಳ ಮಾತನಾಡಿದರು. ಮಾಲಾ ಬಡಿಗೇರ, ಸರೋಜಾ ಬಾಕಳೆ, ಶ್ವೇತಾ ಪಿ. ಅಕ್ಕಿ, ಮೂಕಪ್ಪ ಮೇಸ್ತ್ರಿ ಬಸಾಪುರ, ಯಮನೂರಪ್ಪ ಹಾಲಳ್ಳಿ ಬಸಾಪುರ, ಗವಿಸಿದ್ದಪ್ಪ ಪುಟಗಿ ಹಿರೇಬಗನಾಳ, ಗಣೇಶ ವಿಶ್ವಕರ್ಮ ಹಿರೇಬಗನಾಳ, ಕಾಸನಕಂಡಿ ಗ್ರಾಮದ ಪಕೀರಗೌಡ ಗೊಂದಿಹೊಸಳ್ಳಿ, ಯಂಕಪ್ಪ ಕಬ್ಬೇರ, ಶ್ರೀನಿವಾಸ ಎಚ್. ವಿ, ಕುಣಿಕೇರಿ ಗ್ರಾಮದ ರಮೇಶ್ ಡಂಬ್ರಳ್ಳಿ, ಯಮನೂರಪ್ಪ ಹಳ್ಳಿಕೇರಿ, ಹುಲುಗಪ್ಪ ಭೋವಿ,

ಚೆನ್ನವೀರಯ್ಯ ಹಿರೇಮಠ, ಮಂಜುನಾಥ ಮಾಲಿಪಾಟೀಲ್, ಲಾಚನಕೇರಿ ಗ್ರಾಮದ ನಾಗರಾಜ ಕುಷ್ಟಗಿ, ಟೀಕ್ಯಾ ನಾಯ್ಕ್, ಮಂಗಳೇಶ ರಾಠೋಡ, ಹನುಮಂತ ಕಟಿಗಿ, ಗವಿಸಿದ್ದರಡ್ಡಿ ರಡ್ಡೇರ, ಮಾರ್ಕಂಡಯ್ಯ ಹಿರೇಮಠ, ಶಂಕ್ರಪ್ಪ ಹಳ್ಳಿ, ಬಸವರಾಜ ಮೈನಳ್ಳಿ, ಸುಭಾನ್ ಸಾಬ್ ನೀರಲಗಿ, ನಾಗರಾಜ ಹಾಳಕೇರಿ, ಗ್ಯಾನೇಶ ಹ್ಯಾಟಿ ಭಾಗ್ಯನಗರ, ನಟರಾಜ ಸವಡಿ, ಮುಸ್ತಫಾ ಹಾಲವರ್ತಿ, ಪರಮೇಶ್ ಕುರಗಡ್ಡಿ, ಡಿ.ಎಂ. ಬಡಿಗೇರ ,ಎಸ್.ಬಿ.ರಾಜೂರು, ಬಿ.ಜಿ.ಕರಿಗಾರ, ಜಿ.ಬಿ. ಪಾಟೀಲ್, ರವಿ ಕಾಂತನವರ, ಶಿವಾನಂದಯ್ಯ ಬೀಳಗಿಮಠ, ಶಾಂತಮ್ಮ ಅಂಗಡಿ, ರಾಜಶೇಖರ ಏಳುಬಾವಿ, ಸಿದ್ದಪ್ಪ ಗೊರವರ, ಗಂಗಾಧರ ಖಾನಾಪುರ, ವೈ. ಶರಣು ಶೆಟ್ಟರ್, ಸಾವಿತ್ರಿ ಮುಜುಮದಾರ, ಸತ್ಯನಾರಾಯಣ, ಇನ್ನು ಮುಂತಾದ ಗ್ರಾಮದ ರೈತರು ಇದ್ದರು.



• ಮಲ್ಲಮ್ಮ ನುಡಿ ಚಿತ್ರ ಬಳ್ಳಾರಿ

ಶ್ರೀರಾಮ ನವಮಿ ಹಬ್ಬ ಹಿನ್ನೆಲೆಯಲ್ಲಿ ಬಳ್ಳಾರಿಯ ಶ್ರೀ ಕೋಟೆ ಆಂಜನೇಯ ಸ್ವಾಮಿ ದೇವಾಲಯಕ್ಕೆ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಶುಕ್ರವಾರ ಭೇಟಿ ನೀಡಿ ದೇವರ ದರ್ಶನ ಪಡೆದರು. ಈ ಸಂದರ್ಭದಲ್ಲಿ ದೇಗುಲದ ಅರ್ಚಕರು ಶಾಸಕ ನಾರಾ ಭರತ್ ರೆಡ್ಡಿ ಅವರನ್ನು ಸನ್ಮಾನಿಸಿ ಗೌರವಿಸಿದರು. ಪಾಲಿಕೆ ಮಾಜಿ ಮೇಯರ್, ಹಾಲಿ ಸದಸ್ಯೆ ಎಂ.ರಾಜೇಶ್ವರಿ ಸುಬ್ಬರಾಯಡು, ಚಾನಾಳ ಶೇಖರ್, ಎಂ.ಸುಬ್ಬರಾಯಡು ಇತರರಿದ್ದರು.

# ಸಾಮಾಜಿಕ ಸಮಾನತೆಯ ಕಾಲ ಬಸವಪೂರ್ವ ಯುಗ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಸವ ಪೂರ್ವ ಯುಗವು ಸಾಂಸ್ಕೃತಿಕ, ಧಾರ್ಮಿಕವಾಗಿ ವೈವಿಧ್ಯಮಯವಾಗಿದ್ದರೂ ಸಾಮಾಜಿಕ ಅಸಮಾನತೆಯಿಂದ ಕೂಡಿದ ಕಾಲವಾಗಿತ್ತು.ಆ ಕಾಲದ ಶಿವಶರಣರಿಂದ ರಚನೆಯಾದ ಸಾಹಿತ್ಯದಿಂದ ವಚನ ಸಾಹಿತ್ಯಕ್ಕೆ ಸ್ಪಷ್ಟರೂಪ ಸಿಗಲು ಸಾಧ್ಯವಾಯಿತು.ದೊರಕಿರುವ ವಚನಕಾರರ ವಚನಗಳಲ್ಲಿ ಪ್ರಭುತ್ವದ ನಿರಾಕರಣೆ,ವೈಚಾರಿಕ ಮನೋಭಾವ,ಆಳವಾದ ಸಾಮಾಜಿಕ ಚಿಂತನೆಯ ತುಡಿತಗಳಿವೆ.ಆದ್ಯ ವಚನಕಾರ ಜೇಡರ ದಾಸಿಮಯ್ಯ,ಕೊಂಡಗುಳಿ ಕೇಶಿರಾಜ,ಶಂಕರ ದಾಸಿಮಯ್ಯ,ಡೋಹರ ಕಕ್ಕಯ್ಯ,ಮಾದಾರ ಚನ್ನಯ್ಯ,ಕೆಂಭಾವಿ ಭೋಗಣ್ಣ,ತೆಲುಗು ಜೊಮ್ಮಣ್ಣ,ನಿಜಗುಣ ದೇವ,ಚಂದಿಮರಸ,ಸಕಲೇಶ ಮಾದರಸ ಮುಂತಾದ ಶಿವಶರಣರು ಚಲನಶೀಲ ಸಮಾಜದ ನಿರ್ಮಾಣ, ದಮನಿತರನು ಮೇಲೆತ್ತಲು ಶ್ರಮಿಸಿ ,ಜೀವನ ಮೌಲ್ಯಗಳನು ನವೀಕರಿಸುವ ಕಾರ್ಯ ಕೈಕೊಂಡರೆಂದು ಮೋಕಾ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಕನ್ನಡ ಪ್ರಾಧ್ಯಾಪಕ ಡಾ.ಎಂ.ಸೋಮಶೇಖರ ಅಭಿಪ್ರಾಯಪಟ್ಟರು.





ಅವರು ಕೌಲ್ ಬಜಾರಿನ ರಾಯಲ್ ಶಿಕ್ಷಕರ ಶಿಕ್ಷಣ ಮಹಾ ವಿದ್ಯಾಲಯದಲ್ಲಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿದ್ದ ' ಜೋಳದರಾಶಿ ದೊಡ್ಡನಗೌಡರ ದತ್ತಿ,ಜೋಳದರಾಶಿ ಚನ್ನವೀರನಗೌಡರ ದತ್ತಿ ಹಾಗೂ ಪ್ರೊ. ಕೆ.ಬಿ.ಹನುಮಂತರಾಯರ ದತ್ತಿ ಕಾರ್ಯಕ್ರಮದಲ್ಲಿ ' ಬಸವ ಪೂರ್ವ ಯುಗದ ಶಿವಶರಣರು ' ಎಂಬ ವಿಷಯದ ಕುರಿತು ಮಾತನಾಡಿದರು.ಬಸವ ಪೂರ್ವ ಕಾಲಕ್ಕೂ ಬಸವಣ್ಣನವರ ಕಾಲದ ಸಾಮಾಜಿಕ ವ್ಯವಸ್ಥೆಗೂ ಬಹಳ ವ್ಯತ್ಯಾಸವಿದೆ. ವಚನವೆಂದರೆ ಸಂಸ್ಕೃತಿ,ವಿಜ್ಞಾನ, ಸಾಹಿತ್ಯ ಮತ್ತು ಚಳವಳಿಯ ಅರ್ಥಗಳ ಜೊತೆಗೆ ಅನೇಕ ಆಶಯಗಳನ್ನು ಹೊಂದಿದೆ.ಜನ ಸಾಮಾನ್ಯರಿಗಾಗಿ ಸಾಮಾನ್ಯರು ರಚಿಸಿದ್ದು ವಚನ ಸಾಹಿತ್ಯ.ಅದು ತನ್ನ ಭಾಷೆ ಮತ್ತು ವಸ್ತುವಿನಿಂದ ಗಮನ ಸೆಳೆದು ನಡುಗನ್ನಡದಿಂದ ದೇಶೀಯತೆಗೆ ಸಾಗಿ ಸಮ ಸಮಾಜ ಕಟ್ಟುವ ಹಂಬಲ ಹೊಂದಿತ್ತು ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿದ ಇತಿಹಾಸ ಸಂಶೋಧಕ ಡಾ.ಸಿ.ಎಂ.ವೀರಭದ್ರಯ್ಯ ಮಾತನಾಡಿ,ವಚನ ಯುಗದ ಪೂರ್ವದಲ್ಲಿಯೇ ತಮಿಳುನಾಡಿನಲ್ಲಿ ತಿರುಮೂಲರು,ಅರವತ್ಮೂರು ಜನ ಪುರಾತನರು,ನಯನ್ಮಾರರು,ಸುಂದರರು ಶಿವನನ್ನು ಆರಾಧಿಸುವ ಶರಣರಾಗಿದ್ದರು .ನಂದಿಗ್ರಾಮ,ಬಳ್ಳಿಗಾವೆ,ಐಹೊಳೆ,ಆಂಧ್ರ,ತೆಲಂಗಾಣ ಸೇರಿದಂತೆ ದೊರೆತ ಶಾಸನಗಳಲ್ಲಿ ಶಿವಭಕ್ತ,ಮಹೇಶ್ವರ,ಪರಮಮಹೇಶ್ವರ ಎಂಬ ಉಲ್ಲೇಖಗಳಿವೆ.ಶೈವ ಪಂಥದ ಪಾಶುಪಾತರು,ಕಾಳಾಮುಖರು,ಕಾಪಾಲಿಕರು,ಲಕುಲೀಶ,ನಾಥ ಪಂಥ ಹೀಗೆ ದಕ್ಷಿಣ ಭಾರತದಲ್ಲಿ ಶೈವ ಸಿದ್ಧಾಂತದ ಪಾರಮ್ಯವಿತ್ತು ಎಂದು ಹೇಳಿದರು. ರಾಯಲ್ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರಾದ ಫರ್ಜಾನಾ ಬೇಗಂ ಅಧ್ಯಕ್ಷತೆವಹಿಸಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಜೋಳದರಾಶಿ ದೊಡ್ಡನಗೌಡ ಪ್ರತಿಷ್ಠಾನದ ಅಧ್ಯಕ್ಷ ಕೆ.ಪಂಪನಗೌಡ,ನವ ಕರ್ನಾಟಕ ಯುವಶಕ್ತಿ ರಾಜ್ಯ ಕಾರ್ಯಾಧ್ಯಕ್ಷ ಸಿದ್ಮಲ್ ಮಂಜುನಾಥ,ಜಿ.ಗುರುಲಿಂಗಪ್ಪ,ಜೆ.ಎಂ.ಶಿವರುದ್ರಯ್ಯ,ಉಪನ್ಯಾಸಕರಾದ ಎ.ಮಲ್ಲಿಕಾರ್ಜುನ,ಶಶಿಧರ,ರವಿಶರ್ಮ ಉಪಸ್ಥಿತರಿದ್ದರು.

ರಂಗ ಕಲಾವಿದ ಎಂ.ದಕ್ಷಿಣಾಮೂರ್ತಿ ಗೀತ ಗಾಯನ ಪ್ರಸ್ತುತಪಡಿಸಿದರು.

ಪ್ರಶಿಕ್ಷಣಾರ್ಥಿ ಸುಮಿತ್ರಾನಿರೂಪಿಸಿದರು.ಸವಿತಾ ಸ್ವಾಗತಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ದತ್ತಿದಾನಿಗಳನ್ನು ಗೌರವಿಸಿ ಸನ್ಮಾನಿಲಾಯಿತು.

# 29 ರಂದು ಬಳ್ಳಾರಿಯಲ್ಲಿ ಹುಲಿಕುಂಟೆ ಶ್ರೀ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಶ್ರೀ ಹುಲಿಕುಂಟೆರಾಯ ತೊಗಲುಗೊಂಬೆ ಕಲಾತಂಡ 2009 ರಲ್ಲಿ ಸ್ಥಾಪನೆ ಗೊಂಡು, ಬಯಲಾಟ,ರಂಗಭೂಮಿ,ಸಂಘಟನೆ, ಶಿಕ್ಷಣ, ವೈದ್ಯಕೀಯ. ಮಾಧ್ಯಮ, ವಿವಿಧ ಇಲಾಖೆ, ಮೊದಲಾದ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರಿಗೆ 2016 ರಿಂದ "ಹುಲಿಕುಂಟೆ ಶ್ರೀ" ಪ್ರಶಸ್ತಿಯನ್ನು ನೂರಕ್ಕೂ ಹೆಚ್ಚು ಗಣ್ಯರಿಗೆ ನೀಡಿ ಗೌರವಿಸಿದೆ. ಈ ಬಾರಿ 27 ಜನರಿಗೆ ಈ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ ಎಂದು ತಂಡದ ಅಧ್ಯಕ್ಷ ಕೆ.ಹೊನ್ನೂರಸ್ವಾಮಿ ತಿಳಿಸಿದ್ದಾರೆ.

ಅವರು ಇಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ. ತೊಗಲಗೊಂಬೆ ಕಲಾವಿದ ದಿ.ಹುಲೆಪ್ಪನವರ ಹೆಸರಲ್ಲಿ ಈ ಪ್ರಶಸ್ತಿಯನ್ನು ಮಾ.29 ರಂದು ಸಂಜೆ 6 ಗಂಟೆಗೆ ನಗರದ ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪ್ರದಾನ ಮಾಡಲಿದೆ.


ಸಂಡೂರಿನ ವಿರಕ್ತ ಮಠದ ಪ್ರಭುಸ್ವಾಮಿಗಳು ಸಾನಿದ್ಯವಹಿಸಿಲಿದ್ದು. ಕಸಾಪ ಸಿರುಗುಪ್ಪ ತಾಲೂಕಿನ ಅಧ್ಯಕ್ಷ ಡಾ.ಮಧುಸೂದನ ಕಾರಿಗನೂರು ಉದ್ಘಾಟನೆ ಮಾಡಲಿದ್ದಾರೆ. ಜೆ.ಟಿ.ಫೌಂಡೇಶನ್ ಅಧ್ಯಕ್ಷ ಜೋಳದರಾಶಿ ತಿಮ್ಮಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ. ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ದೊಡ್ಡ ಲೇಶವ ರೆಡ್ಡಿ, ಲಿಡ್ಕರ್ ಅಧ್ಯಕ್ಷ ಮುಂಡ್ರಿಗಿ ನಾಗರಾಜ್ ಹಿರಿಯ ವರದಿಗಾರ ಕೆ.ಎಂ.ಮಂಜುನಾಥ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ. ನಾಗರಾಜ್, ವಿಎಸ್‌ಕೆ ವಿವಿಯ ಪ್ರೊ.ಎನ್.ಶಾಂತಾನಾಯ್ಕ, ಮೇಧಾ ಕಾಲೇಜು ಮುಖ್ಯಸ್ಥ ಡಾ.ರಾಮ್ ಕಿರಣ್, ಕಲಾವಿದ ದೊಡ್ಡಬಸಪ್ಪ ಯಾಟಿ ಪಾಲ್ಗೊಳ್ಳಲಿದ್ದಾರೆ.

ಪ್ರಶಸ್ತಿ ಪ್ರಧಾನದ ಜೊತೆಗೆ ಮಲ್ಲಿಕಾರ್ಜುನ ತುರವನೂರು ಇವರಿಂದ ಸುಗಮ ಸಂಗೀತ, ಜಿಲಾನಿ ಬಾಷಾ ತಂಡದಿಂದ ನೃತ್ಯ, ಮಲ್ಲಿಕಾರ್ಜುನಸ್ವಾಮಿ ತಂಡದಿಂದ ರೇಣುಕ ಯಲ್ಲಮ್ಮ ಮಹಾತ್ಮೆ ಬಯಲಾಟ ಪ್ರದರ್ಶನ ಇರಲಿದೆ ಎಂದು ತಿಳಿಸಿದರು. ತೊಗಲಗೊಂಬೆ ಕಲಾವಿದ ಪ್ರಭು ಉಪಸ್ಥಿತರಿದ್ದರು.

# ಶ್ರೀರಾಮ ನವಮಿ, ಕಲ್ಯಾಣೋತ್ಸವ ಕೋಸಂಬರಿ, ಪಾನಕ ವಿತರಣೆ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಹೃದಯ ಭಾಗ ಮೋತಿ ವೃತ್ತದ ಶ್ರೀರಾಮ ಮಂದಿರದಲ್ಲಿ ಶ್ರೀರಾಮ ನವಮಿಯನ್ನು ಶುಕ್ರವಾರ ಅದ್ದೂರಿಯಾಗಿ ಆಚರಿಸಲಾಯಿತು. ಬೆಳಿಗ್ಗೆ ವಿಶೇಷ ಪೂಜೆ, ಅರ್ಚನೆ, ವಿಶೇಷ ಅಲಂಕಾರ, ನೈವೇದ್ಯ, ಮಂಗಳಾರತಿ ಸೇರಿದಂತೆ ವಿವಿಧ ಪೂಜೆಗಳು ನಡೆದವು. ನಂತರ ನಡೆದ ಕಲ್ಯಾಣೋತ್ಸವದಲ್ಲಿ ಅನೇಕ ಜನ ದಂಪತಿಗಳು ಭಾಗವಹಿಸಿ ಭಕ್ತಿ ಸಮರ್ಪಿಸಿದರು. ನಗರ ಸೇರಿದಂತೆ ನಾನಾ ಕಡೆಯಿಂದ ಆಗಮಿಸಿದ ನೂರಾರು ಭಕ್ತರು ಸರದಿಯಲ್ಲಿ ನಿಂತು ಪ್ರಭು ಶ್ರೀರಾಮನ ದರ್ಶನ ಪಡೆದು ಪುನೀತರಾದರು. ಸೂರ್ಯವಂಶ ಕ್ಷತ್ರಿಯ ಸಮಾಜ ಬಾಂಧವರು, ಟ್ರಸ್ಟ್‌ನ ಪದಾಧಿಕಾರಿಗಳು ಆಗಮಿಸಿದ ಎಲ್ಲ ಭಕ್ತರಿಗೂ ತೀರ್ಥ ಪ್ರಸಾದ, ಕೋಸಂಬರಿ, ಪಾನಕ ವಿತರಣೆ ಮಾಡಿ ಭಕ್ತಿ ಸಮರ್ಪಿಸಿದರು. ಈ ಸಂದರ್ಭದಲ್ಲಿ ವಿ.ಎನ್.ರಾಜ್, ತಾರಾನಾಥ್ ಸೇರಿದಂತೆ ಅನೇಕ ಗಣ್ಯರು, ಶ್ರೀರಾಮನ ಭಕ್ತರು ಪ್ರಭು ಶ್ರೀರಾಮನ ಸೇವೆ ಸಲ್ಲಿಸಿ ಭಕ್ತಿ ಸಮರ್ಪಿಸಿದರು. ದೇಗುಲದ ಮುಂಭಾಗದಲ್ಲಿ ಭಕ್ತರು ಕೋಸಂಬರಿ, ಮಜ್ಜಿಗೆ, ಪಾನಕ, ಬಾಳೆಹಣ್ಣು ವಿತರಿಸುವ ಮೂಲಕ ಶ್ರೀರಾಮದೇವರ ಸೇವೆ ಸಲ್ಲಿಸಿದರು.



# ರೈತರ ಮೆಕ್ಕೆಜೋಳ ಖರೀದಿ, ವ್ಯಾಪಾರಿ ನಾಪತ್ತೆ, ರೈತರ ಆಕ್ರೋಶ

ಬಳ್ಳಾರಿ: ರೈತರಿಂದ ಅಪಾರ ಪ್ರಮಾಣದಲ್ಲಿ ಮೆಕ್ಕೆಜೋಳ ಹಾಗೂ ಭತ್ತ ಖರೀದಿಸಿ ವ್ಯಾಪಾರಿಯೊಬ್ಬ ರೈತರಿಗೆ ಹಣ ನೀಡದೇ ಪರಾರಿಯಾಗಿರುವ ಘಟನೆ ಜಿಲ್ಲೆಯ ಸಿರುಗುಪ್ಪ ತಾಲೂಕಿನ ಬೈರಾಪುರ, ಸಿರಿಗೆರೆ ಸೇರಿದಂತೆ ವ್ಯಾಪಾರಿಯ ನಾನಾ ಗ್ರಾಮಗಳಲ್ಲಿ ನಡೆದಿದೆ. ವಂಚನೆಗೆ ಒಳಗಾದ ಸುಮಾರು ರೈತರು ವ್ಯಾಪ್ತಿಯ ಸಿರಿಗೆರೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ವಿಚಾರಣೆ ಮುಂದುವರೆದಿದೆ.ಬೈರಾಪುರ ಗ್ರಾಮದ ನಿವಾಸಿ ಬಸವನಗೌಡ, ಮಂಜುನಾಥ್ ಗೌಡ, ಸಿರಿಗೆರೆ ಗ್ರಾಮದ ಮಂಜುನಾಥ್ ಗೌಡ ಅವರು ಸೇರಿದಂತೆ ವಿವಿಧ ವ್ಯಾಪಾರಿಗಳು, ನಮ್ಮ ಬೈರಾಪುರ, ಸಿರಿಗೆರೆ ವ್ಯಾಪ್ತಿಯ ನಾನಾ ಗ್ರಾಮಗಳಲ್ಲಿ ಅಪಾರ ಪ್ರಮಾಣದಲ್ಲಿ ಮೆಕ್ಕೆಜೋಳ, ಭತ್ತ ಸೇರಿದಂತೆ ಇತರೆ ಧಾನ್ಯಗಳನ್ನು ನೂರಾರು ರೈತರಿಂದ ಕಳೆದ ಡಿ.12 ರಂದು ಖರೀದಿಸಿದ್ದು, ನಂತರ



ನಿಗಧಿತ ಸಮಯಕ್ಕೆ ರೈತರಿಗೆ ಹಣ ನೀಡದೇ ಪರಾರಿಯಾಗಿದ್ದಾರೆ. ಮೆಕ್ಕೆಜೋಳ ಪ್ರತಿ ಕ್ವಿಂಟಲ್ ಗೆ 1980, ಭತ್ತ ಪ್ರತಿ ಕ್ವಿಂಟಲ್ ಗೆ 2400 ರೂ.ಗಳಂತೆ ಖರೀದಿಸಿದ್ದು, ವ್ಯಾಪಾರಿಗಳು 15 ದಿನದೊಳಗೆ ಹಣ ನೀಡಲಾಗುವುದು ಎಂದು ಭರವಸೆ ನೀಡಿದ್ದರು. ಆದರೆ, ಇಲ್ಲಿವರೆಗೂ ನಯಾ ಪೈಸೆ ನೀಡಿಲ್ಲ ಎಂದು ನಗರದ ಜಿಲ್ಲಾಧಿಕಾರಿ ಕಚೇರಿ ರೈತರು ಕಣ್ಣೀರಿಟ್ಟರು. ಗ್ರಾಮದ ಕೆಲವರ ಮಧ್ಯಸ್ಥಿಕೆಯಿಂದ ಸುಮಾರು ಬಾರಿ ಭೇಟಿ ನೀಡಿ ಹಣ ನೀಡುವಂತೆ ಮನವಿ ಮಾಡಿದರು, ಇಂದು, ನಾಳೆ ಎಂದು ದಿನಗಳನ್ನು ದೂಡಿದರು. ನಂತರ ಅವರ ಮೊಬೈಲ್ ಸ್ವಿಚ್ ಆಫ್ ಎಂದು ಬರುತ್ತಿದ್ದು, ಹಗಲು ರಾತ್ರಿ ಎನ್ನದೆ ದುಡಿದ ರೈತರಲ್ಲಿ ಆತಂಕ ಶುರುವಾಗಿದೆ. ಕೂಡಲೇ ಜಿಲ್ಲಾಡಳಿತ, ಸಂಬಂಧಿಸಿದ ಪೊಲೀಸ್ ಠಾಣೆ ಅಧಿಕಾರಿಗಳು ಈ ಕುರಿತು ಗಮನಹರಿಸಿ ರೈತರಿಗೆ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಬೈರಾಪುರ ಸೇರಿದಂತೆ ಸುತ್ತಲಿನ ನಾನಾ ಗ್ರಾಮದ ನೂರಾರು ರೈತರು ಇದ್ದರು.

# ಶ್ರೀರಾಮ ನವಮಿ, ವಿಶೇಷ ಪೂಜೆ, ಕಲ್ಯಾಣೋತ್ಸವ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಸಿರುಗುಪ್ಪ ರಸ್ತೆಯ ಗಣೇಶ ನಗರ ಬಡಾವಣೆಯ ಶ್ರೀ ಲಕ್ಷ್ಮೀ ನರಸಿಂಹ ಸಹಿತ, ಶ್ರೀ ಯಾಂತ್ರೋದ್ಧಾರಕ ಶ್ರೀ ಆಂಜನೇಯ ದೇವಸ್ಥಾನ, ಶ್ರೀ ರಾಘವೇಂದ್ರ ಸ್ವಾಮಿಗಳವರ ಮಠದಲ್ಲಿ ಶುಕ್ರವಾರ ಶ್ರೀರಾಮನವಮಿಯನ್ನು ಅದ್ದೂರಿಯಾಗಿ ಆಚರಿಸಲಾಯಿತು. ಶ್ರೀರಾಮ ನವಮಿ ಹಬ್ಬದ ನಿಮಿತ್ತ ಶ್ರೀ ಸೀತಾರಾಮ ಕಲ್ಯಾಣೋತ್ಸವ ಸೇರಿದಂತೆ ವಿವಿಧ ಪೂಜೆಗಳು ಶ್ರೀಮಠದ ಶ್ರೀ ಬಲರಾಮ ಆಚಾರ್ಯ ಅವರ ನೇತೃತ್ವದಲ್ಲಿ ಅದ್ದೂರಿಯಾಗಿ ನಡೆದವು. ಪ್ರಭು ಶ್ರೀರಾಮ ಚಂದ್ರನ ರಥೋತ್ಸವ ಅದ್ದೂರಿಯಾಗಿ ನಡೆಯಿತು.

ವಿವಿಧ ಭಜನಾ ಮಂಡಳಿ ಸದಸ್ಯರಿಂದ ಸಾಮೂಹಿಕ ಭಜನೆ, ಕೋಲಾಟ ಗಮನಸೆಳೆಯಿತು. ಇದಕ್ಕೂ ಮುನ್ನ ದೇವಾಲಯದಲ್ಲಿ ಶ್ರೀರಾಮ ನವಮಿ ಹಬ್ಬದ ನಿಮಿತ್ತ ವಿಶೇಷ ಪೂಜೆ, ಅರ್ಚನೆ, ಅಲಂಕಾರ, ನೈವೇದ್ಯ, ಮಂಗಳಾರತಿ ಸೇರಿದಂತೆ ವಿವಿಧ ಪೂಜೆಗಳು ನಡೆದವು. ನಂತರ ಬಳ್ಳಾರಿಯ ಪಂ.ಉಡುಪಿ ಕೃಷ್ಣಾಚಾರ ಅವರಿಂದ ಶ್ರೀರಾಮನ ಮಹಿಮೆ ಕುರಿತು ಉಪನ್ಯಾಸ ನಡೆಯಿತು. ಆಗಮಿಸಿದ ಎಲ್ಲ ಭಕ್ತರಿಗೆ ತೀರ್ಥ, ಪ್ರಸಾದ, ಕೋಸಂಬರಿ, ಪಾನಕ ವಿತರಿಸಲಾಯಿತು.



ಬಳ್ಳಾರಿ: ಈ ಹಿಂದಿನಂತೆ ಎಲ್ಲ ನಿವೃತ್ತ ನೌಕರರಿಗೆ ಆರ್ಥಿಕ ಸೌಲಭ್ಯಗಳನ್ನು ಮುಂದುವರೆಸಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘದ ಪದಾಧಿಕಾರಿಗಳು ಬುಧವಾರ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಡಾ.ಎಂ. ಟಿ.ಮಲ್ಲೇಶ ಅವರು ಮಾತನಾಡಿ, ಅಖಿಲ ಭಾರತ ರಾಜ್ಯ ಸರ್ಕಾರಿ ನೌಕರರ ಸಂಘಗಳ ಒಕ್ಕೂಟದ ಕರೆ ಮೇರೆಗೆ, ನಮ್ಮ ಎಲ್ಲ ನಿವೃತ್ತ ನೌಕರರು, ಸರ್ಕಾರಕ್ಕೆ ಮನವಿ ಸಲ್ಲಿಸಿ, ಈ ಹಿಂದಿನಂತೆ ಎಲ್ಲ ನಮ್ಮ ನಿವೃತ್ತ ನೌಕರರಿಗೆ ಆರ್ಥಿಕ ಸೌಲಭ್ಯಗಳನ್ನು ಮುಂದುವರೆಸಬೇಕು ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರಿಗೆ ಒತ್ತಾಯಿಸಿದ್ದೇವೆ ಎಂದರು. ಈ ಸಂದರ್ಭದಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ದೇವೇಂದ್ರಪ್ಪ, ಖಜಾಂಚಿ ರವೀಂದ್ರ ಸ್ವಾಮಿ ಜೆ. ಸೇರಿದಂತೆ ಅನೇಕ ಜನ ಪಿಂಚಣಿದಾರರು ಉಪಸ್ಥಿತರಿದ್ದರು.

# ಮಾದಕ ವಸ್ತುಗಳ ವಿರುದ್ಧ ಸಮರ ಸಾರಿರುವ ಉತ್ತರ ಕನ್ನಡ ಜಿಲ್ಲಾಡಳಿತ

ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಉತ್ತರ ಕನ್ನಡ ಜಿಲ್ಲೆಯಲ್ಲಿ ಮಾದಕ ವಸ್ತುಗಳ ಸಾಗಾಟ,ಸೇವನೆ,ಸರಬರಾಜು ವಿರುದ್ಧ ತೀವ್ರ ಸಮರ ಸಾರಿರುವ ಉತ್ತರ ಕನ್ನಡ ಜಿಲ್ಲಾಡಳಿತವು ಜಿಲ್ಲೆಯನ್ನು ಮಾದಕ ವಸ್ತು ಮುಕ್ತವನ್ನಾಗಿಸುವ ನಿಟ್ಟಿನಲ್ಲಿ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಿದ್ದು, ಜಿಲ್ಲೆಯಾದ್ಯಂತ ವ್ಯಾಪಕ ತಪಾಸಣೆಗಳನ್ನು ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತಂತೆ ಜಾಗೃತಿ ಮತ್ತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ.

ಜಿಲ್ಲೆಯಲ್ಲಿ 2023 ರಿಂದ ಇದುವರೆಗೆ ಮಾದಕ ವಸ್ತು ಸಾಗಾಟಕ್ಕೆ ಸಂಬಂಧಿಸಿದಂತೆ 106 ಪ್ರಕರಣಗಳಲ್ಲಿ 169 ಆರೋಪಿತರನ್ನು ಬಂಧಿಸಿದ್ದು, 75.534 ಕೆ.ಜಿ ಗಾಂಜಾ, 3.429 ಕೆ.ಜಿ. ಚರಸ್, 1.8 ಗ್ರಾಂ ಎಂಡಿಎಂಎ ನ್ನು ವಶಪಡಿಸಿಕೊಂಡಿದ್ದು, ಇವುಗಳ ಒಟ್ಟು ಮೌಲ್ಯ ರೂ. 48,89,400 ಆಗಿದ್ದು, ಮಾದಕ ವಸ್ತು ಸೇವನೆಯ 456 ಪ್ರಕರಣಗಳಲ್ಲಿ 577 ಜನರನ್ನು ಬಂಧಿಸಲಾಗಿದೆ. ಇದರಲ್ಲಿಯೂ 2025 ರ ಜನವರಿಯಿಂದ 2026 ರ ಫೆಬ್ರವರಿ ವರೆಗೆ ಅತೀ ಹೆಚ್ಚಿನ ಸಂಖ್ಯೆಯಲ್ಲಿ ಆರೋಪಿತರನ್ನು ಬಂಧಿಸುವ ಮೂಲಕ, ಮಾದಕ ವಸ್ತು ಸೇವನೆ ಮತ್ತು ಸರಬರಾಜುದಾರರಿಗೆ ಕಠಿಣ ಸಂದೇಶ ರವಾನಿಸಲಾಗಿದೆ.

ಇದೇ ಅವಧಿಯಲ್ಲಿ ಮಾದಕ ವಸ್ತು ಸೇವನೆ ಮತ್ತು ಸರಬರಾಜುನಲ್ಲಿ ಕಂಡುಬಂದಿರುವ ಒಟ್ಟು 746 ಅಪರಾಧಿಗಳಲ್ಲಿ 18 ರಿಂದ 30 ವಯೋಮಾನದವರ ಸಂಖ್ಯೆ 593 ಆಗಿದ್ದು, 31 ರಿಂದ 40 ವಯೋಮಾನದವರ ಸಂಖ್ಯೆ 107 ಆಗಿದೆ. ಈ ಅಂಕಿ ಅಂಶಗಳ ಮೂಲಕ ಜಿಲ್ಲೆಯ ಹೆಚ್ಚಿನ ಸಂಖ್ಯೆಯ ಯುವ ಸಮುದಾಯ ಈ ಮಾದಕ ವಸ್ತುಗಳ ಜಾಲದಲ್ಲಿ ಸಿಲುಕಿರುವುದು ಕಂಡುಬರುತ್ತಿದ್ದು, ಇದು ತೀರಾ ಕಳವಳಕಾರಿಯಾಗಿದೆ. ಜಿಲ್ಲೆಯ ಯುವ ಸಮುದಾಯಕ್ಕೆ ಮತ್ತು ಸಾರ್ವಜನಿಕರಿಗೆ ಮಾದಕ ವಸ್ತುಗಳ ಸೇವನೆ ಮತ್ತು ಅದರ ದುಷ್ಪರಿಣಾಮಗಳ ಕುರಿತಂತೆ ಜಾಗೃತಿ ಮತ್ತು ಅರಿವು ಮೂಡಿಸಲು ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ 2025 ಜನವರಿಯಿಂದ ಇದುವರೆಗೆ 1,515 ಕಾರ್ಯಕ್ರಮಗಳನ್ನು ಆಯೋಜಿಸಿದ್ದು, 1,005 ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ, 49,653 ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಾಗಿದೆ. 527 ಸಾರ್ವಜನಿಕ ಕಾರ್ಯಕ್ರಮಗಳನ್ನು ಆಯೋಜಿಸಿ, 20,548 ಸಾರ್ವಜನಿಕರೊಂದಿಗೆ ಸಂವಾದ ನಡೆಸಲಾಗಿದೆ ಅಲ್ಲದೇ ಮಾದಕ ವಸ್ತು ಮುಕ್ತ ಕರ್ನಾಟಕ ಹೆಸರಿನಲ್ಲಿ ಆಯೋಜಿಸಿದ್ದ 5 ಕಿ.ಮೀ ಮತ್ತು 10 ಕಿ.ಮೀ ನ ಮ್ಯಾರಾಥಾನ್‌ನಲ್ಲಿ 1500 ಕ್ಕೂ ಅಧಿಕ ಮಂದಿ ಭಾಗವಹಿಸಿ ಮಾದಕ ವಸ್ತುಗಳ ವಿರುದ್ಧ ಸಾಮಾಜಿಕ ಸಂದೇಶ ಸಾರಿದ್ದಾರೆ. ಅಲ್ಲದೇ ಜಿಲ್ಲೆಯ ಎಲ್ಲಾ ಪದವಿ ಕಾಲೇಜುಗಳು, ಪದವಿ ಪೂರ್ವ ಕಾಲೇಜುಗಳು ಮತ್ತು ಪ್ರೌಢಶಾಲೆಗಳಲ್ಲಿ ನಿಯಮಿತವಾಗಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತಂತೆ ಆರೋಗ್ಯ ಇಲಾಖೆಯ ಮೂಲಕ ಅರಿವು ಮತ್ತು ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸಲಾಗುತ್ತಿದ್ದು, ಜಿಲ್ಲೆಯ ಎಲ್ಲಾ ಪ್ರಮುಖ ಇಲಾಖೆಗಳು ತಮ್ಮ ದೈನಂದಿನ ಚಟುವಟಿಕೆಗಳ ಜೊತೆಗೆ ತಮ್ಮ ವ್ಯಾಪ್ತಿಯಲ್ಲಿ ಮಾದಕ ವಸ್ತುಗಳ ತಡೆ ಕುರಿತಂತೆ ಹೆಚ್ಚಿನ ನಿಗಾವಹಿಸಿವೆ. ಪೊಲೀಸ್ ಇಲಾಖೆ ವತಿಯಿಂದ ಜಿಲ್ಲೆಯ ಎಲ್ಲಾ ಚೆಕ್ ಪೋಸ್ಟ್‌ಗಳಲ್ಲಿ ಬಿಗು ತಪಾಸಣೆ ನಡೆಸಲಾಗುತ್ತಿದ್ದು, ಇಲಾಖೆಯ ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಎನ್.ಡಿ.ಪಿ.ಎಸ್ ಕಾಯ್ದೆಯ ಬಗ್ಗೆ ತರಬೇತಿ ಕಾರ್ಯಗಾರಗಳನ್ನು ಆಯೋಜಿಸಲಾಗಿದೆ. ಮಾದಕ ವಸ್ತುಗಳ ನಿಯಂತ್ರಣಕ್ಕೆ ಸರ್ಕಾರ ಸೂಚಿಸಿರುವ ಮಾರ್ಗಸೂಚಿಗಳಾದ ತಡೆಗಟ್ಟುವಿಕೆ, ಕಣ್ಗಾವಲು, ಜಾಗೃತಿ, ವ್ಯಸನಮುಕ್ತತೆ ಮತ್ತು ಜಾರಿ ಸೂಚನೆಗಳನ್ನು ಕಟ್ಟುನಿಟ್ಟಾಗಿ ಅನುಸರಿಸಲಾಗುತ್ತಿದೆ. ಕಳೆದ ಮೂರು ವರ್ಷಗಳಲ್ಲಿ 108 ಪ್ರಕರಣಗಳಲ್ಲಿ ವಶಪಡಿಸಿಕೊಂಡಿದ್ದ ರೂ.39,24,700 ಮೌಲ್ಯದ 93.96 ಕೆಜಿ ಗಾಂಜಾವನ್ನು ನಿಯಮಾನುಸಾರ ನಾಶಪಡಿಸಲಾಗಿದೆ.



**ಉತ್ತರ ಕನ್ನಡ ಜಿಲ್ಲೆಯಲ್ಲಿ ಮಾದಕ ವಸ್ತುಗಳ ಸಾಗಾಟ, ಸೇವನೆ, ಸರಬರಾಜು ತಡೆಯುವ ಉದ್ದೇಶದಿಂದ ಪೊಲೀಸ್, ಗುಪ್ತಚರ ಇಲಾಖೆ, ಕೋಸ್ಟ್ ಗಾರ್ಡ್, ಕರಾವಳಿ ಕಾವಲು ಪೊಲೀಸ್, ಅಬಕಾರಿ, ಅರಣ್ಯ, ಕೃಷಿ, ಮೀನುಗಾರಿಕೆ, ರೈಲ್ವೆ, ಬಂದರು, ಅಂಚೆ ಇಲಾಖೆ, ಕಂದಾಯ ಸೇರಿದಂತೆ ಪ್ರಮುಖ ಎಲ್ಲಾ ಇಲಾಖೆಗಳು ಮಾದಕ ವಸ್ತುಗಳ ನಿರ್ಮೂಲನೆ ಕಾರ್ಯದಲ್ಲಿ ತೊಡಗಿಕೊಂಡಿದ್ದು, ಅಂಚೆ ಮತ್ತು ಕೊರಿಯರ್ ಮೂಲಕ ಸ್ವೀಕೃತವಾಗುವ ಅನುಮಾನಾಸ್ಪದ ಪಾರ್ಸೆಲ್‌ಗಳನ್ನು ಕೂಡ ತಪಾಸಣೆಗೆ ಒಳಪಡಿಸಲಾಗುತ್ತಿದೆ.**

**ಕಾರವಾರ ಬಂದರಿಗೆ ಆಗಮಿಸಿಸುವ ವಿದೇಶಿ ಹಡಗುಗಳು ಮತ್ತು ಬೋಟ್ ಗಳನ್ನೂ ಕೂಡಾ ತಪಾಸಣೆ ಮಾಡಲಾಗುತ್ತಿದ್ದು, ಎನ್‌ಕಾರ್ಡ್ ಸಭೆಯನ್ನು ಪ್ರತೀ ತಿಂಗಳು ನಿಯಮಿತವಾಗಿ ನಡೆಸುವ ಮೂಲಕ ಎಲ್ಲಾ ಇಲಾಖೆಗಳಿಗೆ ಜವಾಬ್ದಾರಿ ನಿಗಧಿಗೊಳಿಸಿ, ಕಡ್ಡಾಯವಾಗಿ ವರದಿ ಪಡೆಯಲಾಗುತ್ತಿದೆ. ಜಿಲ್ಲೆಯಾದ್ಯಂತ ವ್ಯಾಪಕವಾಗಿ ಜಾಗೃತಿ ಮತ್ತು ಅರಿವು ಕಾರ್ಯಕ್ರಮಗಳನ್ನೂ ಕೂಡ ಆಯೋಜಿಸಲಾಗುತ್ತಿದ್ದು, ಜಿಲ್ಲೆಯನ್ನು ಮಾದಕ ವಸ್ತು ಮುಕ್ತ ಜಿಲ್ಲೆಯನ್ನಾಗಿಸುವ ಗುರಿ ಹೊಂದಲಾಗಿದೆ. : ಕೆ.ಲಕ್ಷ್ಮೀಪ್ರಿಯಾ, ಜಿಲ್ಲಾಧಿಕಾರಿಗಳು, ಉತ್ತರ ಕನ್ನಡ ಜಿಲ್ಲೆ.**

# ಕುಡಿಯುವ ನೀರಿನ ಸಮಸ್ಯೆ ಆಗದಂತೆ ಮುನ್ನೆಚ್ಚರಿಕೆ ವಹಿಸಿ : ಸುಷಮಾ

ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಜಿಲ್ಲೆಯಲ್ಲಿ ಪ್ರಸಕ್ತ ಬೇಸಿಗೆಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡುಬರದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸುಷಮಾ ಗೋಡಬೋಲೆ ಸೂಚಿಸಿದರು.ಅವರು ಶುಕ್ರವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಸಾಮಾನ್ಯ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡು ಬರಬಹುದಾದ ಗ್ರಾಮಗಳ ಪಟ್ಟಿಯನ್ನು ಮುಂಚಿತವಾಗಿ ಸಿದ್ದಪಡಿಸಿಕೊಂಡು ಆ ಗ್ರಾಮಗಳಲ್ಲಿ ಖಾಸಗಿ ಬೋರ್‌ವೆಲ್ ಸೇರಿದಂತೆ ಪರ್ಯಾಯ ನೀರಿನ ವ್ಯವಸ್ಥೆಗೆ ಅಗತ್ಯ ಸಿದ್ದತೆಗಳನ್ನು ಕೈಗೊಳ್ಳುವಂತೆ ತಿಳಿಸಿದ ಅವರು ಜಿಲ್ಲೆಯಲ್ಲಿ ಹೊಸ ಬೋರ್‌ವೆಲ್ ಕೊರೆಯುವ ಸಂದರ್ಭದಲ್ಲಿ ಕಡ್ಡಾಯವಾಗಿ ವೈಜ್ಞಾನಿಕವಾಗಿ ಅಂತರ್ಜಲ ಮರುಪೂರಣ ವ್ಯವಸ್ಥೆ ಅವಡಿಸಿಕೊಂಡಲ್ಲಿ ಮಾತ್ರ ಅನುಮತಿಯನ್ನು ನೀಡುವಂತೆ ನಿರ್ದೇಶನ ನೀಡಿದರು. ಜಿಲ್ಲೆಯಲ್ಲಿ ದುಸ್ಥಿತಿಯಲ್ಲಿರುವ ಮಳೆಮಾಪನ ಯಂತ್ರಗಳು ದುರಸ್ಥಿ/ ಹೊಸದಾಗಿ ಅಳವಡಿಕೆಯಾಗುವ ವರೆಗೆ ಬೆಳೆ ವಿಮೆ ಪಾವತಿಗೆ ಈ ಹಿಂದಿನಂತೆ ಗ್ರಾಮ ಪಂಚಾಯತ್‌ಗಳಲ್ಲಿ ಅಳವಡಿಸಿರುವ ಮ್ಯಾನ್ಯುಯಲ್ ಗೇಜ್ ಯಂತ್ರಗಳ ಮಾಪನವನ್ನು ವಿಮಾ ಪರಿಹಾರದ ಮೊತ್ತ ಪಾವತಿಗೆ ಪರಿಗಣಿಸುವ ಕುರಿತಂತೆ ಜಿಲ್ಲೆಯ ತೋಟಗಾರಿಕಾ ಇಲಾಖೆ ಮೂಲಕ ಇಲಾಖೆಯ ಕೇಂದ್ರ ಕಚೇರಿಗೆ ಪತ್ರ ಬರೆಯುವಂತೆ ತಿಳಿಸಿದರು. ಮುಂಡಗೋಡು ನಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆ ವಂಚಿತ ವಿದ್ಯಾರ್ಥಿಗಳಿಗೆ ಪರೀಕ್ಷೆ-2 ರಲ್ಲಿ ಪರೀಕ್ಷೆ ಬರೆಯಲು ಅಗತ್ಯವಿರುವ ಎಲ್ಲಾ ರೀತಿಯ ನೆರವು ಮತ್ತು ಪ್ರೋತ್ಸಾಹ ನೀಡುವ ಮೂಲಕ ಮತ್ತೊಮ್ಮೆ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲು ಅಗತ್ಯವಿರುವ ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ಅವರು ಪರೀಕ್ಷೆಗೆ ಹಾಜರಾಗುವಂತೆ ನೋಡಿಕೊಳ್ಳಿ ಎಂದು ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಗ್ಯಾಸ್ ಸಿಲೆಂಡರ್ ಸಮಸ್ಯೆಯಿಂದ ಜಿಲ್ಲೆಯಲ್ಲಿ ಬಿಸಿಯೂಟ ಯೋಜನೆಗೆ ಯಾವುದೇ ಸಮಸ್ಯೆಯಾಗಿಲ್ಲವೆಂದು ಹಾಗೂ ಅಕ್ಷರದಾಸೋಹ ಸಿಬ್ಬಂದಿಗಳಿಗೆ ಇಡುಗಂಟು ಸೌಲಭ್ಯವನ್ನು ನೀಡಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಜಿಲ್ಲೆಯಲ್ಲಿ ಆರೋಗ್ಯ ಕೇಂದ್ರಗಳು ಮತ್ತು ಅಂಗನವಾಡಿಗಳ ಕಟ್ಟಡ ನಿರ್ಮಾಣದ ಬಾಕಿ ಇರುವ ಕಾಮಗಾರಿಗಳನ್ನು ನಿಗಧಿತ ಅವಧಿಯೊಳಗೆ ಮುಕ್ತಾಯಗೊಳಿಸುವಂತೆ ಸೂಚಿಸಿದ ಅವರು, ಆರೋಗ್ಯ ಇಲಾಖೆಯಲ್ಲಿ ಉತ್ತಮ ಗುಣಮಟ್ಟದ ವೈದ್ಯಕೀಯ ಪರಿಕರಗಳನ್ನು ಖರೀದಿಸುವಂತೆ ಮತ್ತು ಎಲ್ಲಾ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವಂತೆ ಸೂಚಿಸಿದರು. ಜಲ ಜೀವನ್ ಮಿಷನ್ ಅಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳನ್ನು ಸಂಪೂರ್ಣವಾಗಿ ಮುಕ್ತಾಯಗೊಳಿಸುವಂತೆ ಸೂಚಿಸಿದ ಅವರು, ಜಿಲ್ಲೆಯಲ್ಲಿ ಅಂತರ್ಜಲ ವೃದ್ಧಿಗೆ ಹೆಚ್ಚಿನ ಆದ್ಯತೆ ನೀಡುವಂತೆ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಸಣ್ಣ ನೀರಾವರಿ ಇಲಾಖೆ ಮತ್ತು ಕೃಷಿ ಇಲಾಖೆ ವತಿಯಿಂದ ನಿರ್ಮಿಸಿರುವ ನೀರು ಸಂಗ್ರಹ ಕಾಮಗಾರಿಗಳ ಸ್ಥಳಗಳನ್ನು ಮ್ಯಾಪಿಂಗ್ ಮಾಡುವಂತೆ ನಿರ್ದೇಶಿಸಿದರು.

# ಉಪಚುನಾವಣೆ ಅಂತಿಮ ಕಣದಲ್ಲಿ 9 ಅಭ್ಯರ್ಥಿಗಳು

• ಮಲ್ಲಮ್ಮ ನುಡಿ ವಾರ್ತೆ, ಬಾಗಲಕೋಟೆ

ಬಾಗಲಕೋಟೆ ವಿಧಾನಸಭಾ ಉಪಚುನಾವಣೆಗೆ ನಾಮಪತ್ರ ಹಿಂಪಡೆಯಲು ಕೊನೆಯ ದಿನವಾದ ಗುರುವಾರ 14 ಅಭ್ಯರ್ಥಿಗಳ ಪೈಕಿ 5 ಅಭ್ಯರ್ಥಿಗಳು ತಮ್ಮ ಉಮೇದುವಾರಿಕೆಯನ್ನು ಹಿಂಪಡೆದ್ದಿದ್ದು, ಅಂತಿಮವಾಗಿ ಚುನಾವಣಾ ಕಣದಲ್ಲಿ 9 ಅಭ್ಯರ್ಥಿಗಳು ಇದ್ದಾರೆಂದು ಚುನಾವಣಾಧಿಕಾರಿ ಸಂತೋಷ ಜಗಲಾಸರ ತಿಳಿಸಿದ್ದಾರೆ.

ಅಂತಿಮ ಚುನಾವಣಾ ಕಣದಲ್ಲಿ ಇಂಡಿಯನ್ ನ್ಯಾಷನಲ್ ಕಾಂಗ್ರೆಸ್‌ನಿಂದ ಉಮೇಶ ಹುಲ್ಲಪ್ಪ ಮೇಟಿ, ಭಾರತೀಯ ಜನತಾ ಪಾರ್ಟಿಯಿಂದ ಚರಂತಿಮಠ ವೀರಭದ್ರಯ್ಯ, ಉತ್ತಮ ಪ್ರಜಾಕೀಯ ಪಾರ್ಟಿಯಿಂದ ಅಂತೋಷ ಸವ್ವಾಸೆ, ಜನತಾ ಚಳುವಳಿ ಭಾರತ ಪಕ್ಷದಿಂದ ತೇಜೋರಾಮಶೆಟ್ಟಿ ದೇವಾಂಗ, ಕರ್ನಾಟಕ ರಾಷ್ಟ್ರ ಸಮಿತಿಯಿಂದ ನಾಗರಾಜ ಕಲಕುಟಗರ, ಬ್ಲೂ ಇಂಡಿಯಾ ಪಾರ್ಟಿಯಿಂದ ತಳವಾರ ಶಿವಕುಮಾರ, ಆಲ್ ಇಂಡಿಯಾ ಜನರಕ್ಷ ಪಾರ್ಟಿಯಿಂದ ಸಿದ್ದಪ್ಪ ಗೋಡಿ, ಪಕ್ಷೇತರದಿಂದ ಆನಂದ ಜಕಾತಿ, ರವಿ ಶಿವಪ್ಪ ಪಡಸಲಗಿ ಉಳಿದುಕೊಂಡಿದ್ದಾರೆ.

ಪಕ್ಷೇತರ ಗೋವಿಂದರಾಜ ಬಳ್ಳಾರಿ, ಅಬ್ದುಲ್‌ರಜಾಕ ಬಾಳೀಕಾಯಿ, ಆಯ್ಯುಬಖಾನ ಲಾಲಸಾಬ ಬಾಗೇವಾಡಿ, ಪ್ರಶಾಂತ ಶರಣಪ್ಪ ರಾವ ಹಾಗೂ ಯಂಕಪ್ಪ ಬಾಪಣ್ಣ ಕಮತಗಿ ಅವರು ತಮ್ಮ ನಾಮಪತ್ರವನ್ನು ಹಿಂಪಡೆದಿದ್ದಾರೆ ಎಂದು ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

# ಬೋಗಸ್ ಕಾಮಗಾರಿ ಆರೋಪ: ನಗರಸಭೆ ಜೆಇ ಸಸ್ಪೆಂಡ್



ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ

ನಗರಸಭೆಯಲ್ಲಿ ಬೋಗಸ್ ಕಾಮಗಾರಿಗಳ ಹೆಸರಲ್ಲಿ ಸುಮಾರು 10 ಕೋಟಿ ನಷ್ಟ ಉಂಟುಮಾಡಿದ ಆರೋಪದ ಹಿನ್ನೆಲೆಯಲ್ಲಿ, ನಗರಸಭೆ ಜೆಇ ಸೋಮಲಿಂಗಪ್ಪ ಅವರನ್ನು ಪೌರಾಡಳಿತ ನಿರ್ದೇಶನಾಲಯ ಮಾ. 16ರಂದು ಅಮಾನತುಗೊಳಿಸಿ ಆದೇಶ ಹೊರಡಿಸಿದೆ.

ಅಮಾನತು ಆದೇಶ ಹೊರಬಿದ್ದಿದ್ದು, ಘಟನೆಗೆ ಸಂಬಂಧಿಸಿದಂತೆ 10 ದಿನಗಳ ಬಳಿಕ ಇದು ಬಹಿರಂಗವಾಗಿದೆ ಎಂದು ತಿಳಿದುಬಂದಿದೆ.

2023ರಿಂದ 2025ರವರೆಗೆ ಕೈಗೊಳ್ಳಲಾದ ಒಟ್ಟು 336 ಕಾಮಗಾರಿಗಳಲ್ಲಿ ಕೆಲವು ಕಾಮಗಾರಿಗಳನ್ನು ಕಳಪೆವಾಗಿ ನಿರ್ವಹಿಸಿ, ಉಳಿದ ಕಾಮಗಾರಿಗಳ ಹೆಸರಿನಲ್ಲಿ ಬೋಗಸ್ ಬಿಲ್ ಮಾಡಿರುವುದು ಪ್ರಾಥಮಿಕ ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ಈ ಹಗರಣದಲ್ಲಿ ಹಿಂದಿನ ಪೌರಾಯುಕ್ತ ಗಣಪತಿ ಪಾಟೀಲ್, ಎಇಇ ಮಧುರ ಮಗದೂರ ಹಾಗೂ ಕಾಮಗಾರಿಗಳ ಗುಣಮಟ್ಟ ಪರೀಕ್ಷೆಗೆ ನೇಮಕಗೊಂಡಿದ್ದ ಎಸ್.ಆರ್. ಕನ್ಸಲ್ಟಂಟ್ ಸಂಸ್ಥೆಯ ಪಾತ್ರವೂ ಇರುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ.

ಈ ಸಂಬಂಧ 2025ರ ಸೆಪ್ಟೆಂಬರ್ ತಿಂಗಳಲ್ಲಿ ಲೋಕಾಯುಕ್ತದಲ್ಲಿ ದೂರು ದಾಖಲಾಗಿತ್ತು.

# ಸಹಾಯಧನಕ್ಕೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜಿಲ್ಲೆಯ ಮಾನವಿ ಪಟ್ಟಣದ ಪುರಸಭೆಯಿಂದ 2026–27ನೇ ಸಾಲಿಗಾಗಿ ಶೇ.7.25 ಯೋಜನೆಯಡಿ ಇತರೆ ಜನಾಂಗದವರಿಗೆ ಎಸ್.ಎಫ್.ಸಿ. ಅನುದಾನದಲ್ಲಿ ಶಸ್ತ್ರ ಚಿಕಿತ್ಸೆ ಒಳಪಟ್ಟ ರೋಗಿಗಳಿಗೆ ಸಹಾಯ ಧನ ನೀಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು, ಅರ್ಜಿಯೊಂದಿಗೆ 2 ಭಾವಚಿತ್ರಗಳು, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ ಕಾರ್ಡ್ ಮತ್ತು ರೇಷನ್ ಕಾರ್ಡ್, ಆಸ್ಪತ್ರೆಯಲ್ಲಿ ಅಡಮಿಟ್ ಆದ ಮತ್ತು ಡಿಸ್ಚಾರ್ಜ ಆದ ಕಾರ್ಡಗಳು, ಶಸ್ತ್ರ ಚಿಕಿತ್ಸೆಗೆ ಒಳಪಟ್ಟ ವೈದ್ಯಕೀಯ ಎಕ್ಸ–ರೇ, ಸ್ಕಾ ನಿಂಗ್, ರಕ್ತಪರೀಕ್ಷೆಗಳ ದಾಖಲೆಗಳು, ಜಿಲ್ಲಾ ಅಥವಾ ತಾಲ್ಲೂಕು ಸರಕಾರಿ ವೈಧ್ಯಿಕಾರಿಗಳಿಂದ ದೃಢೀಕರಣ ಪತ್ರ, ವೈದ್ಯಕೀಯಕ್ಕೆ ಸಂಬಂಧಿಸಿದ ಬಿಲ್‌ಗಳು, ಬ್ಯಾಂಕ್ ಪಾಸ್ ಪುಸ್ತಕದೊಂದಿಗೆ ಏಪ್ರಿಲ್ 15 ರೊಳಗಾಗಿ ಕಚೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಂಗ್ರೆಸ್ ಪಕ್ಷದಿಂದ ದಲಿತರಿಗೆ ಮೋಸ: ಗೋವಿಂದ ಕಾರಜೋಳ



• ಮಲ್ಲಮ್ಮ ನುಡಿ ವಾರ್ತೆ, ಬಾಗಲಕೋಟೆ

ಮೀಸಲಾತಿ ವಿಷಯದಲ್ಲಿ ಹಾಗೂ ದಲಿತರಿಗಾಗಿ ನಿಗದಿಯಾಗಿದ್ದ ಅನುದಾನವನ್ನು ಗ್ಯಾರಂಟಿ ಯೋಜನೆಗೆ ಬಳಸುವ ಮೂಲಕ ಕಾಂಗ್ರೆಸ್ ಸರ್ಕಾರ ದಲಿತರಿಗೆ ಮೋಸ ಮಾಡಿದೆ ಎಂದು ಮಾಜಿ ಸಚಿವ, ಸಂಸದ ಗೋವಿಂದ ಕಾರಜೋಳ ಆರೋಪಿಸಿದರು.

ಬಾಗಲಕೋಟೆ ಉಪಚುನಾವಣೆಯ ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ಪರವಾಗಿ ಕಿರಸೂರು, ಭಗವತಿ, ಗುಳಬಾಳ, ಮುತ್ತತ್ತಿ ಗ್ರಾಮಗಳ ದಲಿತ ಸಮುದಾಯದ ಮತದಾರರನ್ನು ಉದ್ದೇಶಿಸಿ ಮಾತನಾಡಿದ ಅವರು, ಮೊದಲಿನಿಂದಲೂ ಕಾಂಗ್ರೆಸ್ ಪಕ್ಷ ದಲಿತರಿಗೆ ಅನ್ಯಾಯ ಮಾಡುತ್ತಲೇ ಬಂದಿದೆ. ಅದನ್ನು ಸಮುದಾಯ ಅರ್ಥ ಮಾಡಿಕೊಂಡಿಲ್ಲ ಎಂದರು.

ರಾಜ್ಯ ಸರ್ಕಾರ ನೀರಾವರಿ ಯೋಜನೆ, ಮನೆ ಕಟ್ಟಿಸುವುದು, ಭೂಮಿ ಒದಗಿಸುವುದು ಸೇರಿ ದಲಿತರಿಗೆ ಯಾವುದೇ ಸೌಲಭ್ಯ ಕಲ್ಪಿಸಿಲ್ಲ. ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರ ಎಸ್.ಸಿಗೆ ಶೇ.17 ಹಾಗೂ ಎಸ್.ಟಿಗೆ ಶೇ.7 ಮೀಸಲಾತಿ ಮಾಡಿದ್ದನ್ನು ಸಿದ್ಧರಾಮಯ್ಯ ಸರ್ಕಾರ ಕಡಿತಗೊಳಿಸುವ ಮೂಲಕ ದಲಿತರಿಗೆ ಮೋಸ ಮಾಡಿದೆ. ಇಂತಹ ಸರ್ಕಾರವನ್ನು ಮನೆಗೆ ಕಳಿಸಲು ಸಮುದಾಯ ಚಿಂತನೆ ಮಾಡಬೇಕು ಎಂದ ಕಾರಜೋಳ, ಎಪ್ರಿಲ್ 9 ರ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ಅವರ ಕಮಲದ ಗುರ್ತಿಗೆ ಮತ ನೀಡುವಂತೆ ಮನವಿ ಮಾಡಿದರು.

ಪಕ್ಷದ ಮುಖಂಡರಾದ ಯಲ್ಲಪ್ಪ ಬೆಂ–ಡಿಗೇರಿ, ಮುತ್ತಣ್ಣ ಬೆಣ್ಣೂರ, ರಾಜು ಮುದೇನೂರ, ಬಸವರಾಜ್ ಡುಗ್ಗಿ, ಶಿವಾನಂದ ಟವಳಿ, ಬಸವರಾಜ ಕಟಗೇರಿ, ಅರುಣ ಲೋಕಾಪುರ, ಮಹಾಂತೇಶ ಗುಳೇದ, ಸಿದ್ದು ಲೋಕಾಪುರ,ಹನಮಂತ ಮಾದರ ಮತ್ತಿತರರು ಇದ್ದರು.

# ಯಲ್ಲಾಲಿಂಗರ ವೈಭವದ ಪಲ್ಲಕ್ಕಿ ಉತ್ಸವ



• ಮಲ್ಲಮ್ಮ ನುಡಿ ವಾರ್ತೆ, ಬಾಗಲಕೋಟೆ

ರಾಮನವಮಿ ನಿಮಿತ್ತ ಬೆನಕಟ್ಟಿ ಗ್ರಾಮದಲ್ಲಿ ಶುಕ್ರವಾರ ಯಲ್ಲಾಲಿಂಗ ಮಹಾರಾಜರ ಪಲ್ಲಕ್ಕಿ ಉತ್ಸವ ವೈಭವದಿಂದ ಜರುಗಿತು.

ಬೆಳಿಗ್ಗೆ ಯಲ್ಲಾಲಿಂಗ ಮಹಾರಾಜರ ಮೂರ್ತಿಗೆ ರುದ್ರಾಭಿಷೇಕ, ಮಹಾಪೂಜೆ ಹಾಗೂ ಮಹಾ ಮಂಗಳಾರತಿ ನೆರವೇರಿದ ನಂತರ ಯಲ್ಲಾಲಿಂಗರ ತೊಟ್ಟಿಕೋತ್ಸವ ಕಾರ್ಯಕ್ರಮ ನಡೆಯಿತು.

ನಂತರ ದೇವಸ್ಥಾನದಿಂದ ವಿವಿಧ ವಾದ್ಯಗಳು, ಕೊಣ್ಣೂರಿನ ಡೊಳ್ಳು ಕುಣಿತ, ಬಾಜಾ ಭಜಂತ್ರಿಗಳೊಂದಿಗೆ ಪಲ್ಲಕ್ಕಿ ಮೆರವಣಿಗೆ ಹೊರಟು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗಿ ಹೇಮರಡ್ಡಿ ಮಲ್ಲಮ್ಮ ದೇವಸ್ಥಾನಕ್ಕೆ ತಲುಪಿ ಪೂಜೆ ನೆರವೇರಿದ ನಂತರ ಸ್ವಸ್ಥಾನಕ್ಕೆ ತಲುಪಿತು. ಪಲ್ಲಕ್ಕಿ ಮೆರವಣಿಗೆ ಓಣಿಗಳಲ್ಲಿ ಸಾಗಿ ಬರುವಾಗ ಮಹಿಳೆಯರು ಪೂಜೆ ಸಲ್ಲಿಸಿ ನಮನ ಸಲ್ಲಿಸಿದರು. ಕುಂಭ ಹೊತ್ತ ನೂರಕ್ಕೂ ಹೆಚ್ಚು ಮಹಿಳೆಯರು ಹಾಗೂ ಕಳಸಾರತಿ ಹಿಡಿದ ನಾರಿಯರು ಮೆರವಣಿಗೆಗೆ ಕಳೆ ತಂದರು. ಮಧ್ಯಾಹ್ನ ಮಾಜಿ ಯೋಧ ಸಿದ್ದಪ್ಪ ಕೆಲೂಡಿ ಅವರಿಂದ ಅನ್ನ ಪ್ರಸಾದ ಸೇವೆ ನಡೆಯಿತು.

ಹಿರಿಯರಾದ ರಂಗಪ್ಪ ಭಗವತಿ, ರಾಯಪ್ಪ ಬಂಡಿ, ನಿಂಗಪ್ಪ ಶಿರೂರ, ಶೇಖಪ್ಪ ಬಂಡಿ, ಧರ್ಮಣ್ಣ ಸುಣಗದ, ಶಂಕ್ರಪ್ಪ ಕುದರಿ, ಬಸಪ್ಪ ಗುಳೇದ, ಮಲ್ಲಪ್ಪ ಗುಳೇದ, ಮುತ್ತು ಗೊರವರ, ಶೇಖಪ್ಪ ಹುಲ್ಯಾಳ, ಮುದ್ದಪ್ಪ ಸು–ಣಗದ, ರಮೇಶ ನಿಂಬಲಗುಂದಿ, ನೀಲಪ್ಪ ಮಲಘಾಣ, ಮಾಯಪ್ಪ ಬೆಣ್ಣೂರ, ಪವಾಡೆಪ್ಪ ಸುಣಗದ, ರಾಜು ಗೊರವರ ಮತ್ತಿತರರು ಉತ್ಸವದಲ್ಲಿ ಪಾಲ್ಗೊಂಡಿದ್ದರು.

# ಗ್ರಾಹಕರು ಪರಿಶೀಲಿಸಿ ಸರಿಯಾದ ಉತ್ಪನ್ನ ಖರೀದಿಸಿ: ದರಗದ್

• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ

ಗ್ರಾಹಕರು ಖರೀದಿಸುವ ಪ್ರತಿಯೊಂದು ಉತ್ಪನ್ನದ ಮೇಲೆ ಇರುವ ತಯಾರಿಕಾ ದಿನಾಂಕ, ಉತ್ಪನ್ನದ ಬಳಕೆಯ ಅವಧಿ ಹಾಗೂ ಗುಣಮಟ್ಟದ ಗುರುತು ಸೇರಿದಂತೆ ಉತ್ಪನ್ನದಲ್ಲಿ ಬಳಸಲಾದ ಪದಾರ್ಥಗಳನ್ನು ಪರಿಶೀಲಿಸಿ, ಸರಿಯಾದ ಉತ್ಪನ್ನಗಳನ್ನು ಖರೀದಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್. ದರಗದ್ ಅವರು ಹೇಳಿದರು.

ಅವರು ಗುರುವಾರದಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಹಾಗೂ ಭಾರತರತ್ನ ಶ್ರೀ ಅಟಲ್ ಬಿಹಾರಿ ವಾಜಪೇಯಿ ಕಾನೂನು ಮಹಾವಿದ್ಯಾಲಯ, ಕೊಪ್ಪಳ ಇವರುಗಳ ಸಂಯುಕ್ತ ಆಶ್ರಯದಲ್ಲಿ ಕಾನೂನು ಮಹಾವಿದ್ಯಾಲಯದಲ್ಲಿ ಆಯೋಜಿಸಲಾದ ವಿಶ್ವ ಗ್ರಾಹಕರ ದಿನಾಚರಣೆ–2026 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ಗ್ರಾಹಕರು ಖರೀದಿ ಮಾಡುವ ಪ್ರತಿಯೊಂದು ಉತ್ಪನ್ನವೂ ಗುಣಮಟ್ಟದಿಂದ ಕೂಡಿರುವ ಬಗ್ಗೆ ಹಾಗೂ ಸುರಕ್ಷಿತವಾಗಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಯಾವುದೇ ಮೋಸ, ತಪ್ಪು ತೂಕ, ಅವಧಿ ಮೀರಿದ ವಸ್ತುಗಳ ವಿರುದ್ಧ ತಕ್ಷಣ ದೂರು ನೀಡುವ ಜಾಗೃತಿ ಬೆಳೆಸಿಕೊಳ್ಳಬೇಕು. ಎಂಆರ್‌ಪಿಗಿಂತ ಹೆಚ್ಚಾಗಿ ಹಣ ವಸೂಲಿ ಮಾಡುವವರ ವಿರುದ್ಧ ಕ್ರಮ ಕೈಗೊಳ್ಳಲು ಗ್ರಾಹಕರು ಮುಂದೆ ಬರಬೇಕು. ಜೊತೆಗೆ ಪ್ರಜ್ಞಾವಂತರಾದ ವಿದ್ಯಾರ್ಥಿಗಳು ಮತ್ತು ಇಂದಿನ ಯುವಕರು ತಮ್ಮ ಸುತ್ತಮುತ್ತಲಿನಲ್ಲಿ ನಡೆಯುವ ಅನ್ಯಾಯದ ವಿರುದ್ಧ ಧ್ವನಿ ಎತ್ತಬೇಕು. ಅಂದಾಗ ಮಾತ್ರ ದೇಶ ಬದಲಾವಣೆ ಕಾಣಲು ಸಾಧ್ಯ. ಭಾರತದಲ್ಲಿ "ಗ್ರಾಹಕ ಸಂರಕ್ಷಣಾ ಕಾಯ್ದೆ 2019" ಜಾರಿಗೆ ಬಂದಿರುವುದರಿಂದ ಗ್ರಾಹಕರಿಗೆ ಹೆಚ್ಚಿನ ರಕ್ಷಣೆಯಿದೆ. ಮೋಸ, ತಪ್ಪು ಜಾಹೀರಾತು ಹಾಗೂ ಕಳಪೆ ಉತ್ಪನ್ನಗಳ ವಿರುದ್ಧ ದೂರು ಸಲ್ಲಿಸಿ ನ್ಯಾಯ ಪಡೆಯಲು ಈ ಕಾಯ್ದೆ ಸಹಕಾರಿಯಾಗಿದೆ ಎಂದು ಹೇಳಿದರು.

ಕೊಪ್ಪಳದ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಜಿ.ಇ.ಸೌಭಾಗ್ಯಲಕ್ಷ್ಮೀ ಅವರು ಮಾತನಾಡಿ, ಮಾರುಕಟ್ಟೆಯಲ್ಲಿ ದೊರೆಯುವ ಪ್ರತಿಯೊಂದು ಉತ್ಪನ್ನವೂ ಸುರಕ್ಷತಾ ಮಾನದಂಡಗಳಿಗೆ ಅನುಗುಣವಾಗಿರಬೇಕು. ಗ್ರಾಹಕರು ತಾವು ಬಳಸುವ ವಸ್ತುಗಳ ಬಗ್ಗೆ ಭಯಮುಕ್ತರಾದಾಗ ಮಾತ್ರ ಸದೃಢ ಆರ್ಥಿಕತೆ ನಿರ್ಮಾಣವಾಗಲು ಸಾಧ್ಯ. ಸುರಕ್ಷಿತ ಉತ್ಪನ್ನಗಳು, ಆತ್ಮವಿಶ್ವಾಸದ ಗ್ರಾಹಕರು ಎಂಬ ಘೋಷವಾಕ್ಯ ಕುರಿತು ಮತ್ತು ಕಾನೂನಿನ ಕುರಿತು ಅರಿವು ಮೂಡಿಸಿದರು.

ಕೊಪ್ಪಳದ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಸದಸ್ಯರಾದ ರಾಜು ಎನ್. ಮೇತ್ರಿ ಅವರು ಮಾತನಾಡಿ, ಖರೀದಿಸುವ ಪ್ರತಿ ವಸ್ತುಗಳಲ್ಲಿ ಸಿದ್ಧಪಡಿಸಿದ ದಿನಾಂಕ ಮತ್ತು ಎಷ್ಟು ದಿನಗಳ ಕಾಲ ಬಳಸಬಹುದು ಎಂಬುದನ್ನು ಗ್ರಾಹಕರು ತಿಳಿದಿರಬೇಕು. ಮಾರಾಟ ಮಾಡುವವರು ವಸ್ತುಗಳ ನಿಖರ ಮಾಹಿತಿ ನೀಡಬೇಕು. ಲಾಭದ ಆಸೆಗೆ ಮನಬಂದಂತೆ ವ್ಯಾಪಾರ ಮಾಡಬಾರದು. ಅಂತಹ ಅನ್ಯಾಯ ನಿಮ್ಮ ಕಣ್ಣಮುಂದೆ ಕಂಡುಬಂದರೆ ಅದರ ವಿರುದ್ಧ ಪ್ರಶ್ನೆ ಮಾಡಬೇಕು ಎಂದರು.

ವಿಶೇಷ ಉಪನ್ಯಾಸಕರಾಗಿ ಆಗಮಿಸಿದ್ದ ಕೊಪ್ಪಳ ನ್ಯಾಯವಾದಿಗಳಾದ ಸಾವಿತ್ರಿ ಮುಜುಮದಾರ ಅವರು ಮಾತನಾಡಿ, ಗ್ರಾಹಕ ಸಂರಕ್ಷಣಾ ಕಾಯ್ದೆ 2019 ಕುರಿತು ಮತ್ತು ನಕಲಿ ಮತ್ತು ಅಪಾಯಕಾರಿ ಉತ್ಪನ್ನಗಳು, ಡಿಜಟಲ್ ಮೋಸ, ಕಾನೂನುಗಳ ಕೊರತೆ, ಗ್ರಾಮೀಣ ಭಾರತದ ಸವಾಲುಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರು ಹಾಗೂ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತದ ಜಿಲ್ಲಾ ವ್ಯವಸ್ಥಾಪಕರಾದ ವಿಶ್ವನಾಥಗೌಡ ಎಂ.ಎನ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭ ಕೊಪ್ಪಳದ ಭಾರತರತ್ನ ಶ್ರೀ ಅಟಲ್ ಬಿಹಾರಿ ವಾಜಪೇಯಿ ಕಾನೂನು ಮಹಾವಿದ್ಯಾಲಯದ ಪ್ರಾಂಶುಪಾಲರಾದ ಉಷಾದೇವಿ ಎಸ್. ಹಿರೇಮಠ, ಕಾನೂನು ಮಾಪನಶಾಸ್ತ್ರ ಇಲಾಖೆಯ ಸಹಾಯಕ ನಿಯಂತ್ರಕರಾದ ರವಿಕುಮಾರ್, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಹಾಗೂ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತದ ಸಿಬ್ಬಂದಿಗಳ ಸೇರಿದಂತೆ ಕಾಲೇಜಿನ ಉಪನ್ಯಾಸಕರು, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಚುನಾವಣಾ ನಿಯಮ ಕಟ್ಟುನಿಟ್ಟಾಗಿ ಪಾಲಿಸಿ




• ಮಲ್ಲಮ್ಮ ನುಡಿ ವಾರ್ತೆ, ಬಾಗಲಕೋಟೆ

ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆಗೆ ಸಂಬಂಧಿಸಿದಂತೆ ಕಣದಲ್ಲಿರುವ ಅಭ್ಯರ್ಥಿಗಳು ಚುನಾವಣಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸಾಮಾನ್ಯ ವೀಕ್ಷಕರಾದ ಪಾರುಲ್ ಪಟವಾರಿ ಸೂಚನೆ ನೀಡಿದರು.

ಉಪ ವಿಭಾಗಾಧಿಕಾರಿಗಳ ಸಭಾಂಗಣದಲ್ಲಿಂದು ಉಪ ಚುನಾವಣಾ ಕಣದಲ್ಲಿರುವ ಅಭ್ಯರ್ಥಿ ಅಥವಾ ಪ್ರತಿನಿಧಿಗಳೊಂದಿಗೆ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಉಪ ಚುನಾವಣಾ ಪ್ರಕ್ರಿಯೆ ಪಾರದರ್ಶಕವಾಗಿ ಹಾಘೂ ನ್ಯಾಯಸಮ್ಮತವಾಗಿ ನಡೆಸಲು ಅಭ್ಯರ್ಥಿಗಳು ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಗೆ ಅವಕಾಶ ನೀಡಬಾರದು. ಅಭ್ಯರ್ಥಿಗಳಿಗೆ ಮತದಾರರ ಮೇಲೆ ಪ್ರಭಾವ ಬೀರುವಂತಹ ಅನಧಿಕೃತ ಚಟುವಟಿಕೆಗಳನ್ನು ಕೈಗೊಳ್ಳಬಾರದರು. ಹಣ, ಮಧ್ಯ ಅಥವಾ ಉಡುಗೊರೆಗಳ ವಿತರಣೆ ನಿಷೇಧಿತವಾಗಿದ್ದು, ಈ ಬಗ್ಗೆ ಕಟ್ಟುನಿಟ್ಟಿನ ನಿಗಾ ವಹಿಸಲಾಗುತ್ತಿದೆ. ಇಂತಹ ಪ್ರಕರಣಗಳನ್ನು ತಡೆಗಟ್ಟಲು ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಕಠಿಣ ನಿಗಾ ವಹಿಸುವುದಾಗಿ ತಿಳಿಸಿದರು. ಯಾವುದೇ ದೂರುಗಳಿದ್ದಲ್ಲಿ ನೇರವಾಗಿ ವೀಕ್ಷಕರ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳ ಗಮನಕ್ಕೆ ತರಬಹುದಾಗಿದೆ ಎಂದು ತಿಳಿಸಿದರು.

ಚುನಾವಣಾ ಪ್ರಚಾರ ವೇಳೆ ಧ್ವನಿವರ್ಧಕಗಳ ಬಳಕೆ, ವಾಹನಗಳ ಅನುಮತಿ, ಸಭೆ–ಸಮಾವೇಶಗಳ ಆಯೋಜನೆ ಸೇರಿದಂತೆ ಇತರೆ ರ್‍ಯಾಲಿಗಳಿಗೆ ಸಂಬಂಧಿಸಿದಂತೆ ಚುನಾವಣಾ ಅಧಿಕಾರಿಗಳಿಗೆ ನೀಡಿ ಅನುಮತಿ ಪಡೆದುಕೊಳ್ಳಬಹುದಾಗಿದೆ. ಪ್ರತಿಯೊಂದು ಅನುಮತಿಗಳಿಗೆ ಸಿಂಗಲ್ ವಿಂಡೋ ತೆರೆಯಲಾಗಿದೆ. ಪ್ರಚಾರದ ಮೇಳೆ ಮಕ್ಕಳನ್ನು ಬಳಕೆ ಮಾಡಿಕೊಳ್ಳುವಂತಿಲ್ಲ. ಅನುಮತಿ ಪಡೆಯದೇ ಇದ್ದಲ್ಲಿ ಸೂಕ್ತ ಕ್ರಮಕೈಗೊಳ್ಳಲಾಗುತ್ತಿದೆ. ಪತ್ರಿಕೆ ಹಾಗೂ ವಿದ್ಯುನ್ಮಾನ ಮಾಧ್ಯಮಗಳಲ್ಲಿ ಜಾಹೀರಾತು ನೀಡಬೇಕಾದಲ್ಲಿ ಎಂಸಿಎಂಸಿ ಸಮಿತಿಯಿಂದ ಅನುಮತಿ ಪಡೆಯುವುದು ಕಡ್ಡಾಯವಾಗಿದೆ, ಸೋಸಿಯಲ್ ಮೇಡಿಯಾ, ಪೇಯ್ಡ ನ್ಯೂಸ್‌ಗಳ ಮೇಲೆ ನಿಗಾವಹಿಸಲಾಗುತ್ತಿದೆ ಎಂದರು.

ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ ಬಾಗಲಕೋಟೆ ವಿಧಾನಸಭಾ ಉಪಚುನಾವಣೆಗೆ 322 ಮತಗಟ್ಟೆಗಳಿದ್ದು, ಪ್ರತಿಯೊಂದು ಮತಗಟ್ಟೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. 85 ವರ್ಷ ಮೇಲ್ಪಟ್ಟ ಮತದಾರರಿಗೆ ಮನೆಯಿಂದಲೇ ಮತದಾನ ಮಾಡಲು ಚುನಾವಣಾ ಆಯೋಗವು ಅವಕಾಶ ಕಲ್ಪಿಸಲಾಗಿದೆ. ಹೆಚ್ಚುವರಿಯಾಗಿ ಸ್ಥಾಪಿಸಲಾದ ಮೂರು ಮತಗಟ್ಟೆಗಳಿಗೆ ಬೂತ ಮಟ್ಟದ ಎಜೆಂಟರಗಳನ್ನು ನೇಮಕ ಮಾಡಲು ತಿಳಿಸಿದರು. ಪೊಲೀಸ್ ವೀಕ್ಷಕರಾದ ಆನಂದ ರೋಹಣ ಆನಂದ ಲ್ಯಾಂಡ ಆರ್ಡರ್ ಪಾಲನೆ ಆಗಬೇಕು ಎಂದರು.

ಎಂಸಿಸಿ ಜಿಲ್ಲಾ ನೋಡಲ್ ಅಧಿಕಾರಿ ಹಾಗೂ ಜಿ.ಪಂ ಸಿಇಓ ಶಶಿಧರ ಕುರೇರ ಮಾತನಾಡಿ ಚುನಾವಣೆಯಲ್ಲಿ ಯಾವುದೇ ರೀತಿಯಲ್ಲಿ ಉಲ್ಲಂಘನೆಯಾಗದಂತೆ ನೋಡಿಕೊಳ್ಳಬೇಕು. ಸಭೆ, ಸಮಾವೇಶಗಳಿದ್ದಾಗ ವೇದಿಕೆಯನ್ನು ಪ್ರಾರಂಭವಾಗುವ 2 ಗಂಟೆ ಮುಂಚಿತವಾಗಿ ವೇದಿಕೆ ಹಾಕಿ ನಂತರ ಮುಗಿದ ಒಂದು ಗಂಟೆಯಲ್ಲಿ ಅದನ್ನು ತೆರವುಗೊಳಿಸುವ ಕೆಲಸವಾಗಬೇಕು. ದಾಖಲೆ ಇಲ್ಲದೇ 50 ಸಾವಿರ ರೂ. ತೆಗೆದುಕೊಂಡು ಹೋಗಲು ಅವಕಾಶವಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಚುನಾವಣಾಧಿಕಾರಿ ಹಾಗೂ ಉಪ ವಿಭಾಗಾಧಿಕಾರಿ ಸಂತೋಷ ಜಗಲಾಸರ, ಸಹಾಯಕ ಚುನಾವಣಾಧಿಕಾರಿಗಳು ಹಾಗೂ ತಹಶೀಲ್ದಾರರಾದ ವಾಸುದೇವ ಸ್ವಾಮಿ, ಡಾ.ಪ್ರದೀಪಕುಮಾರ, ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ ಸೇರಿದಂತೆ ಚುನಾವಣಾ ಅಭ್ಯರ್ಥಿಗಳು ಅಥವಾ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ದೌರ್ಜನ್ಯದಿಂದ ನೊಂದ 15 ಸಂತ್ರಸ್ತರಿಗೆ ಪರಿಹಾರ: ಡಿಸಿ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ

ಜಿಲ್ಲೆಯ ವಿವಿಧ ತಾಲ್ಲೂಕು ವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ 15 ಸಂತ್ರಸ್ತರಿಗೆ ಜಾತಿ ನಿಂದನೆ, ಹಲ್ಲೆ , ಲೈಂಗಿಕ ಕಿರುಕುಳ ವಿವಿಧ ಪ್ರಕರಣಗಳಲ್ಲಿನ ಸಂತ್ರಸ್ತರಿಗೆ ಒಟ್ಟು 26,55,000 ನ್ಯಾಯಯುತವಾಗಿ ಶೀಘ್ರ ಪರಿಹಾರ ಧನ ಒದಗಿಸಲಾಗಿದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಗುರುವಾರ ಆಯೋಜಿಸಲಾಗಿದ್ದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ದೌರ್ಜನ್ಯ ಕುರಿತ ಜಿಲ್ಲಾ ಮಟ್ಟದ ಜಾಗೃತಿ ಹಾಗೂ ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಜಾತಿ ನಿಂದನೆ, ಹಲ್ಲೆ, ಲೈಂಗಿಕ ಕಿರುಕುಳ ಮತ್ತು ಜಮೀನು ವಿವಾದ ಸೇರಿದಂತೆ ಹೆಚ್ಚಿನ ಪ್ರಕರಣಗಳು ದಾಖಲಾಗುತ್ತಿವೆ. ಅದರಲ್ಲೂ ಜಮೀನು ವಿವಾದಕ್ಕೆ ಸಂಬಂಧಿಸಿದ ಪ್ರಕರಣಗಳೇ ಹೆಚ್ಚಾಗಿವೆ. ಪ್ರಸಕ್ತ ಸಾಲಿನ ಕಳೆದ 3 ತಿಂಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ದೌರ್ಜನ್ಯ ಕಾಯ್ದೆಯಡಿ ಜಿಲ್ಲೆಯ ಹೊಸಪೇಟೆ ತಾಲೂಕಿನಲ್ಲಿ 5, ಹರಪನಹಳ್ಳಿ, ಕೂಡ್ಲಿಗಿ ತಾಲೂಕಿನಲ್ಲಿ ತಲಾ 1, ಹಡಗಲಿ ತಾಲೂಕಿನಲ್ಲಿ 2 ಮತ್ತು ಡಿ ಸಿ ಆರ್ ಇ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ 4 ಪ್ರಕರಣ ಸೇರಿ ಒಟ್ಟು 13 ಪ್ರಕರಣ ದಾಖಲಾಗಿದ್ದು , 7 ಪ್ರಕಾರಣಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಲಾಗಿದೆ. ಇನ್ನೂ ಉಳಿದವುಗಳು ತನಿಖಾ ಹಂತದಲ್ಲಿ ಬಾಕಿ ಇವೆ.

ಹಾಗೆಯೇ ಕಳೆದ 3 ತಿಂಗಳಲ್ಲಿ ಹೊಸಪೇಟೆ ತಾಲ್ಲೂಕಿನಲ್ಲಿ ದಾಖಲಾದ 2 ಪ್ರಕರಣ, ಕೂಡ್ಲಿಗಿ ತಾಲೂಕಿನಲ್ಲಿ ಡಿ ಸಿ ಆರ್ ಇ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ 2 ಪ್ರಕರಣ ಸೇರಿ ಒಟ್ಟು 5 ಪ್ರಕರಣಗಳಿಗೆ ದೋಷಾರೋಪ ಪಟ್ಟಿ ಸಲ್ಲಿಸಲಾಗಿದೆ. 2025 ಡಿಸೆಂಬರ್ ನಿಂದ ಮಾರ್ಚ್ 18ರವರೆಗೆ ಬಳ್ಳಾರಿ ಮತ್ತು ವಿಜಯನಗರ ಎರಡೂ ಜಿಲ್ಲೆಗಳಲ್ಲಿ ದಾಖಲಾದ 97 ಪ್ರಕರಣಗಳು ನ್ಯಾಯಾಲಯದಲ್ಲಿ ಬಾಕಿ ಇದ್ದು, ಯಾವುದೇ ಪ್ರಕರಣಗಳು ಇತ್ಯರ್ಥವಾಗಿರುವುದಿಲ್ಲ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.


ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ, ಅವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ದೌರ್ಜನ್ಯ ತಡೆ ಕಾಯ್ದೆ ಕುರಿತು ಜಿಲ್ಲಾದ್ಯಂತ ನಿರಂತರವಾಗಿ ಜಾಗೃತಿ ಕಾರ್ಯಗಾರ, ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಆದರೂ ಇಂತಹ ಪ್ರಕರಣಗಳು ದಾಖಲಾಗುತ್ತಿವೆ, ಎಂದು ಬೇಸರಿಸಿದರು. ಗ್ರಾಮೀಣ ಭಾಗದಲ್ಲಿ ಇಂತಹ ಪ್ರಕರಣಗಳು ಹೆಚ್ಚಾಗಿ ಕಂಡು ಬರುತ್ತಿದೆ. ಆದ್ದರಿಂದ ದೌರ್ಜನ್ಯ ತಡೆ ಕಾಯ್ದೆ ಬಗ್ಗೆ ಗ್ರಾಮೀಣ ಭಾಗದಲ್ಲಿ ಸ್ಥಳೀಯ ಸಂಸ್ಥೆಗಳಲ್ಲಿ ಸಾರ್ವಜನಿರಿಗೆ ಬೀದಿ ನಾಟಕ, ಜಾಗೃತಿ ಅಥವಾ ಅರಿವು ಮೂಡಿಸುವ ಕಾರ್ಯಗಾರ ಆಯೋಜಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶಿಸಿದರು. ಕೆಲವರು ಈ ಕಾಯ್ದೆಯನ್ನು ಬಂಡವಾಳವಾಗಿಸಿಕೊಂಡು ದುರ್ಬಳಕೆ ಮಾಡಿಕೊಳ್ಳಬಾರದು. ಅಂತಹ ಪ್ರಕರಣ ಕಂಡು ಬಂದಲ್ಲಿ ಸಂಬಂಧಪಟ್ಟವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ ಅವರು, ಮುಂದಿನ ದಿನಗಳಲ್ಲಿ ಪ್ರಕರಣಗಳ ಸಂಖ್ಯೆ ಕಡಿಮೆಗೊಳಿಸಲು ಅಧಿಕಾರಿಗಳು ಶ್ರಮಿಸಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ದಾಖಲಾಗಿರುವ ದೌರ್ಜನ್ಯ ಪ್ರಕರಣಗಳನ್ನು ವಿಳಂಬ ಮಾಡದೆ ತನಿಖೆ ನಡೆಸಿ, ನಿಗದಿತ ಅವಧಿಯೊಳಗೆ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಬೇಕು. ಸಂತ್ರಸ್ತರಿಗೆ ಸರ್ಕಾರದಿಂದ ಸಿಗಬೇಕಾದ ಪರಿಹಾರ ಧನವನ್ನು ಯಾವುದೇ ವಿಳಂಬವಿಲ್ಲದೆ ತಲುಪಿಸಬೇಕು, ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಗ್ರಾಮೀಣ ಭಾಗಗಳಲ್ಲಿ

ಇಂದಿಗೂ ಅಲ್ಲಲ್ಲಿ ಕೇಳಿಬರುತ್ತಿರುವ ಅಸ್ಪೃಶ್ಯತೆ ಆಚರಣೆ ಮತ್ತು ಸಾಮಾಜಿಕ ಬಹಿಷ್ಕಾರದಂತಹ ಪಿಡುಗುಗಳನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಬೇಕು. ಇಂತಹ ಘಟನೆಗಳು ಕಂಡುಬಂದಲ್ಲಿ ತಕ್ಷಣವೇ ಸ್ಥಳಕ್ಕೆ ಭೇಟಿ ನೀಡಿ ತಪ್ಪಿತಸ್ಥರ ಮೇಲೆ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಈ ನಿಟ್ಟಿನಲ್ಲಿ ಸ್ಥಳೀಯ ಆಡಳಿತ ಸಂಸ್ಥೆಗಳು ಎಚ್ಚರವಹಿಸಿ ಕಾರ್ಯನಿರ್ವಹಿಸಬೇಕು. ಪರಿಶಿಷ್ಟ ಜಾತಿ ಮತ್ತು ಪಂಗಡದ ಕಾಲೋನಿಗಳಿಗೆ ಅಗತ್ಯವಿರುವ ಕುಡಿಯುವ ನೀರು, ರಸ್ತೆ ಹಾಗೂ ಸ್ಮಶಾನ ಭೂಮಿಯ ಸಮಸ್ಯೆಗಳನ್ನು ಆದ್ಯತೆಯ ಮೇರೆಗೆ ಬಗೆಹರಿಸಬೇಕು. ಮೂಲಸೌಕರ್ಯ ವಂಚಿತ ಪ್ರದೇಶಗಳ ಪಟ್ಟಿ ಸಿದ್ಧಪಡಿಸಿ ಅನುದಾನದ ಸಮರ್ಪಕ ಬಳಕೆ ಮಾಡಿಕೊಳ್ಳಲು ನಿರ್ದೇಶಿಸಿದರು.

ಸಭೆಯಲ್ಲಿ ಹಾಜರಿದ್ದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಾಹ್ನವಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ವೈ.ಎ ಕಾಳೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಪಟ್ಟಣದಲ್ಲಿ ಗಂಡು ಭ್ರೂಣ ಪತ್ತೆ



**ಗುರುಮಠಕಲ್:** ಪಟ್ಟಣದ ಉಪ್ಪರಗಡ್ಡ ಬಡಾವಣೆಯಲ್ಲಿ ಅಪರಿಚಿತ ಸುಮಾರು 6 ತಿಂಗಳ ಗಂಡು ಭ್ರೂಣವನ್ನು ಮನೆಯ ಹಿಂದಿನ ಖಾಲಿ ಜಾಗದಲ್ಲಿ ಬಿಟ್ಟು ಹೋಗಿರುವ ಘಟನೆ ಶುಕ್ರವಾರ ಬೆಳಕಿಗೆ ಬಂದಿದೆ. ಈ ಘಟನೆ ಸ್ಥಳೀಯ ನಿವಾಸಿಗಳಲ್ಲಿ ಆತಂಕವನ್ನು ಉಂಟುಮಾಡಿದೆ.

ಸುದ್ದಿ ತಿಳಿದ ತಕ್ಷಣ ಸ್ಥಳಕ್ಕೆ ಶಿಶು ಅಭಿವೃದ್ಧಿ ಇಲಾಖೆ, ಆರೋಗ್ಯ ಇಲಾಖೆ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಪ್ರಕರಣಕ್ಕೆ ಸಂಬಂಧಿಸಿದಂತೆ ಇನ್ನೂ ಯಾವುದೇ ಸ್ಪಷ್ಟ ಮಾಹಿತಿ ಲಭ್ಯವಾಗಿಲ್ಲ ಎಂದು ತಿಳಿದು ಬಂದಿದೆ.

ಪೊಲೀಸ್ ಇಲಾಖೆ ಮಾಹಿತಿಯ ಪ್ರಕಾರ, ಮೃತ ಗಂಡು ಭ್ರೂಣವನ್ನು ಮರಣೋತ್ತರ ಪರೀಕ್ಷೆಗಾಗಿ ಯಾದಗಿರಿ ಜಿಲ್ಲಾ ಕೇಂದ್ರಕ್ಕೆ ರವಾನೆ ಮಾಡಲಾಗಿದೆ. ಘಟನೆಗೆ ಸಂಬಂಧಿಸಿದಂತೆ ತನಿಖೆ ಮುಂದುವರೆದಿದೆ.

ಇದೇ ವೇಳೆ, ಕಳೆದ ಎರಡು ತಿಂಗಳಲ್ಲಿ ಇದು ಎರಡನೇ ಪ್ರಕರಣವಾಗಿರುವುದು ಸಾರ್ವಜನಿಕರಲ್ಲಿ ಇನ್ನಷ್ಟು ಆತಂಕ ಹುಟ್ಟಿಸಿದೆ. ಈ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರನ್ನು ಪತ್ತೆಹಚ್ಚಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

# ಕುಡಿಯುವ ನೀರಿನ ಕಾಮಗಾರಿ ಸರಿಪಡಿಸಲು ಒತ್ತಾಯ



**ಯಲಬುರ್ಗಾ :** ಕುಡಿಯುವ ನೀರಿಗಾಗಿ ಅಮೃತ ಯೋಜನೆಯಿಂದ 7 ಮತ್ತು 8 ವಾರ್ಡಗಳು ಸೇರಿದಂತೆ ಇತರ ವಾರ್ಡುಗಳಲ್ಲಿ ಕುಡಿಯುವ ನೀರಿಗಾಗಿ ಕಾಮಗಾರಿ ಪ್ರಾರಂವಾಗಿದೆ. ಆದರೆ ಪೈಪುಗಳ ಜೋಡನೆಗಾಗಿ ಅಗೆದು ತಗೆದಿರುವ ರಸ್ತೆ ಈಗ ತಗ್ಗು ಗುಂಡಿಗಳಾಗಿ ಪರಿವರ್ತನೆಯಾಗಿವೆ ಅಲ್ಲದೆ ಸರಿಯಾಗಿ ರಸ್ತೆ ಮೇಲೆ ಹೊಂದಿಸಿರುವ ಪೆವರ್ಸಗಳನ್ನು ಕಿತ್ತುಹಾಕಿ ಪೈಪುಗಳನ್ನು ಅಳವಡಿಸಲಾಗಿದೆ ಇದರಿಂದ ಸಮತಟ್ಟವಾದ ರಸ್ತೆಗಳು ಕಿತ್ತು ಹೋಗಿವೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗು ಹಸಿರು ಸೇನೆ ಯಲಬುರ್ಗಾ ತಾಲೂಕು ಅಧ್ಯಕ್ಷ ಶರಣಬಸಪ್ಪ ದಾನಕೈ ಅವರು ಸರಿಪಡಿಸಲು ಅಗ್ರಹಿಸಿದ್ದಾರೆ. ಇದರಿಂದ ವಯೋವೃದ್ದರು, ಚಿಕ್ಕಮಕ್ಕಳು,ಹಾಗು ರೈತಾಪಿ ಜನ ಜಾನುವಾರುಗಳಿಗೆ ತೊಂದರೆಯಾಗುತ್ತದೆ ಮತ್ತು ರಾತ್ರಿ ಸಮಯದಲ್ಲಿ ಕರೆಂಟ ಹೋದಾಗ ಬಿದ್ದು ಎದ್ದಿರುವ ಪ್ರಸಂಗಗಳು ಜರುಗಿವೆ, ಸಂಬಂಧಿಸಿದ ದವರು ಸರಿಪಡಿಸಲು ಕರ್ನಾಟಕ ರಾಜ್ಯ ರೈತ ಸಂಘ ಹಾಗು ಹಸಿರು ಸೇನೆ ಯಲಬುರ್ಗಾ ತಾಲೂಕು ಅಧ್ಯಕ್ಷ ಶರಣಬಸಪ್ಪ ದಾನಕೈ ಅವರು ಒತ್ತಾಯಿಸಿದ್ದಾರೆ.



**ಕೇರಳ ಚುನಾವಣೆ ಪ್ರಚಾರದಲ್ಲಿರುವ ಸಚಿವ ಜಮೀರ್ ಅಹಮದ್ ಖಾನ್ ಅವರನ್ನು ಕ್ಯಾಲಿ ಕಟ್ ನ ಬೇಪೂರ್ ವಿಧಾನ ಸಭೆ ಕ್ಷೇತ್ರದ ಯು ಡಿ ಎಫ್ ಅಭ್ಯರ್ಥಿ ಪಿ. ವಿ. ಅನ್ವರ್ ಪರ ಪ್ರಚಾರಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು.**

# ಕೇಂದ್ರ ಸರ್ಕಾರದಿಂದ ಪಿಕ್ ಪಾಕೆಟ್



• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

"ಚುನಾವಣೆ ಮುಗಿದ ತಕ್ಷಣ ಮತ್ತೆ ಕೇಂದ್ರ ಸರ್ಕಾರ ಪೆಟ್ರೋಲ್, ಡಿಸೇಲ್ ಬೆಲೆ ಹೆಚ್ಚಳ ಮಾಡಲಿದೆ. ಈ ರೀತಿ ಹಿಂದೆಯೂ ಮಾಡಿದ್ದಾರೆ. ಇದೆಲ್ಲವೂ ಚುನಾವಣೆ ಗಿಮಿಕ್" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ಕೆಪಿಸಿಸಿ ಕಚೇರಿಯಲ್ಲಿ ಶುಕ್ರವಾರ ನಡೆದ ಮಾಧ್ಯಮಗೋಷ್ಠಿಯಲ್ಲಿ ಹಾಗೂ ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು.

"ಕೇಂದ್ರ ಸರ್ಕಾರ ದಿನಕ್ಕೆ 1 ಸಾವಿರ ಕೋಟಿ ಹೆಚ್ಚುವರಿ ತೆರಿಗೆಯನ್ನು ಸಂಗ್ರಹ ಮಾಡುತ್ತಿದೆ. ಇದು ಯಾರಿಗೆ ತಲುಪುತ್ತಿದೆ. ಈ ಹಿಂದೆ ಇಂಧನಗಳ ಬೆಲೆ ಹೆಚ್ಚಿಸಿದಾಗ 100 ನಾಟ್ ಔಟ್ ಎಂದು ಹೋರಾಟ ಮಾಡಿದ್ದೆವು. ಈಗ ಅವರಿಗೆ ಬೇಕಾದಂತಹ ಕಂಪೆನಿಗಳಿಗೆ ಅನುಕೂಲವಾಗಲು ಟ್ರಯಲ್ ರನ್ ಮಾಡುತ್ತಿದ್ದಾರೆ" ಎಂದರು.

"ಅಂತರರಾಷ್ಟ್ರೀಯ ಮಟ್ಟದಲ್ಲಿ ಕಚ್ಚಾ ತೈಲ ಬೆಲೆ ಏರಿಕೆಯಾಗಿದೆ. ನಮ್ಮ ರಾಜ್ಯದ ಗ್ರಾಹಕರಿಗೆ ಅನಿಲ ಸಿಲಿಂಡರ್ ಅನ್ನು ಸರಿಯಾದ ರೀತಿಯಲ್ಲಿ ನೀಡಲು ಕೇಂದ್ರಕ್ಕೆ ಆಗುತ್ತಿಲ್ಲ"ಎಂದರು.

**ಅಡುಗೆ ಅನಿಲ ಹಂಚಿಕೆಯಲ್ಲಿ ದಕ್ಷಿಣ ಭಾರತಕ್ಕೆ ಮೋಸ:** "ಹೊರ್ಮುಜ್ ದಾಟಿ ಎರಡು ಹಡಗುಗಳು ದೇಶಕ್ಕೆ ಬಂದವು. ಅದರಲ್ಲಿ ಒಂದನ್ನು ದಕ್ಷಿಣಕ್ಕೆ ಅಂದರೆ ಕರ್ನಾಟಕ,ತಮಿಳುನಾಡಿಗೆ ಕಳುಹಿಸಬಹುದಿತ್ತಲ್ಲವೇ? ಗುಜರಾತಿಗೆ ಏಕೆ ಹೋದವು. ಈಗ ಕೇರಳ, ತಮಿಳುನಾಡಿನಲ್ಲಿ ಚುನಾವಣೆಗಳಿವೆ. ದಕ್ಷಿಣದ ರಾಜ್ಯಗಳಲ್ಲಿ ಅವರ ಪ್ರಭಾವ ಇಲ್ಲ ಎನ್ನುವ ಕಾರಣಕ್ಕೆ ದಕ್ಷಿಣ ಭಾರತವನ್ನ ಕೆಟ್ಟ ದೃಷ್ಟಿಯಿಂದ ನೋಡುತ್ತಿದ್ದಾರೆ" ಎಂದರು.

"ಈ ಹಿಂದೆ ಎಲ್ಲಾ ಪೆಟ್ರೋಲ್ ಬಂಕ್ ಗಳಲ್ಲಿ ಮುಸಲ್ಮಾನ ಹೆಣ್ಣುಮಗಳು ಗ್ಯಾಸ್ ನೀಡಿದ್ದಕ್ಕೆ ಧನ್ಯವಾದ ಹೇಳುತ್ತಿರುವ ಹೋರ್ಡಿಂಗ್ ಇರುತ್ತಿತ್ತು. ಈಗ ಏಕೆ ಅದನ್ನೆಲ್ಲಾ ತೆಗೆದು ಹಾಕಿದ್ದಾರೆ. ಕೇಂದ್ರ ಸರ್ಕಾರ ಪ್ರತಿದಿನ ಗ್ರಾಹಕರ ಪಿಕ್ ಪಾಕೆಟ್ ಮಾಡುತ್ತಿದೆ"ಎಂದರು.


"2014, 26 ಮೇ ತಿಂಗಳಿಂದ ಪೆಟ್ರೋಲ್,ಡೀಸೆಲ್ ಬೆಲೆ ಹೆಚ್ಚಾಗುತ್ತಾ ಹೋಯಿತು. ಪೆಟ್ರೋಲ್ 71, ಡೀಜೆಲ್ ಅನ್ನು 56 ರೂಪಾಯಿಗೆ ನೀಡಲಾಗುತ್ತಿತ್ತು. ಈಗ 103 ರೂಪಾಯಿ ಆಗಿದೆ. ಕಚ್ಚಾ ತೈಲಬೆಲೆ ಕಡಿಮೆ ಇದ್ದರೂ ನಮ್ಮಲ್ಲಿ ಬೆಲೆ ಹೆಚ್ಚಳಕ್ಕೆ ಏನು ಕಾರಣ" ಎಂದು ಪ್ರಶ್ನಿಸಿದರು.

**ತೈಲಬೆಲೆ ಇಳಿಕೆ;** ಭಾರತ ಸರ್ಕಾರ ಕೊಲೆ ಮಾಡುತ್ತಿದೆ. ಕೇಂದ್ರ ಸರ್ಕಾರ ಇಂಧನ ತೈಲದ ಮೇಲಿನ ವಿಶೇಷ ಹೆಚ್ಚುವರಿ ಅಬಕಾರಿ ಸುಂಕ' (special additional excise duty) ಇಳಿಕೆ ಬಗ್ಗೆ ಕೇಳಿದಾಗ, "ಭಾರತ ಸರ್ಕಾರ ನಮ್ಮನ್ನ ಕೊಲೆ ಮಾಡುತ್ತಿದೆ. ಚುನಾವಣೆಗಾಗಿ ತೈಲ ಬೆಲೆ ಕಡಿಮೆ ಮಾಡಿದ್ದಾರೆ. ನಯಾರ ಕಂಪನಿಯವರು ಇಂಧನ ಬೆಲೆಯನ್ನು ಹೆಚ್ಚಳ ಮಾಡಿದ್ದಾರೆ" ಎಂದು ಹರಿಹಾಯ್ದರು.

ರಾಜ್ಯ ಸರ್ಕಾರ ತೈಲ ಬೆಲೆ ಕಡಿಮೆ ಮಾಡಲಿದೆಯೇ ಎಂದು ಕೇಳಿದಾಗ, "ಆನಂತರ ಇದರ ಬಗ್ಗೆ ಮಾತನಾಡುತ್ತೇವೆ" ಎಂದರು.

## ಅರಣ್ಯಭೂಮಿ ಮರುವಶಕ್ಕೆ 64ಎ ಪ್ರಕ್ರಿಯೆ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**



ಬೆಂಗಳೂರು ಉತ್ತರ ತಾಲೂಕು ಜಾರಕಬಂಡೆ ಶ್ರೀಗಂಧದ ಕಾವಲ್ ನಲ್ಲಿ ವಾಯುಪಡೆಯ ವಶದಲ್ಲಿರುವ 444 ಎಕರೆ ಅರಣ್ಯಭೂಮಿಯ ಮರು ವಶಕ್ಕೆ ಕೂಡಲೇ ಕರ್ನಾಟಕ ಅರಣ್ಯ ಕಾಯಿದೆ 1963ರ ಸೆಕ್ಷನ್ 64 ಎ ಅಡಿ ಪ್ರಕ್ರಿಯೆ ಆರಂಭಿಸಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಲಿಖಿತ ಸೂಚನೆ ನೀಡಿದ್ದಾರೆ.

ಈ ಸಂಬಂಧ ಅಪರ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಎರಡು ಪ್ರತ್ಯೇಕ ಸೂಚನೆ ನೀಡಿರುವ ಅವರು, ಜಾರಕಬಂಡೆ ಕಾವಲ್ ಅರಣ್ಯ ಪ್ರದೇಶದಲ್ಲಿ ವಾಯುಪಡೆಗೆ ನೀಡಲಾಗಿದ್ದ 452ಎಕರೆ 4½ಗಂಟೆ ಭೂ ಮಂಜೂರಾತಿಯನ್ನು ರಾಜ್ಯ ಸರ್ಕಾರ 2017ರ ಅಕ್ಟೋಬರ್ 09ರಂದು ರದ್ದುಗೊಳಿಸಿದ್ದು, ಇದನ್ನು ಅತ್ಯಗತ್ಯವಾದ ಶ್ವಾಸತಾಣವಾಗಿ ಉಳಿಸಲು ತೀರ್ಮಾನಿಸಲಾಗಿದ್ದು, ಕೂಡಲೇ ತೆರವಿಗೆ ಕ್ರಮ ವಹಿಸುವಂತೆ ಸೂಚಿಸಿದ್ದಾರೆ. ಅರಣ್ಯ ಕಾಯ್ದೆ–1980 ರಡಿಯಲ್ಲಿ ನಿಯಮಾನುಸಾರ ಅರ್ಜಿ ಸಲ್ಲಿಸಿ ಪರ್ಯಾಯ ಭೂಮಿ ನೀಡುವಂತೆ ತಿಳಿಸಿದ್ದರೂ ವಾಯುಪಡೆ ನಿಯಮ ಉಲ್ಲಂಘಿಸಿದೆ. ಈ ನಿಟ್ಟಿನಲ್ಲಿ 64ಎ ನೋಟಿಸ್ ನೀಡಿ ಒತ್ತುವರಿ ತೆರವು ಮಾಡಿಸಲು ಸೂಚಿಸಿದ್ದಾರೆ. ಈ ಜಮೀನಿಗೂ ವಾಯುಪಡೆಗೂ ಯಾವುದೇ ಸಂಬಂಧ ಇರುವುದಿಲ್ಲ ಎಂದು ಸ್ಪಷ್ಟಪಡಿಸಿರುವ ಈಶ್ವರ ಖಂಡ್ರೆ, ಇನ್ನು ಮುಂದೆ ಸದರಿ ಪ್ರದೇಶದಲ್ಲಿ ಅನಿವಾರ್ಯವಾಗಿ ಯಾವುದೇ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿ ಕೈಗೊಳ್ಳುವಾಗ ನಿಯಮಾನುಸಾರ ಅರಣ್ಯ ಇಲಾಖೆಯಿಂದ ಅನುಮತಿ ಪಡೆಯುವಂತೆ ಸುತ್ತೋಲೆ ಹೊರಡಿಸಲು ಮತ್ತು ಎಲ್ಲ ಇಲಾಖೆಗಳಿಗೂ ಮಾಹಿತಿ ನೀಡಲು ಕ್ರಮ ವಹಿಸುವಂತೆಯೂ ನಿರ್ದೇಶನ ನೀಡಿದ್ದಾರೆ.

## ರಾಜರ ಗಜಪಡೆಯ ಉಬ್ಬು ಶಿಲ್ಪ ಪತ್ತೆ..!

• **ಮಲ್ಲಮ್ಮ ನುಡಿ ವಾರ್ತೆ ವಿಜಯಪುರ**

ವಿಜಯಪುರ ಜಿಲ್ಲೆಯ ಗೌಡಗೆರೆ ಹಳ್ಳಿಯಲ್ಲಿ ಎದುರು –ಬದುರು ನಿಂತು ಕಾಳಗ ಮಾಡುವ ಮದಗಜಗಳ ಅಪರೂಪದ ಉಬ್ಬು ಶಿಲ್ಪ ಪತ್ತೆಯಾಗಿದ್ದು, ರಾಷ್ಟ್ರೀಯ ಸಂಶೋಧನಾ ವೇದಿಕೆಯಿಂದ ಹಮ್ಮಿಕೊಂಡಿದ್ದ ಕ್ಷೇತ್ರ ಕಾರ್ಯದಲ್ಲಿ ಉಬ್ಬು ಶಿಲ್ಪವನ್ನು ಸಂಶೋಧಿಸಲಾಗಿದೆ ಎಂದು ಇತಿಹಾಸ ಸಂಶೋಧಕ ಹಾಗೂ ರಾಷ್ಟ್ರೀಯ ಸಂಶೋಧನಾ ವೇದಿಕೆ ಅಧ್ಯಕ್ಷ ಲಾಯಪ್ಪ ಇಂಗಳೆ ತಿಳಿಸಿದ್ದಾರೆ.

ಇದೇ ಮೊದಲ ಬಾರಿಗೆ ಇಂತಹ ಅಪರೂಪದ ಶಿಲ್ಪ ಪತ್ತೆಯಾಗಿದ್ದು, ಇದನ್ನು ದೇವಗಿರಿ ಯಾದವರು ಎಂದು ಹೆಸರುವಾಸಿಯಾದ ಸೇವುಣರ ರಾಜ್ಯಧಾನಿ ಗೌಡಗೆರೆ ಹಳ್ಳಿಗೆ ಸೇರಿದ ಕೋಟೆಯಲ್ಲಿ ಕೆತ್ತಲಾದ ಮದಗಜಗಳ ಉಬ್ಬು ಶಿಲ್ಪವು ರಾಜಧಾನಿ ರಕ್ಷಣೆಗೆ ಶಕ್ತಿಶಾಲಿ ಗಜಪಡೆ, ಮತ್ತು ರಕ್ಷಣಾ ವ್ಯವಸ್ಥೆ ಹೊಂದಿರುವುದಕ್ಕೆ ಸಾಕ್ಷಿಯಾಗಿದೆ ಎಂದು ಮಾಹಿತಿ ನೀಡಿದಾರೆ.



ಈ ಸಂದರ್ಭದಲ್ಲಿ ಬಸವರಾಜ ಕುಬಕಡ್ಡಿ, ಉಮೇಶ ಶಿವಶರಣ ಭೀಮರಾಯ ಕುಂಟೋಜಿ ಪ್ರಶಾಂತಗೌಡ ಪಾಟೀಲ ಉಪಸ್ಥಿತರಿದ್ದರು.

# ಉಪ ಚುನಾವಣೆ: ಸಿಎಂ, ಡಿಸಿಎಂ ಕುರ್ಚಿ ಕದನದ ಕರಿ ಛಾಯೆ

• **ಮಲ್ಲಮ್ಮ ನುಡಿ ವಾರ್ತೆ ದಾವಣಗೆರೆ**

ರಾಜ್ಯ ಸರ್ಕಾರದ ಎರಡೂವರೆ ವರ್ಷದ ಆಡಳಿತದಿಂದ ಜನರು ಭ್ರಮನಿರಸನಗೊಂಡಿದ್ದಾರೆ. ಸಿಎಂ, ಡಿಸಿಎಂ ನಡುವಿನ ಕುರ್ಚಿ ಕದನದ ಕರಿ ಛಾಯೆ ದಾವಣಗೆರೆ ಉಪ ಚುನಾವಣೆ ಮೇಲೆ ಬೀರುತ್ತದೆ. ಬಿಜೆಪಿ ದಾವಣಗೆರೆ ಉಪ ಚುನಾವಣೆಯಲ್ಲಿ ಗೆಲ್ಲುವ ಮೂಕಲ ಇಡೀ ಕರ್ನಾಟಕಕ್ಕೆ ಬರುವ ದಿನಗಳಲ್ಲಿ ರಾಜಕೀಯ ದಿಕ್ಸೂಚಿ ಬದಲಾಯಿಸುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ದಾವಣಗೆರೆ ಬಿಜೆಪಿ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅನಿರೀಕ್ಷಿತವಾಗಿ ಉಪ ಚುನಾವಣೆ ಬಂದಿದೆ. ಕಳೆದ ಎರಡೂವರೆ ವರ್ಷಗಳಲ್ಲಿ ರಾಜಕೀಯವಾಗಿ ಬಹಳಷ್ಟು ಬೆಳವಣಿಗೆಗಳು ಆಗಿವೆ. ಕಳೆದ ಎರಡೂವರೆ ವರ್ಷದ ಆಡಳಿತ ನೋಡಿದಾಗ ಜನರು ಭ್ರಮನಿರಸನಗೊಂಡಿದ್ದಾರೆ. ಯಾವುದೇ ಕ್ಷೇತ್ರದಲ್ಲಿ ಜನಕ್ಕೆ ಈ ಸರಕಾರ ಜೀವಂತವಾಗಿದೆ ಎಂದು ಅನಿಸುತ್ತಿಲ್ಲ, ರೈತ ವಿರೋಧಿ ಸರ್ಕಾರ, ಜನಸಾಮಾನ್ಯರ ಸಮಸ್ಯೆ ಆಲಿಸುವವರಿಲ್ಲದಂತಾಗಿದೆ. ಅಭಿವೃದ್ಧಿಯನ್ನು ಅಲ್ಲಿ ಇಲ್ಲಿ ಸನ್ ಗ್ಲಾಸ್ ಹಿಡಿದು ಹುಡುಕ ಬೇಕಿದೆ. ಭ್ರಷ್ಟಾಚಾರ ವ್ಯಾಪಕವಾಗಿದೆ, ಜನ ಸಾಮಾನ್ಯರು ಭ್ರಷ್ಟಾಚಾರದಲ್ಲಿ ಸಿಲುಕಿ ಒದ್ದಾಡುತ್ತಿದ್ದಾರೆ ಎಂದು ಹೇಳಿದರು.



ಕಳೆದ ಭಾರಿ ಕಾಂಗ್ರೆಸ್ ಅಹಿಂದಾ, ಜಾತಿ ಗಣತಿ ವಿಚಾರಗಳನ್ನು ಇಟ್ಟುಕೊಂಡು ಚುನಾವಣೆ ಮಾಡಿತ್ತು. ಸಿಎಂ ಸಿದ್ದರಾಮಯ್ಯ ಅಹಿಂದಾ ವರ್ಗಗಳನ್ನು ತಮ್ಮ ರಾಜಕೀಯ ಸ್ಥಾನಮಾನ ಪಡೆದುಕೊಳ್ಳಲು ಬಳಸಿಕೊಂಡು, ತಮ್ಮ ರಾಜಕೀಯ ರೊಟ್ಟಿಯನ್ನು ಅಹಿಂದದ ಬೆಂಕಿಯಲ್ಲಿ ಸುಟ್ಟುಕೊಂಡಿದ್ದಾರೆ. ಅಹಿಂದಕ್ಕೆ ಕಿಂಚಿತ್ತೂ ಸಹಾಯವನ್ನು ಮಾಡಿಲ್ಲ, ಅಹಿಂದವನ್ನು ದುರುಪಯೋಗ ಮಾಡಿರುವ ಈ ಸರ್ಕಾರಕ್ಕೆ ಇವತ್ತು ಆ ವರ್ಗದ ಜನರಿಗೆ ಮುಖ ತೋರಿಸುವ ಧೈರ್ಯ ಉಳಿದಿಲ್ಲ. ಆದರೂ, ಭಂಡತನದ ಪ್ರದರ್ಶನ ಅವರು ಮಾಡುತ್ತಿದ್ದಾರೆ.

ಮೊನ್ನೆ ಸಿಎಂ ಸಿದ್ದರಾಮಯ್ಯ ಅವರು ಮಾಡಿದ ಬಜೆಟ್ ಸುಳ್ಳಿನ ಕಂತೆ, ಸುಳ್ಳನ್ನು ಗಟ್ಟಿಯಾಗಿ ಹೇಳಿದರೆ ಸತ್ಯ ಆಗುತ್ತದೆ ಅನ್ನುವ ಸಿದ್ಧಾಂತ ಇಟ್ಟುಕೊಂಡು ಸಿದ್ದರಾಮಯ್ಯ ಮಾತಾಡುತ್ತಿದ್ದಾರೆ ಎಂದು ಆರೋಪಿಸಿದರು.

**ದಾವಣಗೆರೆ ಶೂನ್ಯ ಕೊಡುಗೆ:** ಕಳೆದ ಎರಡೂವರೆ ವರ್ಷದಲ್ಲಿ ದಾವಣಗೆರೆ ರಾಜ್ಯ ಸರ್ಕಾರದ ಕೊಡುಗೆ ಏನು ಎಂದು ಪ್ರಶ್ನಿಸಿದ ಅವರು, ಸ್ಮಾರ್ಟ್ ಸಿಟಿಗೆ 900 ಕೋಟಿ ರೂ. ಕೇಂದ್ರ ಸರ್ಕಾರದಿಂದ ಬಂದಿದೆ. ಅದು ರಾಜ್ಯ ಸರ್ಕಾದಲ್ಲ. ಅದನ್ನು ಬಿಟ್ಟರೆ ಇಲ್ಲಿ ಹೇಳಿಕೊಳ್ಳುವ ಅಭಿವೃದ್ಧಿ ಆಗಿಲ್ಲ. ದಾವಣಗೆರೆ ಕರ್ನಾಟಕದ ಮಧ್ಯ ಭಾಗದಲ್ಲಿರುವ ಒಂದು ಪ್ರಮುಖ ವಾಣಿಜ್ಯ ಕೇಂದ್ರ ದಾವಣಗೆರೆ ಗತವೈಭವ ತುಂಬಾ ಇದೆ. ನಗರ ಪ್ರದೇಶದಲ್ಲಿ ಯಾವುದೇ ಅಭಿವೃದ್ಧಿ ಕಾಣುತ್ತಿಲ್ಲ. ಪ್ರಥಮ ಭಾರಿ ದಾವಣಗೆರೆಯಲ್ಲಿ ಸಾಮಾಜಿಕ ಸಮೀಕರಣ ಆಗುತ್ತದೆ

ಯಾವುದು ಕಾಂಗ್ರೆಸ್ ವೋಟ್ ಬ್ಯಾಂಕ್ ಅಂರ ತಿಳಿದುಕೊಂಡಿದ್ದರು ಅದು ಈಗ ಉಳಿದಿಲ್ಲ, ಸಾಮಾಜಿಕವಾಗಿ ಸಮೀಕರಣ ಆಗುತ್ತದೆ, ರಾಜಕೀಯವಾಗಿ ಧ್ರುವೀಕರಣ ಆಗುತ್ತದೆ. ಬಿಜೆಪಿ ದಾವಣಗೆರೆ ಉಪ ಚುನಾವಣೆಯಲ್ಲಿ ಗೆಲ್ಲುವ ಮೂಕಲ ಇಡೀ ಕರ್ನಾಟಕಕ್ಕೆ ಬರುವ ದಿನಗಳಲ್ಲಿ ರಾಜಕೀಯ ದಿಕ್ಸೂಚಿ ಬದಲಾವಣೆ ಮಾಡುತ್ತದೆ ಎಂದು ಹೇಳಿದರು.

# ಪ್ರಚಂಡರ ಪ್ರತಿಷ್ಠೆಯಾಗಿರುವ ಪಂಚರಾಜ್ಯ ಚುನಾವಣಾ ಕಣ



**ವರ್ತಮಾನ–ಅವಲೋಕನ**

● **ಡಾ.ಎಂ.ಮಹ್ಮದ್ ಬಾಷ ಗೂಳ್ಯಂ**

**ಪ್ರಧಾನ ಸಂಪಾದಕ, ಬೆಂಗಳೂರು**

ಇದೀಗ ಪಂಚ ರಾಜ್ಯಗಳ ವಿಧಾನಸಭಾ ಚುನಾವಣೆಯದ್ದೇ ಸದ್ದು..!

ಅಸ್ಸಾಂನಲ್ಲಿ ರಾಷ್ಟ್ರೀಯ ಪಕ್ಷ ಬಿಜೆಪಿ, ಕಾಂಗ್ರೆಸ್‌ಗೂ ನೇರ ಸ್ಪರ್ಧೆ ಇದೆ. ಬಿಜೆಪಿ ಮತ್ತು ಕಾಂಗ್ರೆಸ್ ನೇತೃತ್ವದ ಮೈತ್ರಿಕೂಟಗಳ ನಡುವೆ ಗುದ್ದಾಟ ಜೋರಾಗಿದೆ. ವಿವಾದಿತ ಹೇಳಿಕೆಗಳ ಮೂಲಕ ಸದಾ ಸುದ್ದಿಯಲ್ಲಿದ್ದ ಮುಖ್ಯಮಂತ್ರಿ ಬಿಜೆಪಿಯ ಹಿಮಂತ ಬಿಸ್ವಾ ಶರ್ಮಾ, ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷ, ಸಂಸದ ಗೌರವ್ ಗೊಗೊಯಿ ನಡುವೆ ವೈಕ್ತಿಕ ಪ್ರತಿಷ್ಠೆಯಾಗಿ ಬದಲಾಗಿದೆ. ಇದು ವಯನಾಡು ಸಂಸದೆ ಪ್ರಿಯಾಂಕಾ ಗಾಂದಿ ಅವರ ರಾಜಕೀಯ ತಂತ್ರಗಾರಿಕೆಗೂ ಪರೀಕ್ಷೆಯಾಗಿದೆ.

ವಿಶೇಷವೆಂದರೆ; ಪ್ರಿಯಾಂಕಾ ಗಾಂಧಿ ಪ್ರಥಮ ಬಾರಿಗೆ ಇಲ್ಲಿ ಚುನಾವಣೆಯಲ್ಲಿ ಪಕ್ಷದ ಉಸ್ತುವಾರಿ ವಹಿಸಿದ್ದಾರೆ. ಅಭ್ಯರ್ಥಿಗಳ ಆಯ್ಕೆ ಸಮಿತಿಯ ಅಧ್ಯಕ್ಷರಾಗಿದ್ದು, ಚುನಾವಣಾ ಪ್ರಚಾರದ ರೂಪುರೇಷೆ ಅವರ ನಾಯಕತ್ವದಲ್ಲೇ ನಡೆದಿದೆ. ಈ ಕಾರಣಕ್ಕೆ ಅಸ್ಸಾಂ ಚುನಾವಣೆ ಪ್ರಿಯಾಂಕಾ ಅವರಿಗೂ ನೇರ ಪ್ರತಿಷ್ಠೆ.

ಅಸ್ಸಾಂನಲ್ಲಿ ಸತತ ಎರಡು ಬಾರಿ ಬಿಜೆಪಿ ಆಡಳಿತ ನಡೆಇಸದೆ. ಸರ್ಬಾನಂದ ಸೋನೋವಾಲ್, ಹಿಮಂತ ಬಿಸ್ವಾ ಶರ್ಮಾ ಕ್ರಮವಾಗಿ ಸಿಎಂ ಆಗಿ ಆಡಳಿತ ನಡೆಸಿದ್ದಾರೆ. ಸೋನೋವಾಲ್ ಕೇಂದ್ರದಲ್ಲಿ ಇದೀಗ ಸಚಿವರು. ಒಂದು ಕಾಲದ ಕಾಂಗ್ರೆಸ್ ಭದ್ರಕೋಟೆ ಈಗ ದುರ್ಬಲ ಆಗಿದ್ದಕ್ಕೆ ಕಾರಣ ನೂರಾರು. ಯಥಾ ಪ್ರಕಾರ, ಬಿಜೆಪಿಗೆ ಹಿಂದುತ್ವದ ಅಜೆಂಡಾವಾದರೆ, ಕಾಂಗ್ರೆಸ್‌ಗೆ ಅಲ್ಪಸಂಖ್ಯಾತರನ್ನು ಓಲೈಸುವ ರಾಜ್ಕೀಯ ಅಂದರೂ ಅಚ್ಚರಿ ಇಲ್ಲ. ಅಸ್ಸಾಮಿನಲ್ಲಿ 126 ವಿಧಾನಸಭಾ ಕ್ಷೇತ್ರಗಳಿವೆ. 25 ವರ್ಷ ಬಳಿಕ ಪ್ರಥಮ ಬಾರಿಗೆ ಒಂದೇ ಹಂತದಲ್ಲಿ ಮತದಾನ. ಅದು ಏಪ್ರಿಲ್ 9 ರಂದು. ಕ್ಷೇತ್ರಗಳ ಪುನರ್ವಿಂಗಡಣೆ ನಂತರ ಪ್ರಥಮ ಅಸೆಂಬ್ಲಿ ಎಲೆಕ್ಷನ್ ನಡೆಯುತ್ತಿದೆ. ಅಸ್ಸಾಂ ಕಾಂಗ್ರೆಸ್‌ನಲ್ಲಿ ಆಂಕರಿಕ ಕಲಹವಿದೆ. ಹಿರಿಯ ನಾಯಕರನ್ನು ಕಡೆಗಣಿಸಿದ ಆರೂಪ ಉಂಟು. ಈ ಕಾರಣಕ್ಕೆ ಕೆಲವು ಪ್ರಮುಖ ನಾಯಕರ ಪಕ್ಷಾಂತರವಾಗಿದ್ದು, ಕೈ ಚುನಾವಣಾ ಪ್ರಣಾಳಿಕೆ ಸಮಿತಿ ಅಧ್ಯಕ್ಷರೇ ಕಮಲ ಹಿಡಿದಿದ್ದು ಗಮನಾರ್ಹ. ಪ್ರದೇಶ ಕಾಂಗ್ರೆಸ್ ಸಮಿತಿ ಮಾಜಿ ಅಧ್ಯಕ್ಷ ಭೂಪೇನ್ ಕುಮಾರ್ ಬೋರಾ ಕಾಂಗ್ರೆಸ್‌ನಲ್ಲಿ 30 ವರ್ಷಗಳಿಂದಲೂ ಇದ್ದರು. ಈಗ ಬಿಜೆಪಿ ಸೇರಿ ಅಭ್ಯರ್ಥಿ.

ಬೋರಾ ಪಕ್ಷತ್ಯಜಿಸಿದ ಬಳಿಕ ನಾಗೌನ್ ಸಂಸದ ಪ್ರದ್ಯುತ್ ಬೋರ್ಡೋಲೈ, ಅಸ್ಸಾಂ ಪ್ರದೇಶ ಕಾಂಗ್ರೆಸ್ ಸಮಿತಿ ಉಪಾಧ್ಯಕ್ಷ ನವಜ್ಯೋತಿ ತಾಲೂಕ್ದಾರ್ ರಿಸೈನ್ ಮಾಡಿರುವುದು ಕೈಗೆ ಭಾರಿ ಹಿನ್ನಡೆ. ಸಂಸದ ಸ್ಥಾನಕ್ಕೂ ರಾಜೀನಾಮೆ ನೀಡಿ ಕಮಲ ಹಿಡಿದ ಹುರಿಯಾಳು..! ಹಿಮಂತ ಆಕ್ರಮಣಶೀಲ ಗುಣಕ್ಕೆ ಮತ್ತೊಂದು ಹೆಸರು. ಮೂಲತಃ ಕಾಂಗ್ರೆಸ್ಸಿಗ. ಬಿಜೆಪಿ ಸೇರಿ ಸಿಎಂ ಆಗಿದ್ದು ಇತಿಹಾಸ. ಹಿಂದುತ್ವದ ವಿಚಾರದಲ್ಲಿ ಬಿಜೆಪಿ ನಾಯಕರನ್ನೂ ಮೀರಿಸುವ ವಾಚಾಳಿ. ಬೇರೆ ಬೇರೆ ಕಾರಣಕ್ಕೆ ಹಿಮಂತ ಬಿಸ್ವಾ ಶರ್ಮಾ ಅವರಲ್ಲಿ ಇಡೀ ಈಶಾನ್ಯ ಭಾರತದ ನಾಯಕನೆಂದು ಬಿಜೆಪಿ ನೆಚ್ಚಿ ಕೂತಿದೆ. ತ್ರಿಪುರಾ, ಮಣಿಪುರ, ಅರುಣಾಚಲ ಪ್ರದೇಶಗಳಲ್ಲೂ ಬಿಜೆಪಿಯ ವಿಜಯದಲ್ಲಿ ಹಿಮಂತನ ಪಾತ್ರವಿದೆ.

ಕಾಂಗ್ರೆಸ್ಸಿನ ಗೌರವ್ ಗೊಗೊಯಿ ವಾಗ್‌ಪಟು. ಯುವ ಸಮೂಹವನ್ನು ಸೆಳೆಯು ಶಕ್ತಿ ಇದೆ. ರಾಹುಲ್ ಗಾಂದಿಗೆ ಮಿತ್ರನೂ ಹೌದು. ಮೂರು ಬಾರಿ ಸಂಸದರು. ಲೋಕಸಭೆಯಲ್ಲಿ ಕಾಂಗ್ರೆಸ್‌ನ ಉಪ ನಾಯಕ. ಅಸ್ಸಾಂ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷ. ಪ್ರಥಮ ಬಾರಿಗೆ ಅಸೆಂಬ್ಲಿ ಚುನಾವಣಾ



ಕಣಕ್ಕೆ ಇಳಿದಿದ್ದು, ಅವರ ತಂದೆ ತರುಣ್ ಗೊಗೊಯಿ ಕಾಂಗ್ರೆಸ್‌ನಿಂದ 2001 ರಿಂದ 16ರ ವರೆಗೆ ಮೂರು ಬಾರಿ ಸಿಎಂ ಆಗಿದ್ದರು. ಈ ಕಾರಣಕ್ಕೆ ಈ ಎಲೆಕ್ಷನ್ ಗೌರವ್‌ಗೂ ಪ್ರತಿಷ್ಠೆಯಾಗಿದೆ. ಹಿಮಂತ ಬಿಸ್ವಾ ಶರ್ಮಾ ಕಾಂಗ್ರೆಸ್ನಲ್ಲಿದ್ದಾಗ ಅಂದಿನ ಸಿಎಂ, ತರುಣ್ ಗೊಗೊಯಿ ಅವರ ಚುರುಕು ಯುವಕ. ತರುಣ್ ಗೊಗೊಯಿ ಬಳಿಕ ಹಿಮಂತ ಸಿಎಂ ಆಗ್ತಾರೆ ಅನ್ನೋ ನಂಬುಗೆ ಇತ್ತು. ತರುಣ್ ಗೊಗೊಯಿ ಪುತ್ರ ಗೌರವ್ ಗೊಗೊಯಿ ಅಮೆರಿಕಾದಲ್ಲಿ ವಿದ್ಯಾಭ್ಯಾಸ ಮುಗಿಸಿ 2011ರಲ್ಲಿ ಸ್ವದೇಶಕ್ಕೆ ವಾಪಸಾದ ಕೂಡಲೇ ಗುರು–ಶಿಷ್ಯರ ನಡುವೆ ಶೀತಲ ಸಮರ. ಕಡೆಗಣಿಸಲಾಗುತ್ತಿದೆ ಎಂದು ಹಿಮಂತ ಬಂಡಾಯವೆದ್ದುದ ಹೊಸವಿಚಾರವಲ್ಲ. ಅನೇಕ ಶಾಸಕರ ಜೊತೆಗೆ 2015ರಲ್ಲಿ ಕಾಂಗ್ರೆಸ್ ತೊರೆದು ಬಿಜೆಪಿಗೆ ಸೇರ್ಪಡೆ. ಆಗ ಸಿಎಂ ಆಗಿದ್ದ ತರುಣ್ ಗೊಗೊಯಿ ಹಿಮವಂತ್‌ಗೂ ನಡೆದ ವಾಕ್ಸಮರ ಈಗ ಅನಗತ್ಯ. ತರುಣ್ ಗೊಗೊಯಿ ಬಳಿಕ ಪುತ್ರ ಗೌರವ್ ಗೊಗೊಯಿ ಹಾಗೂ ಹಿಮಂತ ನಡುವಿನ ವಾಕ್ಸಮರ ಪುಕ್ಕಟೆ ರಾಜಕಿಯ ರಂಜನೆಯಾಗಿದೆ.

ಅಸ್ಸಾಂ ಗಣ ಪರಿಷತ್, ಬೋಡೋ ಲ್ಯಾಂಡ್ ಪೀಪಲ್ಸ್ ಫ್ರಂಟ್ (ಬಿಪಿಎಫ್), ರಭಾ ಹಸಂಗ್ ಜೌಥಾ ಮಂಚ್ (ಆರ್‌ಎಚ್ಜೆಎಂ) ಬಿಜೆಪಿ ಜೊತೆ ಸ್ಥಾನ ಹೊಂದಾಣಿಕೆ ಮಾಡಿಕೊಂಡಿವೆ. ಹಿಮಂತ ಸರಕಾರದಲ್ಲಿ ಅಸ್ಸಾಂ ಗಣ ಪರಿಷತ್ (ಎಜಿಪಿ) ಕೂ ಭಾಗಿ. ಹಿಮಂತ ಬಿಸ್ವಾ ಶರ್ಮಾ ಮಿಯಾ ಮುಸ್ಲಿಂಮರ ವಿರುದ್ಧ ಗುಡಗಿದ್ದಾರೆ. ಮಿಯಾ ಮುಸ್ಲಿಂಮರು ನೆಲೆಸಿರುವ ಜಾಗದಿಂದ ತೆರವುಗೊಳಿಸುತ್ತಿದ್ದಾರೆ. ಹೀಗಿದ್ದರೂ ಬಿಜೆಪಿ ಮಿತ್ರ ಪಕ್ಷ ಅಸ್ಸಾಂ ಗಣ ಪರಿಷತ್ ಮಿಯಾ ಮುಸ್ಲಿಂಮರಿಗೆ ಹೆಚ್ಚಿನ ಸಂಖ್ಯೆಯಲ್ಲಿ ಟಿಕೆಟ್ ಕೊಟ್ಟು ನೂತನ ದಾಳ ಉರುಳಿಸಿದೆ. ಬಿಜೆಪಿಗೆ ಗೊತ್ತಿಲ್ಲದೇ ಮಿತ್ರ ಪಕ್ಷ ಎಜಿಪಿ ಮುಸ್ಲಿಂಮರನ್ನು ಹೆಚ್ಚಿನ ಸಂಖ್ಯೆಯಲ್ಲಿ ಕಣಕ್ಕೆ ಇಳಿಸಲು ಹೇಗೆ ಸಾಧ್ಯ..? ಹಿಮಂತ ಅವರನ್ನು ನಿಯಂತ್ರಿಸಲು ಎಜಿಪಿಯ ಲೆಕ್ಕಾಚಾರವನ್ನು ಗಟ್ಟಿನ ವಿಚಾರವೆಂದು ಭಾವಿಸಬೇಕಿಲ್ಲ. ಅಸ್ಸಾಂ ಸರಕಾರದ ಪ್ರಕಾರವೇ 1.5 ಲಕ್ಷ ಬಿಗಾ ಸರಕಾರಿ ಜಾಗವನ್ನು ಬಾಂಗ್ಲಾ ನುಸುಳುಕೋರರಿಂದ ತೆರವುಗೊಳಿಸಲಾಗಿದೆ. ಆದರೆ ಅವರ ಮಿತ್ರ ಪಕ್ಷ ಅಸ್ಸಾಂ ಗಣ ಪರಿಷತ್ ಬಂಗಾಳಿ ಭಾಷೆ ಮಾತಾಡುವ ಮುಸ್ಲಿಂಮರಿಗೆ ಹೆಚ್ಚಿನ ಸಂಖ್ಯೆಯಲ್ಲಿ ಚುನಾವಣೆಯಲ್ಲಿ ಟಿಕೆಟ್ ನೀಡಿದ್ದೇಕೆ..? ಹಿಮಂತ ಕೂಡ ಮಿಯಾ ಮುಸ್ಲಿಂಮರನ್ನು ಬಿಜೆಪಿ ತನ್ನ ಶತ್ರುಗಳೆಂದು ಭಾವಿಸುವುದಿಲ್ಲ ಎಂದದ್ದನ್ನು ರಾಜಕೀಯ ಎನ್ನಬಹುದೆ? ಕಾಂಗ್ರೆಸ್ ಪಕ್ಷವು ಅಖಿಲ್ ಗೊಗೊಯಿ ನೇತೃತ್ವದ ರಾಯ್ಜೋರ್ ದಳ, ಅಸ್ಸಾಂ ಜತಿಯಾ ಪರಿಷದ್ (ಎಜೆಪಿ), ಸಿಪಿಐ (ಎಂ), ಸಿಪಿಐ (ಎಂಎಲ್), ಆಲ್ ಪಾರ್ಟಿ ಹಿಲ್ ಲೀಡರ್ಸ್ ಕಾನ್ಫರೆನ್ಸ್ ಜೊತೆ ಸಖ್ಯ ಸಾಧಿಸಿದೆ. ಅಸ್ಸಾಮಿನ ಸರಕಾರ ಮೂಲ ಸೌಕರ್ಯಗಳ ಅಭಿವೃದ್ಧಿ ಮತ್ತಿತರ ತನ್ನ ಸಾಧನೆಗಳನ್ನು ಮುಂದಿಟ್ಟಿದೆ. ಅಸ್ಸಾಂನಲ್ಲಿ ಬಿಜೆಪಿಯನ್ನು ಸತತ ಮೂರನೇ ಬಾರಿಗೆ ಚುನಾಯಿಸಿದರೆ ಬಾಂಗ್ಲಾದೇಶಿ ನುಸುಳುಕೋರರನ್ನು ಅಸ್ಸಾಂನಿಂದ ಮಾತ್ರವೇ ಅಲ್ಲ, ದೇಶದಿಂದಲೇ ಹೊರ ಹಾಕುತ್ತೇವೆ ಎಂಬುದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಘೋಷಣೆ. ಹಿಮಂತ ಬಿಸ್ವಾ ಶರ್ಮಾ ಅವರದು ಬುಲ್ಡೋಜರ್ಗಳನ್ನು ತಂದು ಅಕ್ರಮ ವಲಸಿಗರ ನೆಲೆಗಳನ್ನು ಉರುಳಿಸುವ ಘೋಷಣೆ. ಅದೇನೇ ಇರಲಿ, ಅಸ್ಸಾಂ ವಿಧಾನಸಭೆಗೆ 2016ರಲ್ಲಿ ನಡೆದ ಚುನಾವಣೆಯಲ್ಲಿ ಬಿಜೆಪಿ 60, ಕಾಂಗ್ರೆಸ್ 26, ಅಸ್ಸಾಂ ಗಣ ಪರಿಷತ್ 14, ಎಐಯುಡಿಎಫ್ 13, ಬಿಪಿಎಫ್ 12 ಸ್ಥಾನ ಗೆದ್ದಿದ್ದವು. 2021ರ ಎಲೆಕ್ಷನ್‌ನಲ್ಲಿ ಬಿಜೆಪಿ, ಎಜಿಪಿ, ಯುಪಿಪಿಎಲ್ ಮೈತ್ರಿಕೂಟ 75 ಸ್ಥಾನಗಳಲ್ಲಿ ಗೆದ್ದಿದ್ದವು. ಬಿಜೆಪಿ 60, ಕಾಂಗ್ರೆಸ್ 29 ಸ್ಥಾನ ಪಡೆದಿದ್ದವು. ಈ ಬಾರಿ ವಿಜಯ ಲಕ್ಷ್ಮಿ ಯಾರಿಗೆ..? ಉತ್ತರ ಈಗ ಅಸ್ಪಷ್ಟ..!

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)